ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು :
ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 164
13–12–2025 ಶನಿವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 163

# ನನಗೆ ಹೈ ಕಮಾಂಡ್ ಅಭಿಯವಿದೆ

## ಬೆಂಬಲಿಗರಿಗೆ ಧೈರ್ಯ ತುಂಬಿದ ಡಿ.ಕೆ. ಶಿವಕುಮಾರ್

**ಬೆಳಗಾವಿ,ಡಿ.12:** ಅಧಿಕಾರ ಹಸ್ತಾಂತರ ವಿಚಾರವಾಗಿ ರಾಜ್ಯ ಕಾಂಗ್ರೆಸ್ ನಲ್ಲಿ ನಡೆಯುತ್ತಿರುವ ವಿದ್ಯಮಾನಗಳು ಕುತೂಹಲಕರ ಘಟ್ಟ ತಲುಪಿವೆ. ಹೈಕಮಾಂಡ್ ಅಭಯ ತನ್ನ ಮೇಲಿದೆ ಹೀಗಾಗಿ ಯಾರು ಆತಂಕಕ್ಕೆ ಒಳಗಾಗಬೇಡಿ ಧೈರ್ಯದಿಂದ ಇರುವಂತೆ ತಮ್ಮ ಬೆಂಬಲಿಗರಿಗೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಲಹೆ ಮಾಡಿದ್ದಾರೆ.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪುತ್ರ ಹಾಗೂ ವಿಧಾನಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ದರಾಮಯ್ಯ ಅವರು ನಾಯಕತ್ವ ಕುರಿತ ಹೇಳಿಕೆ ನೀಡಿದ ಬೆನ್ನಲ್ಲೇ ಸಿದ್ದರಾಮಯ್ಯ ಅವರು ಭೋಜನಕೂಟ ನಡೆಸಿದ್ದರು. ಇದರೊಂದಿಗೆ ಅಧಿಕಾರ ಹಸ್ತಾಂತರ ಕುರಿತಾದ ರಾಜಕೀಯ ಚಟುವಟಿಕೆಗಳು ತೀವ್ರಸ್ವರೂಪ ಪಡೆದುಕೊಂಡಿದ್ದವು

ಇದರ ಬೆನ್ನಲ್ಲೇ ಇದೀಗ ಉಪಮುಖ್ಯಮಂತ್ರಿಯ ಡಿಕೆ ಶಿವಕುಮಾರ್ ಕೂಡ ಭೋಜನಕೂಟ ರಾಜಕಾರಣ ಆರಂಭಿಸಿದ್ದಾರೆ ಕಳೆದ ರಾತ್ರಿ ಬೆಳಗಾವಿಯ ತಮ್ಮ ಆಪ್ತ ಗಣಿ ಉದ್ಯಮಿ ಹಾಗೂ ಕಾಂಗ್ರೆಸ್ ಮುಖಂಡ ದೊಡ್ಡಣ್ಣವರ್ ಅವರ ಫಾರ್ಮ್ ಹೌಸ್‌ನಲ್ಲಿ ತಮ್ಮ ಆಪ್ತಪಣದ ಶಾಸಕರು ಮತ್ತು ಮಂತ್ರಿಗಳಿಗೆ ಭೋಜನ ಕೂಟ ಆಯೋಜಿಸಿದ್ದರು.

ಇದರಲ್ಲಿ ಎಚ್ ಸಿ ಬಾಲಕೃಷ್ಣ – ಮಾಗಡಿ, ಬಸವರಾಜ್ ಶಿವಗಂಗಾ– ಚನ್ನಗಿರಿ, ಇಕ್ಬಾಲ್ ಹುಸೇನ್ – ರಾಮನಗರ,ಉದಯ ಕೆ ಎಂ – ಮದ್ದೂರು,ಬಾಬಾ ಸಾಹೇಬ್ ಪಾಟೀಲ್ –ಕಿತ್ತೂರು,ಮಹೇಂದ್ರ ತಮ್ಮಣ್ಣ – ಕುಡುಚಿ,ನಯನ ಮೋಟಮ್ಮ – ಮೂಡಿಗೆರೆ,ಎಚ್ ಡಿ ರಂಗನಾಥ್ –ಕುಣಿಗಲ್,ಸಿಪಿ ಯೋಗೇಶ್ವರ್ – ಚನ್ನಪಟ್ಟಣ,ಲಕ್ಷ್ಮಣ ಸವದಿ – ಅಥಣಿ,ಶ್ರೀನಿವಾಸ್ – ನೆಲಮಂಗಲ, ಶಿವಣ್ಣ – ಆನೇಕಲ್,ಎಸ್ ಆರ್ ಶ್ರೀನಿವಾಸ್ – ಗುಬ್ಬಿ,ಪುಟ್ಟಸ್ವಾಮಿ ಗೌಡ – ಪಕ್ಷೇತರ ಶಾಸಕ (ಗೌರಿ ಬಿದನೂರು),ರಮೇಶ್ ಬಂಡಿಸಿದ್ದೇಗೌಡ –ಶ್ರೀರಂಗಪಟ್ಟಣ,ರಾಜೇಗೌಡ – ಶೃಂಗೇರಿ,ಅಶೋಕ್ ರೈ – ಪುತ್ತೂರು,ಎನ್ ಎ ಹ್ಯಾರಿಸ್ – ಶಾಂತಿನಗರ,ಎಚ್ ಡಿ ತಮ್ಮಯ್ಯ – ಚಿಕ್ಕಮಗಳೂರು, ತನ್ವೀರ್ ಸೇಠ್ – ನರಸಿಂಹ ರಾಜ,ಶರತ್ ಬಚ್ಚೇಗೌಡ – ಹೊಸಕೋಟೆ,ಹರೀಶ್ ಗೌಡ –ಚಾಮರಾಜ ಕ್ಷೇತ್ರ,ದರ್ಶನ್ ಧ್ರುವನಾರಾಯಣ್ – ನಂಜನಗೂಡು, ಭೀಮಣ್ಣ ನಾಯ್ಕ್ – ಶಿರಸಿ,ಕೆ. ಷಡಾಕ್ಷರಿ– ತಿಪಟೂರು

ಮಂತರ್ ಗೌಡ, ಮಡಿಕೇರಿ,ಎನ್.ವೈ. ಗೋಪಾಲಕೃಷ್ಣ, ಮೊಳಕಾಲ್ಮೂರು,ಶ್ರೀನಿವಾಸ ಮಾನೆ–ಹಾವೇರಿ, ಕೋನರೆಡ್ಡಿ –ನವಲಗುಂದ,ಅಪ್ಪಾಜಿ ನಾಡಗೌಡ –ಬಾಗಲಕೋಟೆ,ಭರತ್ ರೆಡ್ಡಿ–ಬಳ್ಳಾರಿ, ಶಿವರಾಂ ಹೆಬ್ಬಾರ್,ಎಸ್.ಟಿ.ಸೋಮಶೇಖರ್ ಸಚಿವರಾದ ಮಂಕಾಳ ವೈದ್ಯ,ಡಿ.ಸುಧಾಕರ್ , ರಾಮಲಿಂಗಾರೆಡ್ಡಿ, ಕೆ.ಎಚ್.ಮುನಿಯಪ್ಪ, ಡಾ.ಶರಣಪ್ರಕಾಶ್ ಪಾಟೀಲ್ ಹಾಗೂ 15ಕ್ಕೂ ಹೆಚ್ಚು ವಿಧಾನ ಪರಿಷತ್ ಸದಸ್ಯರು ಈ ಭೋಜನ ಕೂಟದಲ್ಲಿ ಪಾಲ್ಗೊಂಡಿದ್ದರು.

ಈ ಸಭೆಯಲ್ಲಿ ಮಾತನಾಡಿರುವ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ಯಾರೂ ಕೂಡ ಉದ್ವೇಗ ಮತ್ತು ಆವೇಗಕ್ಕೆ ಒಳಗಾಗಿ ಯಾವುದೇ ರೀತಿಯ ಹೇಳಿಕೆಗಳನ್ನು ನೀಡಬಾರದು ಹೈಕಮಾಂಡ್ ಅಭಯ ನನ್ನ ಮೇಲೆ ಇದೆ ಪಕ್ಷದ ಹಿರಿಯ ನಾಯಕಿ ಸೋನಿಯಾ ಗಾಂಧಿ ಕೆಲವು ಸಲಹೆಗಳನ್ನು ನೀಡಿದ್ದಾರೆ ಇದರ ಜೊತೆಗೆ ನಮ್ಮವರೇ ಆದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರೊಂದಿಗೆ ನಿರಂತರ ಸಂಪರ್ಕದಲ್ಲಿ ಇದ್ದೇನೆ ಅವರು ನನಗೆ ಮಾರ್ಗದರ್ಶನ ಮಾಡುತ್ತಿದ್ದಾರೆ ಅದರಂತೆ ಮುಂದುವರಿಯಬೇಕಾಗಿದೆ ಕೆಲವರು ನಿಮ್ಮನ್ನು ಪ್ರಚೋದಿಸುವ ರೀತಿಯಲ್ಲಿ ಹೇಳಿಕೆಗಳನ್ನು ನೀಡುವಂತೆ ಮಾಡುತ್ತಿದ್ದಾರೆ ಅದಕ್ಕೆ ನೀವು ಬಲಿಯಾಗಬಾರದು ತಾಳ್ಮೆಯಿಂದ ಇರುವಂತೆ ಮನವಿ ಮಾಡಿರುವುದಾಗಿ ಗೊತ್ತಾಗಿದೆ.

ಈ ತಿಂಗಳ 14ರಂದು ದೆಹಲಿಯಲ್ಲಿ ಮತಗಳ್ಳತನದ ವಿರುದ್ಧ ಹೋರಾಟ ನಡೆಯುತ್ತಿದ್ದು ಅದರಲ್ಲಿ ಪಾಲ್ಗೊಳ್ಳಲು ಎಲ್ಲರೂ ಬರಬೇಕು ಅವಕಾಶ ಸಿಕ್ಕಿದರೆ ರಾಹುಲ್ ಗಾಂಧಿ ಅವರ ಜೊತೆ ಮಾತುಕತೆ ನಡೆಸೋಣ ಇಲ್ಲವಾದರೆ ಡಿಸೆಂಬರ್ 21ರಂದು ಬಹುತೇಕ ಹೈಕಮಾಂಡ್ ನಮ್ಮ ಜೊತೆ ಮಾತನಾಡುವ ಸಾಧ್ಯತೆ ಇದೆ ಅಲ್ಲಿಯವರೆಗೆ ತಾಳ್ಮೆಯಿಂದ ಇರುವಂತೆ ಸಲಹೆ ಮಾಡಿದ್ದಾರೆ ಎಂದು ತಿಳಿದು ಬಂದಿದೆ.

**ವಿಶೇಷವಿಲ್ಲ:** ಈ ನಡುವೆ ಕಳೆದ ರಾತ್ರಿ ನಡೆದ ಭೋಜನ ಕೂಟ ಕುರಿತಂತೆ ಪ್ರತಿಕ್ರಿಯೆ ನೀಡಿರುವ ಉಪಮುಖ್ಯಮಂತ್ರಿ

ಡಿಕೆ ಶಿವಕುಮಾರ್ ಅವರು ತಮ್ಮ ಆಪ್ತ ಬೆಳಗಾವಿ ಜಿಲ್ಲಾ ಕಾಂಗ್ರೆಸ್ಸಿನ ಮಾಜಿ ಅಧ್ಯಕ್ಷ ಊಟಕ್ಕೆ ಬರುವಂತೆ ಕಳೆದ 15 ವರ್ಷಗಳಿಂದ ಕರೆಯುತ್ತಿದ್ದರು ಅದಕ್ಕೆ ಸಮಯ ಬಂದಿರಲಿಲ್ಲ ಹೀಗಾಗಿ ಕಳೆದ ರಾತ್ರಿ ಹೋಗಿದ್ದೇನೆ ಇದರಲ್ಲಿ ಯಾವುದೇ ರಾಜಕೀಯ ಇಲ್ಲ ಎಂದು ಸ್ಪಷ್ಟಪಡಿಸಿದರು.

ಬೆಳಗಾವಿಯಲ್ಲಿ ಅಧಿವೇಶನ ನಡೆಯುತ್ತಿರುವ ಹಿನ್ನೆಲೆಯಲ್ಲಿ ಹಲವರು ಊಟಕ್ಕೆ ಬರುವಂತೆ ಕರೆಯುತ್ತಿದ್ದಾರೆ ಅದರಂತೆ ಎರಡು ದಿನ ಬಿಟ್ಟು ಶಾಸಕ ಆಸಿಫ್ ಸೇಠ್ ಅವರು ಊಟಕ್ಕೆ ಬರುವಂತೆ ಕರೆದಿದ್ದಾರೆ ಅವರ ಮನೆಗೂ ಹೋಗುತ್ತಿದ್ದೇನೆ ಎಂದು ಹೇಳಿದರು.

# ಶ್ರೀ ಅಯ್ಯಪ್ಪ ಸ್ವಾಮಿ ಮಹಾದೀಪೋತ್ಸವ

**ದಾವಣಗೆರೆ:** ಶ್ರೀ ಸ್ವಾಮಿ ಅಯ್ಯಪ್ಪ ಶಬರಿಮಲೈ ಸೇವಾ ಸಮಿತಿ ವತಿಯಿಂದ ಡಿ. 13 ರಿಂದ 15 ರವರೆಗೆ ಲೇಬರ್ ಕಾಲೋನಿಯಲ್ಲಿ ಶ್ರೀ ಶಬರಿಮಲೆ ಅಯ್ಯಪ್ಪ ಸ್ವಾಮಿಯ ಮಹಾದೀಪೋತ್ಸವ ಮತ್ತು ಅನ್ನ ಸಂತರ್ಪಣೆ ಕಾರ್ಯಕ್ರಮವು ನಡೆಯದೆ.

ಅಂದು ಬೆಳಿಗ್ಗೆ 6ಗಂಟೆಗೆ ಅಷ್ಟೋತ್ತರ ಮಹಾಪೂಜೆ ನಡೆಯಲಿದ್ದು, ಮಧ್ಯಾಹ್ನ 1 ಗಂಟೆಗೆ ನಡೆಯುವ ಅನ್ನಸಂತರ್ಪಣೆ ಕಾರ್ಯಕ್ರಮದ ಉದ್ಘಾಟನೆಯನ್ನು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಮತ್ತು ಪಾಲಿಕೆ ಮಾಜಿ ಸದಸ್ಯ ಜೆ.ಎನ್. ಶ್ರೀನಿವಾಸ್ ನೆರವೇರಿಸಲಿದ್ದಾರೆ. ಡಿ. 14ರಂದು ಬೆಳಗ್ಗೆ 5 ರಿಂದ ಗಣಪತಿ ಹೋಮ ಮತ್ತು ಪೂರ್ಣಾಹುತಿ. ಬೆಳಗ್ಗೆ 7ರಿಂದ ಸ್ವಾಮಿಯನ್ನು ಬಾಳೆ ಮಂಟಪದಲ್ಲಿ ಪ್ರತಿಷ್ಠಾಪಿಸಿ ಪೂಜಿಸಲಾಗುವುದು ಹಾಗೂ ಮಧ್ಯಾಹ್ನ 3 ಗಂಟೆಗೆ ನಡೆಯುವ ದೀಪೋತ್ಸವದ ಉದ್ಘಾಟನೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್ ಮಲ್ಲಿಕಾರ್ಜುನ್ ಮತ್ತು ಮಾಜಿ ಶಾಸಕ ಎಸ್.ವಿ. ರಾಮಚಂದ್ರ ನೆರವೇರಿಸಲಿದ್ದು, ನಂತರ ಸ್ವಾಮಿಯ ಉತ್ಸವವು ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಲಿದೆ. ಡಿಸೆಂಬರ್ 15ರಂದು ಬೆಳಗ್ಗೆ 5 ರಿಂದ ಅಗ್ನಿಕುಂಡ ಹರಕೆ ಇರಲಿದೆ.

# ಡಿ.15ರಂದು ಶ್ರೀ ಮಡಿವಾಳ ಮಾಚಿದೇವ ಕಾರ್ತಿಕೋತ್ಸವ

**ದಾವಣಗೆರೆ:** ಶ್ರೀ ಮಡಿವಾಳ ಮಾಚಿದೇವ ಸಂಘ ಹಾಗೂ ಮಡಿಕಟ್ಟೆ ಸಮಿತಿ, ಮಡಿವಾಳ ಮಾಚಿದೇವ ಮಹಿಳಾ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಡಿ. 15ರಂದು ಶ್ರೀ ಮಡಿವಾಳ ಮಾಚಿದೇವ ಕಡೆ ಕಾರ್ತಿಕೋತ್ಸವ ಕಾರ್ಯಕ್ರಮ ನಡೆಯಲಿದೆ. ಅಂದು ಸಂಜೆ 6:30ಕ್ಕೆ ಶ್ರೀ ಸ್ವಾಮಿಗೆ ಅಭಿಷೇಕ ಮತ್ತು ದೀಪಾಲಂಕಾರ ಮಾಡಲಾಗುವುದು. ಕಾರ್ತಿಕೋತ್ಸವ ಹಾಗೂ ಪಳಹಾರ ವಿನಿಯೋಗ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಮಾಜದ ಬಾಂಧವರು, ಭಕ್ತಾದಿಗಳು ಪಾಲ್ಗೊಳ್ಳುವಂತೆ ಸಂಘ ಕೋರಿದೆ.

# ನಾಳೆ ಶ್ರೀ ಶಿಬಾರ ಮೈಲಾರಲಿಂಗೇಶ್ವರ ಕಾರ್ತೀಕೋತ್ಸವ್

**ದಾವಣಗೆರೆ:** ಶ್ರೀ ಕ್ಷೇತ್ರ ಶಿಬಾರ ಮೈಲಾರಲಿಂಗೇಶ್ವರ ದೇವಸ್ಥಾನ ಟ್ರಸ್ಟ್ ವತಿಯಿಂದ ಕೊಂಡಜ್ಜಿ ರಸ್ತೆಯಲ್ಲಿರುವ ಶ್ರೀ ಶಿಬಾರ ಮೈಲಾರಲಿಂಗೇಶ್ವರ ದೇವಸ್ಥಾನದಲ್ಲಿ ಡಿ. 14ರಂದು ಸಂಜೆ 7:30ಕ್ಕೆ ಬಾಳೆ ದಿಂಡಿನಿಂದ ಅಲಂಕೃತವಾದ ಕದಳಿ ಪೂಜೆಯೊಂದಿಗೆ 40ನೇ ವರ್ಷದ ಕಡೆ ಕಾರ್ತಿಕೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಟ್ರಸ್ಟ್ ತಿಳಿಸಿದೆ.

# ಡಿ.17 ರಂದು ವಿಕಲಚೇತನರ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಸುವರ್ಣಸೌಧದ ಎದುರು ಪ್ರತಿಭಟನೆ

**ದಾವಣಗೆರೆ:** ವಿಕಲಚೇತನರಿಗೆ ಪ್ರಸ್ತುತ ನೀಡುತ್ತಿರುವ ಮಾಸಾಶನವನ್ನು ಕನಿಷ್ಟ 5 ಸಾವಿರ ರೂ, ಗಳಿಗೆ ಹೆಚ್ಚಿಸುವುದು, ವಿಕಲಚೇತನರಿಗೆ ರಾಜಕೀಯ ಪ್ರಾತಿನಿಧ್ಯ, ಹಾಗೂ ವಿಕಲಚೇತನರ ಪ್ರತ್ಯೇಕ ನಿಗಮ ಮಂಡಳಿ ಸ್ಥಾಪನೆ ಮಾಡಬೇಕು ಎಂಬುದು ಸೇರಿದಂತೆ ಇತರೆ ಬೇಡಿಕೆಗಳಿಗೆ ಒತ್ತಾಯಿಸಿ ಕರ್ನಾಟಕ ರಾಜ್ಯ ವಿಕಲಚೇತನರ ಆರ್‌ಪಿಡಿ ಟಾಸ್ಕ್ ಫೋರ್ಸ್ ಸಂಘಟನೆಯು ಡಿ.17 ರಂದು ಬೆಳಗಾವಿಯ ಸುವರ್ಣ ಸೌಧದ ಎದುರು ಪ್ರತಿಭಟನೆ ಹಮ್ಮಿಕೊಂಡಿದೆ.

ಕೇಂದ್ರ ಸರ್ಕಾರ ವಿಕಲಚೇತನರ ಹಕ್ಕುಗಳ ಕಾಯಿದೆ ಜಾರಿಗೊಳಿಸಿ 9 ವರ್ಷಗಳು ಕಳೆದರು ಕರ್ನಾಟಕ ರಾಜ್ಯ ಸರ್ಕಾರದ ಇಚ್ಛಾಶಕ್ತಿ ಕೊರತೆಯಿಂದ ಕಾಯಿದೆ ಸಂಪೂರ್ಣವಾಗಿ ಜಾರಿಗೆ ಬರದ ಕಾರಣ ವಿಕಲಚೇತನರು ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯವಾಗಿ ಮುಖ್ಯವಾಹಿನಿಗೆ ಬರುವಲ್ಲಿ ಸಾಧ್ಯವಾಗಿಲ್ಲ ಎಂದು ಸಂಘಟನೆಯ ಜಿಲ್ಲಾ ಕಾರ್ಯದರ್ಶಿ ಎಸ್. ಆರ್. ರಾಘವೇಂದ್ರ ಪತ್ರಿಕಾ ಹೇಳಿಕೆಯಲ್ಲಿ ಬೇಸರ ಹೊರಹಾಕಿದ್ದಾರೆ.

ರಾಜ್ಯ ಸರ್ಕಾರ ಕಳೆದ 2 ಬಜೆಟ್ನಲ್ಲಿ ವಿಕಲಚೇತನರ ಯಾವುದೇ ಪ್ರಮುಖ ಬೇಡಿಕೆಗಳನ್ನು ಈಡೇರಿಸದೇ ವಿಕಲಚೇತನರನ್ನು ಸಂಪೂರ್ಣವಾಗಿ ಕಡೆಗಣಿಸಿದೆ. ಕೂಡಲೇ ಸರ್ಕಾರ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅನುದಾನದಲ್ಲಿ ವಿಕಲಚೇತನರಿಗೆ ಶೇ.5 ರಷ್ಟು ಅನುದಾನವನ್ನು ಮೀಸಲಿಡಬೇಕು, ವಿಕಲಚೇತನರ ರಿಯಾಯಿತಿ ದರದ ಬಸ್ ಪಾಸಿನ ಪ್ರಯಾಣದ ಮಿತಿಯನ್ನು ಹೆಚ್ಚಿಸುವುದು ಸೇರಿದಂತೆ ಹಲವು ಪ್ರಮುಖ ಹಕ್ಕೋತ್ತಾಯಗಳ ಈಡೇರಿಕೆಗಾಗಿ ಒತ್ತಾಯಿಸಿ ಈ ಪ್ರತಿಭಟನೆ ಹಮ್ಮಿಕೊಂಡಿರುವುದಾಗಿ ತಿಳಿಸಿದ್ದಾ

# ಪರಮಾಣು ಶಕ್ತಿ ಮೂಲಕ ವಿದ್ಯುತ್ ಉತ್ಪಾದನೆ ಸಾಮರ್ಥ್ಯದ ಬಗ್ಗೆ ಕೇಂದ್ರಕ್ಕೆ ಮಾಹಿತಿ ಕೇಳಿದ ಡಾ.ಪ್ರಭಾ ಮಲ್ಲಿಕಾರ್ಜುನ್

**ದಾವಣಗೆರೆ/ನವದೆಹಲಿ;** ಪರಮಾಣು ಶಕ್ತಿ ಮೂಲಕ ವಿದ್ಯುತ್ ಉತ್ಪಾದನೆ ಸಾಮರ್ಥ್ಯದ ವಿವರಗಳ ಕುರಿತು ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರು ಪ್ರಧಾನಮಂತ್ರಿಯವರಿಗೆ ಮಾಹಿತಿ ಕೇಳಿದ್ದಾರೆ ಹಾಗೂ ಅವರ ಮಾಹಿತಿಗೆ ಪ್ರಧಾನಿಯವರ ಕಚೇರಿಯಿಂದ ಉತ್ತರ ಲಭಿಸಿದೆ.



ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರು ದಶಕಗಳ ಹೂಡಿಕೆಯ ಹೊರತಾಗಿಯೂ, ಪರಮಾಣು ಶಕ್ತಿಯು ದೇಶದ ಒಟ್ಟು ವಿದ್ಯುತ್ ಉತ್ಪಾದನೆಗೆ ಕೇವಲ 1.6% ಕೊಡುಗೆ ನೀಡುತ್ತದೆ, ಇದು ಅದರ ಘೋಷಿತ ಸಾಮರ್ಥ್ಯಕ್ಕಿಂತ ತೀರಾ ಕಡಿಮೆಯಾಗಿದೆ ಈ ಬಗ್ಗೆ ಮಾಹಿತಿ ಕೇಳಿದ್ದಾರೆ ಇದರೊಂದಿಗೆ ಪ್ರಸ್ತುತ ಸಾಮರ್ಥ್ಯವು ಕೇವಲ 7.5 ಉಫ ಆಗಿದ್ದು, 2031–32 ರ ವೇಳೆಗೆ 22.48 GW ಗುರಿಯ ವಿರುದ್ಧ 2024 ರ ವೇಳೆಗೆ 8.18 GW ಗೆ ಸ್ವಲ್ಪ ಹೆಚ್ಚಾಗುವ ನಿರೀಕ್ಷೆಯಿರುವುದರಿಂದ ಪರಮಾಣು ಸಾಮರ್ಥ್ಯದ ನಿಧಾನಗತಿಯ ವಿಸ್ತರಣೆಗೆ ಕಾರಣಗಳೇನು? ಪರಮಾಣು ಉಪಕರಣಗಳ ತಯಾರಿಕೆಯಲ್ಲಿ ಮಾತ್ರ ಶೇ. 100 ರಷ್ಟು ವಿದೇಶಿ ನೇರ ಹೂಡಿಕೆಗೆ ಅವಕಾಶವಿದೆ ಎಂದು ಪರಿಗಣಿಸಿ, ರಿಯಾಕ್ಟರ್ ಕಾರ್ಯಾಚರಣೆಗಳಲ್ಲಿ ಹೆಚ್ಚಿನ ಖಾಸಗಿ ಮತ್ತು ವಿದೇಶಿ ಭಾಗವಹಿಸುವಿಕೆಯನ್ನು ಅನುಮತಿಸಲು ಸರ್ಕಾರವು ಪರಮಾಣು ಶಕ್ತಿ ಕಾಯ್ದೆ, 1962 ಕ್ಕೆ ತಿದ್ದುಪಡಿ ತರಲು ಪ್ರಸ್ತಾಪಿಸುತ್ತದೆಯೇ ಮತ್ತು ಹಾಗಿದ್ದಲ್ಲಿ, ಅದರ ವಿವರಗಳ ಬಗ್ಗೆ ಮಾಹಿತಿ ಒದಗಿಸುವಂತೆ ತಿಳಿಸಿದ್ದಾರೆ.

ಸಂಸದರ ಪ್ರಶ್ನೆಗೆ ಪ್ರಧಾನಮಂತ್ರಿಗಳ ಕಚೇರಿಯಿಂದ ಉತ್ತರ ಲಭಿಸಿದ್ದು ಭಾರತದಲ್ಲಿ ಪರಮಾಣು ವಿದ್ಯುತ್ ಉತ್ಪಾದನೆ ಹಲವು ವರ್ಷಗಳಿಂದ ಸುಮಾರು 3% ಮಟ್ಟದಲ್ಲೇ ಇದೆ (2024–25ರಲ್ಲಿ 3.1%). ಆರಂಭಿಕ ನಿಧಾನ ವಿಸ್ತರಣೆಗೆ ಅಂತರರಾಷ್ಟ್ರೀಯ ನಿರ್ಬಂಧಗಳು, ತಂತ್ರಜ್ಞಾನ ನಿರಾಕರಣೆ ಮತ್ತು ಸಂಪನ್ಮೂಲ ಸೀಮಿತತೆ ಕಾರಣ ಎಂದು ತಿಳಿಸಲಾಗಿದೆ.

ಪ್ರಸ್ತುತ ಸ್ಥಾಪಿತ ಸಾಮರ್ಥ್ಯ 8.78 GW (RAPS-1 ಹೊರತುಪಡಿಸಿ). ಸ್ವದೇಶಿ 700 MWPHWR ತಂತ್ರಜ್ಞಾನ ಪರಿಪಕ್ವವಾಗಿದ್ದು, 700 ಒಫ ಮತ್ತು 1000 MW ರಿಯಾಕ್ಟರ್‌ಗಳ ಸ್ಥಾಪನೆ ಪ್ರಗತಿಯಲ್ಲಿ ಇದೆ. ಯೋಜನೆಗಳು ಪೂರ್ಣಗೊಳ್ಳುವಂತೆ 2031–32ರ ವೇಳೆಗೆ ಸಾಮರ್ಥ್ಯ 22.38 GW ಆಗಲಿದೆ.

ಸರ್ಕಾರವು 2047ರೊಳಗೆ 100 ಉಫ ಪರಮಾಣು ಶಕ್ತಿ ಗುರಿ ಘೋಷಿಸಿದೆ. ಪ್ರಸ್ತುತ ಪರಮಾಣು ಶಕ್ತಿಯಲ್ಲಿ ಈಆಖ ನಿಷಿದ್ಧ ಮತ್ತು ಸುಗಮಗೊಳಿಸಲು ಪರಮಾಣು ಶಕ್ತಿ ಕಾಯ್ದೆ, 1962 ತಿದ್ದುಪಡಿ ಪ್ರಸ್ತಾಪಿಸಲಾಗಿದೆ ಎಂದು ತಿಳಿಸಲಾಗಿದೆ.

# ಮಾಜಿ ಕೇಂದ್ರ ಸಚಿವ ಶಿವರಾಜ್ ಪಾಟೀಲ್ ನಿಧನ



**ಲಾತೂರ್,ಡಿ.12–** ಹಿರಿಯ ಕಾಂಗ್ರೆಸ್ ನಾಯಕ ಮತ್ತು ಮಾಜಿ ಕೇಂದ್ರ ಗೃಹಸಚಿವ ಶಿವರಾಜ್ ಪಾಟೀಲ್(90) ಅವರು ಇಂದು ಬೆಳಿಗ್ಗೆ ನಿಧನರಾಗಿದ್ದಾರೆ.ಅಲ್ಪಕಾಲದ ಅನಾರೋಗ್ಯದ ನಂತರ ಪಾಟೀಲ್ ಅವರು ತಮ ತವರೂರಾದ ಮಹಾರಾಷ್ಟ್ರದ ಲಾತೂರ್‌ನಲ್ಲಿರುವ ದೇವ್‌ಘರ್‌ನಲ್ಲಿ ನಿವಾಸದಲ್ಲಿ ನಿಧನರಾಗಿದ್ದಾರೆ ಎಂದು ಕುಟುಂಬ ಮೂಲಗಳು ತಿಳಿಸಿವೆ.

ಮೃತರು ಪುತ್ರ ಶೈಲೇಶ್ ಪಾಟೀಲ್, ಸೊಸೆ ಬಿಜೆಪಿ ನಾಯಕಿ ಅರ್ಚನಾ ಮತ್ತು ಇಬ್ಬರು ಮೊಮಕ್ಕಳನ್ನು ಅಗಲಿದ್ದಾರೆ.1991ರಿಂದ 1996ರವರೆಗೆ ಲೋಕಸಭೆಯ ಸ್ಪೀಕರ್ ಆಗಿದ್ದ ಅವರು 2004ರಿಂದ 2008ರವರೆಗೆ ಯುಪಿಎ ಸರ್ಕಾರದಲ್ಲಿ ಗೃಹಸಚಿವರಾಗಿದ್ದರು. 2010ರಿಂದ 2015ರವರೆಗೆ ಪಂಜಾಬ್ –ಚಂಡೀಗಢ ಕೇಂದ್ರ ಪ್ರದೇಶದ ಆಡಳಿತಾಧಿಕಾರಿಯಾಗಿಯೂ ಸೇವೆ ಸಲ್ಲಿಸಿದ್ದರು.

# ಆಂಧ್ರಪ್ರದೇಶದಲ್ಲಿ ಭೀಕರ ಬಸ್ ಅಪಘಾತ 9 ಮಂದಿ ದುರ್ಮರಣ

**ವಿಶಾಖಪಟ್ಟಣಂ:** ಚಿಂತೂರು–ಮರೇಡುಮಿಲ್ಲಿ ಘಾಟ್ ರಸ್ತೆಯಲ್ಲಿ ಶುಕ್ರವಾರ ನಸುಕಿನ ಜಾವ ಖಾಸಗಿ ಟ್ರಾವೆಲ್ ಬಸ್ ನಿಯಂತ್ರಣ ತಪ್ಪಿ ಕಂದಕಕ್ಕೆ ಉರುಳಿ ಬಿದ್ದ ಪರಿಣಾಮ ಕನಿಷ್ಠ 9 ಮಂದಿ ಪ್ರಯಾಣಿಕರು ಮೃತಪಟ್ಟಿದ್ದಾರೆ.



ಭದ್ರಾಚಲಂ ದೇವಸ್ಥಾನದ ದರ್ಶನ ಪಡೆದು ಅನ್ನಾವರಂ ಕಡೆಗೆ 35 ಮಂದಿ ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಬಸ್ ಇದಾಗಿತ್ತು. ಆರಂಭಿಕ ಮಾಹಿತಿಯ ಪ್ರಕಾರ, ಕನಿಷ್ಠ ಒಂಬತ್ತು ಜನರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಇಪ್ಪತ್ತೆರಡು ಜನರು ಗಾಯಗೊಂಡಿದ್ದು, ಚಿಕಿತ್ಸೆಗಾಗಿ ಹತ್ತಿರದ ವೈದ್ಯಕೀಯ ಸೌಲಭ್ಯಗಳಿಗೆ ಸ್ಥಳಾಂತರಿಸಲಾಗುತ್ತಿದೆ. ಎಲ್ಲರೂ ಚಿತ್ತೂರು ಜಿಲ್ಲೆಯ ನಿವಾಸಿಗಳಾಗಿದ್ದು, ಅಪಘಾತದ ಸಮಯದಲ್ಲಿ ಅವರನ್ನು ತೀರ್ಥಯಾತ್ರೆಗೆ ಕರೆದೊಯ್ಯಲಾಗಿತ್ತು.

ರಾಜುಗರಿಮೆಟ್ಟ ತಿರುವಿನಲ್ಲಿ ಈ ಘಟನೆ ಸಂಭವಿಸಿದ್ದು, ಚಾಲಕ ವಾಹನದ ನಿಯಂತ್ರಣ ಕಳೆದುಕೊಂಡು ಕಂದಕಕ್ಕೆ ಬಸ್ ಉರುಳಿ ಬಿದ್ದಿತು ಎಂದು ಹೇಳಲಾಗುತ್ತಿದೆ.

ಮಾಹಿತಿ ಪಡೆದ ನಂತರ ಪೊಲೀಸ್ ಸಿಬ್ಬಂದಿ ಮತ್ತು ಸ್ಥಳೀಯ ನಿವಾಸಿಗಳು ಸ್ಥಳಕ್ಕೆ ಧಾವಿಸಿ ಕತ್ತಲೆ ಮತ್ತು ಕಠಿಣ ಭೂಪ್ರದೇಶದಲ್ಲಿ ರಕ್ಷಣಾ ಕಾರ್ಯಾಚರಣೆಯನ್ನು ಪ್ರಾರಂಭಿಸಿದರು. ಹೆಚ್ಚಿನ ವಿವರಗಳನ್ನು ನಿರೀಕ್ಷಿಸಲಾಗಿದೆ.

**ಸಿಎಂ ಆಘಾತ , ಸಂತಾಪ :** ಅಪಘಾತದ ಸುದ್ದಿ ಕೇಳಿ ಆಂಧ್ರ ಪ್ರದೇಶ ಸಿಎಂ ಎನ್ ಚಂದ್ರಬಾಬು ನಾಯ್ಡು ಆಘಾತ ವ್ಯಕ್ತಪಡಿಸಿದ್ದಾರೆ. ಚಿತ್ತೂರು ಜಿಲ್ಲೆಯ ಅಲ್ಲೂರಿ ಸೀತಾರಾಮ ರಾಜು ಬಳಿ ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಖಾಸಗಿ ಬಸ್ ಅಪಘಾತ ಸುದ್ದಿ ನಮ್ಮನ್ನು ತೀವ್ರವಾಗಿ ಆಘಾತಗೊಳಿಸಿದೆ. ಈ ಅಪಘಾತದಲ್ಲಿ ಹಲವಾರು ಜೀವಗಳು ಬಲಿಯಾಗಿವೆ ಎಂಬುದು ಹೃದಯವಿದ್ರಾವಕ. ಅಪಘಾತದ ಬಗ್ಗೆ ಅಧಿಕಾರಿಗಳೊಂದಿಗೆ ಮಾತನಾಡಿದ್ದೇನೆ. ಸಂತ್ರಸ್ತರಿಗೆ ನೀಡಲಾಗುತ್ತಿರುವ ಸಹಾಯದ ಬಗ್ಗೆ ವಿವರಗಳನ್ನು ಸಂಗ್ರಹಿಸಿದ್ದೇನೆ.

# ಡ್ರಗ್ ಮಾರಾಟಗಾರರಿರುವ ಕಟ್ಟಡ ಕೆಡವಲು ಸರ್ಕಾರ ಚಿಂತನೆ



**ಬೆಳಗಾವಿ:** ರಾಜ್ಯಾದ್ಯಂತ ಡ್ರಗ್ಸ್ ಮಾರಾಟವನ್ನು ತಡೆಯುವ ವಿಶಾಲ ಕಾರ್ಯತಂತ್ರದ ಭಾಗವಾಗಿ ಮಾದಕ ದ್ರವ್ಯ ವ್ಯಾಪಾರದಲ್ಲಿ ತೊಡಗಿರುವ ವಿದೇಶಿ ಪ್ರಜೆಗಳು ವಾಸಿಸುವ ಮನೆಗಳನ್ನು ಕೆಡವುವುದು ಸೇರಿದಂತೆ ಹಲವು ಕಠಿಣ ಕ್ರಮಗಳನ್ನು ಸರ್ಕಾರ ತೆಗೆದುಕೊಳ್ಳುತ್ತಿದೆ ಎಂದು ಗೃಹ ಸಚಿವ ಜಿ ಪರಮೇಶ್ವರ ಅವರು ಶುಕ್ರವಾರ ಹೇಳಿದ್ದಾರೆ.

ಬೆಂಗಳೂರು, ದಾವಣಗೆರೆ ಮತ್ತು ಕರಾವಳಿ ಜಿಲ್ಲೆಗಳಲ್ಲಿ ಹೆಚ್ಚುತ್ತಿರುವ ಡ್ರಗ್ಸ್ ಹಾವಳಿಯ ಕುರಿತು ವಿಧಾನ ಪರಿಷತ್ತಿನಲ್ಲಿ ಕಾಂಗ್ರೆಸ್ ಎಂಎಲ್‌ಸಿ ಕೆ ಅಬ್ದುಲ್ ಜಬ್ಬಾರ್ ಅವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಗೃಹ ಸಚಿವರು, ಕಾಂಗ್ರೆಸ್ ಸರ್ಕಾರ ಅಧಿಕಾರ ವಹಿಸಿಕೊಂಡ ನಂತರ ತೆಗೆದುಕೊಂಡ ವ್ಯಾಪಕ ಕ್ರಮಗಳನ್ನು ವಿವರಿಸಿದರು.

ಕೆಲವು ವಿದೇಶಿ ಪ್ರಜೆಗಳ ಭಾಗಿಯಾಗುವಿಕೆಯನ್ನು ಸೂಚಿಸಿದ ಸಚಿವರು, "ಆಫ್ರಿಕನ್ ದೇಶಗಳಿಂದ ಅನೇಕ ವಿದೇಶಿ ವಿದ್ಯಾರ್ಥಿಗಳು ಕರ್ನಾಟಕಕ್ಕೆ ಬಂದಿದ್ದಾರೆ. ಅವರು ಮಾದಕ ದ್ರವ್ಯ ವ್ಯವಹಾರದಲ್ಲಿದ್ದಾರೆ. ನಾವು ಅವರನ್ನು ಹಿಡಿದು ಅವರ ವಿರುದ್ಧ ಪ್ರಕರಣಗಳನ್ನು ದಾಖಲಿಸುತ್ತೇವೆ. ಆದರೆ ಪ್ರಕರಣ ದಾಖಲಾದ ನಂತರ ನಾವು ಅವರನ್ನು ಗಡೀಪಾರು ಮಾಡಲು ಸಾಧ್ಯವಿಲ್ಲ. ಹೀಗಾಗಿ ಅವರು ಪ್ರಕರಣ ದಾಖಲಿಸಬೇಕೆಂದು ಬಯಸುತ್ತಾರೆ" ಎಂದರು.

ಅಗತ್ಯ ಕಾರ್ಯವಿಧಾನಗಳನ್ನು ಪೂರ್ಣಗೊಳಿಸಿದ ನಂತರ ಸುಮಾರು 300 ಜನರನ್ನು ಗಡೀಪಾರು ಮಾಡಲಾಗಿದೆ ಎಂದು ಅವರು ಹೇಳಿದರು.

ಅಧಿಕಾರಿಗಳು ಗಡೀಪಾರು ಮಾಡಲಾದ ವ್ಯಕ್ತಿಗಳನ್ನು ಪತ್ತೆಹಚ್ಚುತ್ತಿದ್ದಾರೆ ಮತ್ತು ಅಪರಾಧಿಗಳಿಗೆ ಮನೆಗಳನ್ನು ಬಾಡಿಗೆಗೆ ನೀಡುವ ಸ್ಥಳೀಯ ಆಸ್ತಿ ಮಾಲೀಕರ ವಿರುದ್ಧ ಕ್ರಮ ಕೈಗೊಳ್ಳುತ್ತಿದ್ದಾರೆ ಎಂದರು.

"ನಾವು ಅವರು ವಾಸಿಸುವ ಬಾಡಿಗೆ ಕಟ್ಟಡವನ್ನು ಸಹ ಕೆಡವುವ ಹಂತಕ್ಕೆ ಹೋಗಿದ್ದೇವೆ" ಎಂದು ಜಿ ಪರಮೇಶ್ವರ ಅವರು ಹೇಳಿದರು.

"ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ನಂತರ ನಾವು ಬಹಳ ಕಠಿಣ ಕ್ರಮಗಳನ್ನು ತೆಗೆದುಕೊಂಡಿದ್ದೇವೆ. ಕರ್ನಾಟಕವನ್ನು ಮಾದಕ ದ್ರವ್ಯ ಮುಕ್ತ ರಾಜ್ಯವನ್ನಾಗಿ ಮಾಡುತ್ತೇವೆ ಎಂದು ಮುಖ್ಯಮಂತ್ರಿಗಳು ಸದನದಲ್ಲಿ ಹೇಳಿದ್ದಾರೆ" ಎಂದು ಗೃಹ ಸಚಿವರು ತಿಳಿಸಿದರು.

ಯುವಕರಲ್ಲಿ ಮಾದಕ ದ್ರವ್ಯ ಬಳಕೆಯನ್ನು ತಡೆಯಲು, ಇಲಾಖೆ ಅಧಿಕಾರಿಗಳಿಗೆ ನಿಯಮಿತವಾಗಿ ಶಿಕ್ಷಣ ಸಂಸ್ಥೆಗಳಿಗೆ ಭೇಟಿ ನೀಡುವಂತೆ ಸೂಚಿಸಿದೆ.

"ನಿನ್ನೆ, ಕೇವಲ ಒಂದು ದಿನ, ನಮ್ಮ ಅಧಿಕಾರಿಗಳು ಬೆಂಗಳೂರಿನ 1,000 ಶಾಲೆಗಳು ಮತ್ತು ಕಾಲೇಜುಗಳಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ನಾವು ಅದನ್ನು ನಿಯಮಿತವಾಗಿ ಮಾಡಬೇಕಾಗಿದೆ" ಎಂದು ಅವರು ಹೇಳಿದರು.

## ಬಗೆದಷ್ಟು ಹೊರಬರುತ್ತಿದೆ ಮುಡಾ ಹಗರಣ । 700 ಕೋಟಿ ಮೌಲ್ಯದ ಅಕ್ರಮ ನಿವೇಶನಗಳ ಮಾರಾಟ

# ಮಾಜಿ ಆಯುಕ್ತರಿಂದ 22 ಕೋಟಿ ಲಂಚ ಸ್ವೀಕಾರ

**ಬೆಂಗಳೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಹಲವು ಕಾನೂನು ಬಾಹಿರ ಚಟುವಟಿಕೆಗಳು ನಡೆದಿದ್ದು ಬಗೆದಷ್ಟು ಹಲವು ಅವ್ಯವಹಾರಗಳು ಬೆಳಕಿಗೆ ಬರುತ್ತಿವೆ. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ (ಮುಡಾ) ಮಾಜಿ ಆಯುಕ್ತ ಜಿ.ಟಿ. ದಿನೇಶ್ ಕುಮಾರ್ ತಮ್ಮ ಅಧಿಕಾರಾವಧಿಯಲ್ಲಿ 140 ಕೋಟಿ ರೂ. ಮೌಲ್ಯದ 283 ನಿವೇಶನಗಳನ್ನು ಅಕ್ರಮವಾಗಿ ಹಂಚಿಕೆ ಮಾಡುವ ಮೂಲಕ 22.47 ಕೋಟಿ ರೂ. ಲಂಚ ಪಡೆದಿದ್ದಾರೆ ಎಂದು ತಿಳಿದುಬಂದಿದೆ.




2002 ರ ಹಣ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್‌ಎ) ಅಡಿಯಲ್ಲಿ ನಡೆಸಲಾದ ತನಿಖೆಯಲ್ಲಿ, ಸುಮಾರು 700 ಕೋಟಿ ರೂ. ಮೌಲ್ಯದ 1,095 ಅಕ್ರಮ ನಿವೇಶನಗಳನ್ನು ಮಾರಾಟ ಮಾಡಲಾಗಿದೆ. 1,095 ನಿವೇಶನಗಳ ಪಟ್ಟಿಯನ್ನು ಮುಡಾ ಆಯುಕ್ತರು ಪರಿಶೀಲನೆ ಸಮಯದಲ್ಲಿ ಇಡಿಗೆ ಸಲ್ಲಿಸಿದ್ದಾರೆ.

ದಿನೇಶ್ ಕುಮಾರ್ ಅವರನ್ನು 'ಹಗರಣಗಳ ಸೂತ್ರಧಾರಿ'ಗಳಲ್ಲಿ ಒಬ್ಬರು ಎಂದು ಇಡಿ ಹೇಳಿದೆ. ಅಕ್ರಮ ಹಂಚಿಕೆ ಮಾಡಿದ್ದಕ್ಕಾಗಿ ಅವರು ನಗದು, ಚರ ಮತ್ತು ಸ್ಥಿರ ಆಸ್ತಿಗಳ ರೂಪದಲ್ಲಿ ಪ್ರತಿಫಲವನ್ನು ಪಡೆದಿದ್ದಾರೆ ಎಂದು ತಿಳಿದುಬಂದಿದೆ. ಅವ್ಯವಹಾರದ ಆದಾಯ ಸಂಪಾದನೆ ಮರೆಮಾಚುವಿಕೆ ಇತ್ಯಾದಿಗಳಿಗೆ ಸಂಬಂಧಿಸಿದ ಚಟುವಟಿಕೆಗಳಲ್ಲಿ ಉದ್ದೇಶಪೂರ್ವಕವಾಗಿ ಸಹಾಯ ಮಾಡಲು ಮಾಜಿ ಆಯುಕ್ತರು ಪ್ರಯತ್ನಿಸಿದ್ದಾರೆ ಎಂದು ಜಾರಿ ನಿರ್ದೇಶನಾಲಯ ತಿಳಿಸಿದೆ.

ದಿನೇಶ್ ಕುಮಾರ್ ಪಡೆದ 22.47 ಕೋಟಿ ರೂ. ಲಂಚದಲ್ಲಿ 34.65 ಲಕ್ಷ ರೂ. ನಗದು ಸಂಗ್ರಹಿಸಿದ್ದಾರೆ, ಹೆಚ್ಚಿನ ಭದ್ರತಾ ಬಾಂಡ್ ಪೇಪರ್‌ಗಳನ್ನು ದುರುಪಯೋಗಪಡಿಸಿಕೊಂಡು 8.28 ಕೋಟಿ ರೂ. ಗಳಿಸಿದ್ದಾರೆ, ಚಾಮುಂಡೇಶ್ವರಿ ನಗರ ಸರ್ವೋದಯ ಸಂಘದ ಸದಸ್ಯರ ಮೂಲಕ 5.86 ಕೋಟಿ ರೂ., ಅಬ್ದುಲ್ ವಹೀದ್ ಅವರಿಂದ 3.62 ಕೋಟಿ ರೂ., ಕ್ಯಾಥೆಡ್ರಲ್ ಪ್ಯಾರಿಷ್ ಸೊಸೈಟಿಯಿಂದ 1.70 ಕೋಟಿ ರೂ., ನಿಂಗಮ್ಮ ಅವರಿಂದ 1.13 ಕೋಟಿ ರೂ., ಜೆಎಸ್‌ಎಸ್ ಮಹಾವಿದ್ಯಾಪೀಠ ನೌಕರರ ಗೃಹ ನಿರ್ಮಾಣ ಸಹಕಾರ ಸಂಘದಿಂದ 1.02 ಕೋಟಿ ರೂ. ಮತ್ತು ನಿಂಗಮ್ಮ ಅವರಿಂದ 49 ಲಕ್ಷ ರೂ. ಗಳನ್ನು ಅಕ್ರಮವಾಗಿ ಹಂಚಿಕೆ ಮಾಡಿದ ಪರಿಹಾರ ನಿವೇಶನಗಳಿಗೆ 'ರಿಟರ್ನ್ಸ್' ಆಗಿ ಪಡೆದಿದ್ದಾರೆ ಎಂದು ಇಆ ಅಂದಾಜಿಸಿದೆ.

ಈ ಅಕ್ರಮದಿಂದ ಬಂದ ಆದಾಯವನ್ನು ರವಾನಿಸಲು ಕುಮಾರ್ ಸಂಕೀರ್ಣ ವಿಧಾನವನ್ನು ಬಳಸಿದ್ದಾರೆ ಎಂದು ಕರ್ನಾಟಕ ಆಡಳಿತ ಸೇವೆಗಳ ಅಧಿಕಾರಿ ಕುಮಾರ್ ತಿಳಿಸಿದ್ದಾರೆ. ಕುಮಾರ್ ಮೇ 4, 2022 ರಿಂದ ಜುಲೈ 2, 2024 ರವರೆಗೆ ಸುಮಾರು 26 ತಿಂಗಳುಗಳ ಕಾಲ ಮುಡಾ ಆಯುಕ್ತರಾಗಿ ಸೇವೆ ಸಲ್ಲಿಸಿದ್ದಾರೆ.

ಅಕ್ರಮ ನಿವೇಶನ ಹಂಚಿಕೆ ಮತ್ತು ಅವುಗಳ ಮಾರಾಟದ ಮೂಲಕ ಬಂದ ಅನೈತಿಕ ಆದಾಯವನ್ನು ಹಲವಾರು ರಿಯಲ್ ಎಸ್ಟೇಟ್ ಉದ್ಯಮಿಗಳು ಅಥವಾ ದಲ್ಲಾಳಿಗಳು ಪಡೆದಿದ್ದಾರೆ ಎಂದು ಇಡಿ ಪ್ರಾಥಮಿಕವಾಗಿ ನಡೆಸಿದ ತನಿಖೆಯಿಂದ ಬಹಿರಂಗವಾಗಿದೆ.

ಅವ್ಯವಹಾರದ ಒಟ್ಟಾರೆ ಆದಾಯವನ್ನು ಪತ್ತೆಹಚ್ಚಲು ಕುಮಾರ್ ಮತ್ತು ಭಾಗಿಯಾಗಿರುವ ಇತರ ವ್ಯಕ್ತಿಗಳ ಕೈಯಲ್ಲಿ ಹಣ ವರ್ಗಾವಣೆಯ ಅಪರಾಧದ ಬಗ್ಗೆ ಪುರಾವೆಗಳನ್ನು ಸಂಗ್ರಹಿಸಲು ತನಿಖೆ ನಡೆಯುತ್ತಿದೆ ಎಂದು ಮೂಲಗಳು ತಿಳಿಸಿವೆ.

# ರಾಶಿ ಭವಿಷ್ಯ

### ಮೇಷ ರಾಶಿ

ಇಂದಿನ ಮನರಂಜನೆ ಕ್ರೀಡಾ ಚಟುವಟಿಕೆಗಳು ಮತ್ತು ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ಸಮಯ ಮತ್ತು ಹಣದ ಕಾತರ ನೀವು ಮಾಡಬೇಕು ಇಲ್ಲದಿದ್ದರೆ ಮುಂಬರುವ ಸಮಯ ತೊಂದರೆಗಳಿಂದ ತುಂಬಿರಬಹುದು ನೀವು ಪಾರ್ಟಿ ನೀಡಲು ಯೋಜಿಸುತ್ತಿದ್ದಲ್ಲಿ ನಿಮ್ಮ ಎಲ್ಲಾ ಒಳ್ಳೆಯ ಸ್ನೇಹಿತರನ್ನು ಆಮಂತ್ರಿಸಿ ನಿಮ್ಮನ್ನು ಅಸ್ತುಷ್ಟಗೊಳಿಸುವ ಬಹಳಷ್ಟು ಜನರಿರುತ್ತಾರೆ. ಯಾರಾದರೂ ನಿಮ್ಮನ್ನು ಶ್ಲಾಘಿಸಬಹುದು.

### ವೃಷಭ ರಾಶಿ

ಹತಾಶೆಯ ಭಾವನೆ ನಿಮ್ಮನ್ನುಅವರಿಸಲು ಬಿಡಬೇಡಿ. ಇಂದು ನೀವು ಸುಲಭವಾಗಿ ಬಂಡವಾಳ ಪಡೆಯಬಹುದು ಬಾಕಿಯಿರುವ ಸಾಲಗಳನ್ನು ಸಂಗ್ರಹಿಸಬಹುದು ಅಥವಾ ಹೊಸ ಯೋಜನೆಗಳಿಗೆ ಕೆಲಸ ಮಾಡಲು ಹಣ ಕೇಳಬಹುದು. ಪ್ರೀತಿ ಸಾಂಗತ್ಯ ಮತ್ತು ಬಂಧ ಏರಿಕೆಯಲ್ಲಿರುತ್ತವೆ. ಸರೋವರದಲ್ಲಿನ ಸೊಗಸಾದ ಮೀನನ್ನು ಸಂಧಿಸುವ ಅವಕಾಶಗಳು ಸಾಧ್ಯತೆಗಳು ಇಂದು ಹೆಚ್ಚಿವೆ. ನೀವು ಕೆಲಸದಲ್ಲಿ ಇಂದು ಒಂದು ಒಳ್ಳೆಯ ಸುದ್ದಿ ಪಡೆಯಬಹುದು.

### ಮಿಥುನ ರಾಶಿ

ನಿಮ್ಮ ಮನಸ್ಸು ಒಳ್ಳೆಯ ವಿಷಯಗಳನ್ನು ಗ್ರಹಿಸುತ್ತದೆ. ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಸರಿಯಾದ ಸಂಭಾಷಣೆ ಮತ್ತು ಸಹಕಾರ ಸಂಗಾತಿಯ ಜೊತೆಗಿನ ಸಂಬಂಧವನ್ನು ಉತ್ತಮಗೊಳಿಸುತ್ತದೆ. ಪ್ರಣಯ ನಿಮ್ಮ ಹೃದಯವನ್ನು ಆಳುತ್ತದೆ. ಹಿರಿಯರಿಂದ ಬೆಂಬಲ ಮತ್ತು ಮೆಚ್ಚುಗೆ ನಿಮ್ಮ ಸ್ಥೈರ್ಯ ಮತ್ತು ವಿಶ್ವಾಸವನ್ನು ಹೆಚ್ಚಿಸುತ್ತದೆ.

### ಕರ್ಕ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ಇಂದು ನೀವು ಭೂಮಿ, ವಸತಿ, ಅಥವಾ ಸಾಂಸ್ಕೃತಿಕ ಯೋಜನೆಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಗಮನ ನೀಡಬೇಕು. ಮನೆಯ ಕೆಲಸ ನಿಮ್ಮನ್ನು ಯಾವಾಗಲೂ ವ್ಯಸ್ತವಾಗಿರಿಸುತ್ತದೆ. ನಾಳೆ ಬಹಳ ತಡವಾಗುವುದರಿಂದ ನೀವು ನಿಮ್ಮ ಪ್ರಿಯತಮೆಗೆ ನಿಮ್ಮ ಸಂದೇಶವನ್ನು ಕೂಡಲೇ ತಿಳಿಸಬೇಕು. ನೀವು ಒಂದು ದಿನದ ತಜೆಯ ಮೇಲೆ ಹೋಗುತ್ತಿದ್ದಲ್ಲಿ ಚಿಂತಿಸಬೇಡಿ – ವಿಷಯಗಳನ್ನು ನೀವಿಲ್ಲದಿರುವಾಗ ಚೆನ್ನಾಗಿಯೇ ಇರುತ್ತವೆ

### ಸಿಂಹ ರಾಶಿ

ಅನಂತ ಜೀವನದ ಉತ್ಕೃಷ್ಟ ವೈಭವವನ್ನು ಆನಂದಿಸಲು ನಿಮ್ಮ ಜೀವನವನ್ನು ಹೆಚ್ಚು ಭವ್ಯಗೊಳಿಸಿ. ಚಿಂತೆಯ ಅನುಪಸ್ಥಿತಿ ಈ ದಿಕ್ಕಿನಲ್ಲಿ ಮೊದಲ ಹೆಜ್ಜೆ. ಯಾವುದೇ ಅಪರಿಚಿತ ವ್ಯಕ್ತಿಯ ಸಲಹೆಯಿಂದ ಎಲ್ಲಾದರೂ ಹೂಡಿಕೆ ಮಾಡಿರುವ ಜನರಿಗೆ, ಇಂದು ಆ ಹೂಡಿಕೆಯಿಂದ ಪ್ರಯೋಜನವನ್ನು ಪಡೆಯುವ ಪೂರ್ತಿಸಾಧ್ಯತೆ ಇದೆ. ನಿಮ್ಮ ಅತಿಯಾದ ಜೀವನಶೈಲಿ ಮನೆಯಲ್ಲಿ ಆತಂಕ ಸೃಷ್ಟಿಸಬಹುದು ಆದ್ದರಿಂದ ತಡರಾತ್ರಿಯನ್ನು ಹಾಗೂ ಇತರರ ಮೇಲೆ ಬಹಳ ಖರ್ಚು ಮಾಡುವುದನ್ನು ತಪ್ಪಿಸಿ

### ಕನ್ಯಾ ರಾಶಿ

ಒಬ್ಬ ಆಧ್ಯಾತ್ಮಿಕ ವ್ಯಕ್ತಿ ಆಶೀರ್ವಾದ ಮಾಡುತ್ತಾರೆ ಮತ್ತು ಮನಸ್ಸಿನ ಶಾಂತಿ ತರುತ್ತಾರೆ. ಮನೆಯ ಅಗತ್ಯಗಳನ್ನು ನೋಡುತ್ತಾ, ಇಂದು ನೀವು ನಿಮ್ಮ ಜೀವನ ಸಂಗಾತಿಯೊಂದಿಗೆ ಯಾವುದೇ ಅಮೂಲ್ಯ ವಸ್ತುವನ್ನು ಖರೀದಿಸಬಹುದು, ಇದರಿಂದ ಆರ್ಥಿಕ ಪರಿಸ್ಥಿತಿ ಸ್ವಲ್ಪ ತೊಂದರೆಗೊಳಗಾಗಬಹುದು. ಕುಟುಂಬದ ಸದಸ್ಯರ ಉತ್ತಮ ಸಲಹೆ ಇಂದು ನಿಮಗೆ ಲಾಭ ತರುತ್ತದೆ. ಮನ್ಮಥನು ನಿಮ್ಮ ಜೀವನದಲ್ಲಿ ಪ್ರೀತಿಯ ಮಳೆ ಸುರಿಸುತ್ತ ನಿಮ್ಮೆಡೆಗೆ ನುಗ್ಗುತ್ತಿದ್ದಾನೆ.

### ತುಲಾ ರಾಶಿ

ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ಇಂದಿನ ದಿನ, ನಿಮ್ಮ ಬಳಿ ಸಾಲವನ್ನು ಕೇಳುವ ಮತ್ತು ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ನೀವು ನಿಮ್ಮನ್ನು ತಪ್ಪಿಸುವ ಅಗತ್ಯವಿದೆ. ಸಾಮಾಜಿಕ ಕಾರ್ಯಗಳಿಗೆ ಹಾಜರಾಗಲು ಅವಕಾಶಗಳಿರಬಹುದು ಹಾಗೂ ಇದು ನಿಮ್ಮನ್ನು ಪ್ರಭಾವಿ ವ್ಯಕ್ತಿಗಳ ಜೊತೆ ನಿಕಟ ಸಂಪರ್ಕ ಹೊಂದುವಂತೆ ಮಾಡಬಹುದು.

### ವೃಶ್ಚಿಕ ರಾಶಿ

ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ನೀವು ಕಮಿಷನ್‌ಗಳಿಂದ ಡಿವಿಡೆಂಡ್‌ಗಳಿಂದ– ಅಥವಾ ರಾಯಧನಗಳಿಂದ ಪ್ರಯೋಜನ ಪಡೆಯುತ್ತೀರಿ. ಕುಟುಂಬದಲ್ಲಿ ನಿಮ್ಮ ಸರ್ವಾಧಿಕಾರಿ ಧೋರಣೆಯನ್ನು ಬದಲಾಯಿಸಿಕೊಳ್ಳಲು ಇದು ಒಳ್ಳೆಯ ಸಮಯ. ಜೀವನದ ಏಳುಬೀಳುಗಳನ್ನು ಹಂಚಿಕೊಳ್ಳಲು ಅವರ ಸಹಕಾರದೊಂದಿಗೆ ಕೆಲಸ ಮಾಡಿ.

### ಧನು ರಾಶಿ

ತಂದೆಯು ನಿಮ್ಮನ್ನು ಆಸ್ತಿಯ ಉತ್ತರಾಧಿಕಾರಿತ್ವದಿಂದ ತಪ್ಪಿಸಬಹುದು. ಆದರೆ ಧೃತಿಗೆಡಬೇಡಿ. ಅಭ್ಯುದಯ ಮನಸ್ಸಿಗೆ ಮುದ ನೀಡಿದರೆ ಅಭಾವ ಅದನ್ನು ಬಲಗೊಳಿಸುತ್ತದೆಂದು ನೆನಪಿಡಿ. ನಿಮಗೆ ಆಕರ್ಷಕವಾಗಿ ತೋರುವ ಯಾವುದೇ ಹೂಡಿಕೆಯ ಯೋಜನೆಯ ಬಗ್ಗೆ ಹೆಚ್ಚು ಕಂಡುಹಿಡಿಯಲು ಮೇಲ್ಮೈಗಿಂತ ಕೆಳಗೆ ಆಳವಾಗಿ ಕೆದಕಿ. ಯಾವುದೇ ಪ್ರಮಾಣ ಮಾಡುವ ಮೊದಲು ತಜ್ಞರನ್ನು ಸಂಪರ್ಕಿಸಿ. ಇತರರಿಗೆ ಪ್ರತಿಫಲಗಳು ತರುವ ನಿಮ್ಮ ಸಾಮರ್ಥ್ಯ ಪ್ರತಿಫಲ ತರುತ್ತದೆ. ಪ್ರೇಮಪ್ರಯಾಣ ಮಧುರವಾಗಿದ್ದರೂ ಅಲ್ಪಾವಧಿಯದ್ದಾಗಿರುತ್ತದೆ.

### ಮಕರ ರಾಶಿ

ನಿಮ್ಮನ್ನು ನೀವೇ ನೋಡಿಕೊಳ್ಳುವ ಬಯಕೆಗೆ ಇತರರ ಅಗತ್ಯಗಳು ಕಡಿವಾಣ ಹಾಕುತ್ತವೆ. ನಿಮ್ಮ ಭಾವನೆಗಳನ್ನು ತಡೆಹಿಡಿಯಬೇಡಿ ಹಾಗೂ ವಿಶ್ರಾಂತಿ ಪಡೆಯುವ ಸಲುವಾಗಿ ನೀವು ಇಷ್ಟಪಡುವುದನ್ನೇನಾದರೂ ಮಾಡಿ. ಭೂಮಿಯನ್ನು ಖರೀದಿಸಿದ ಮತ್ತು ಈಗ ಅದನ್ನು ಮಾರಾಟ ಮಾಡಲು ಬಯಸುವ ಜನರು ಇಂದು ಉತ್ತಮ ಖರೀದಿದಾರರನ್ನು ಕಾಣಬಹುದು ಮತ್ತು ಭೂಮಿಯನ್ನು ಮಾರಾಟ ಮಾಡುವ ಮೂಲಕ ಅವರು ಉತ್ತಮ ಹಣವನ್ನು ಪಡೆಯಬಹುದು.

### ಕುಂಭ ರಾಶಿ

ನಿಮ್ಮ ಜಗಳಗಂಟ ನಡುವಳಿಕೆ ನಿಮ್ಮ ಶತ್ರುಗಳ ಪಟ್ಟಿಯನ್ನು ಸುದೀರ್ಘಗೊಳಿಸುತ್ತದೆ. ನೀವು ನಂತರ ಪಶ್ಚಾತ್ತಾಪಪಡುವಷ್ಟು ಕೆಟ್ಟದಾಗಿ ನೀವೇನಾದರೂ ಮಾಡುವಷ್ಟು ನೀವು ಕೋಪಗೊಳ್ಳುವಂತೆ ಮಾಡಲು ಯಾರಿಗೂ ಅವಕಾಶ ನೀಡಬೇಡಿ. ನೀವು ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಇಂದು ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ.

### ಮೀನ ರಾಶಿ

ಕೆಲವರು ನಿಮಗೆ ಏನನ್ನಾದರೂ ಕಲಿಯಲು ಬಹಳ ವಯಸ್ಸಾಗಿದೆಯೆಂದು ಭಾವಿಸಬಹುದು ಆದರೆ ಅದು ನಿಜವಲ್ಲ – ನಿಮ್ಮ ಪ್ರಖರ ಮತ್ತು ಸಕ್ರಿಯ ಮನಸ್ಸಿನಿಂದ ನೀವು ಹೊಸ ವಿಷಯಗಳನ್ನು ಸುಲಭವಾಗಿ ಕಲಿಯುವಿರಿ. ಇಂದು ನಿಮ್ಮ ಆಪ್ತರೊಂದಿಗೆ ಜಗಳವಾಗಬಹುದು ಮತ್ತು ವಿಷಯ ನ್ಯಾಯಾಲಯ ಕಚೇರಿಯ ವರೆಗೂ ಹೋಗಬಹುದು.ಇದರ ಕಾರಣದಿಂದ ನಿಮ್ಮ ವಿಶೇಷ ಹಣ ಖರ್ಚಾಗಬಹುದು.

# ರಾಜ್ಯಮಟ್ಟದ ಕ್ರಿಕೆಟ್ ಪಂದ್ಯಾವಳಿ

## ಗುರುಕುಲ ವಸತಿಯುತ ಶಾಲೆಯ ತಂಡ ಪ್ರಥಮ




**ದಾವಣಗೆರೆ :** ಸರ್ಕಾರದ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ರಾಜ್ಯಮಟ್ಟದ ಕ್ರಿಕೆಟ್ ಪಂದ್ಯಾವಳಿಯಲ್ಲಿ ದಾವಣಗೆರೆ ಜಿಲ್ಲೆಯ ಗುರುಕುಲ ವಸತಿಯುತ ಶಾಲೆಯ ತಂಡವು ಪ್ರಥಮ ಸ್ಥಾನವನ್ನು ಪಡೆದು ಗುಜರಾತ್ ನಲ್ಲಿ ನಡೆಯುವ ರಾಷ್ಟ್ರಮಟ್ಟದ ಕ್ರಿಕೆಟ್ ಪಂದ್ಯಾವಳಿಗೆ ಆಯ್ಕೆಯಾಗಿದ್ದಾರೆ.

ಕೋಲಾರ ಜಿಲ್ಲೆ ಕೆಜಿಫ್ ತಾಲೂಕಿನಲ್ಲಿ ನಡೆದ ಹದಿನಾಲ್ಕು ವರ್ಷದ ವಯೋಮಿತಿಯ ಬಾಲಕರ ರಾಜ್ಯಮಟ್ಟದ ಕ್ರಿಕೆಟ್ ಪಂದ್ಯಾವಳಿಯಲ್ಲಿ ಬೆಂಗಳೂರು, ಮೈಸೂರು, ಬೆಳಗಾಂ, ಗುಲ್ಬರ್ಗ ಸೇರಿದಂತೆ ಕರ್ನಾಟಕ ರಾಜ್ಯದ ನಾಲ್ಕು ವಿಭಾಗಗಳ ಕ್ರೀಡಾಪಟುಗಳ ತಂಡಗಳು ಭಾಗವಹಿಸಿದ್ದವು.

ಫೈನಲ್ ಪಂದ್ಯಾವಳಿಯಲ್ಲಿ ದಾವಣಗೆರೆ ಜಿಲ್ಲಾ ತಂಡವಾಗಿದ್ದ ಗುರುಕುಲ ವಸತಿಯುತ ಶಾಲೆಯ ವಿದ್ಯಾರ್ಥಿಗಳು ಪ್ರಥಮ ಸ್ಥಾನ ಪಡೆದು ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ. ಆಯ್ಕೆಯಾದ ವಿದ್ಯಾರ್ಥಿಗಳನ್ನು ಗುರುಕುಲ ವಸತಿಯುತ ಶಾಲೆಯ ಅಧ್ಯಕ್ಷರಾದ ಅಬ್ದುಲ್ ಆರ್ ಹಾಗೂ ಶಿಕ್ಷಣ ಸಂಯೋಜಕರಾದ ಶ್ವೇತಾ ಮತ್ತು ಮುಖ್ಯೋಪಾಧ್ಯಾಯರು, ದೈಹಿಕ ಶಿಕ್ಷಕರು, ಶಿಕ್ಷಕ ವೃಂದದವರು ಅಭಿನಂದನೆ ಸಲ್ಲಿಸಿದ್ದಾರೆ.

# ಡಿ.15ರಂದು ಕುರುಬ ಸಮಾಜವನ್ನು ಎಸ್ಟಿಗೆ ಸೇರಿಸುವಂತೆ ಆಗ್ರಹಿಸಿ ಬೆಳಗಾವಿ ಚಲೋ

**ದಾವಣಗೆರೆ:** ಕುರುಬ ಸಮಾಜವನ್ನು ಎಸ್ಟಿ ಮೀಸಲಾತಿಗೆ ಸೇರಿಸಬೇಕೆಂದು ಒತ್ತಾಯಿಸಿ ಡಿ.15 ರಂದು ಬೆಳಗಾವಿ ಚಲೋ ನಡೆಸಿ ಅಲ್ಲಿನ ಸುವರ್ಣಸೌಧದ ಎದುರು ಬೆಳಿಗ್ಗೆ 10 ಗಂಟೆಗೆ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಕುರುಬ ಸಮಾಜದ ಗೌರವಾಧ್ಯಕ್ಷ ಡಿ.ಆನಂದಪ್ಪ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕುರುಬ ಸಮಾಜಕ್ಕೆ ಎಸ್ಟಿ ಮೀಸಲಾತಿ ನೀಡುವುದು, ಬೀದರ್,

ಗುಲ್ಬರ್ಗ, ಯಾದಗಿರಿ ಭಾಗದ ಗೊಂಡ ಕುರುಬ. ಮೈಸೂರು ಭಾಗದ ಬೆಟ್ಟ ಕುರುಬ, ಕಾಡ ಕುರುಬ ಕೆಲವೊಂದು ಕುಟುಂಬಗಳಿಗೆ ಮಾತ್ರ ಕೊಡಗು ಜಿಲ್ಲೆಯ ಕುರುಬರಿಗೆ ಮೀಸಲಾತಿ ನೀಡುತ್ತಿದ್ದಾರೆ. ಉಳಿದ ಕುರುಬ ಸಮಾಜಕ್ಕೆ ತಾರತಮ್ಯ ಏಕೆ ? ಇದರ ಬಗ್ಗೆ ರಾಜ್ಯ ಸರ್ಕಾರ ಬೆಳಗಾವಿ ಅಧಿವೇಶನದಲ್ಲಿ ಚರ್ಚೆ ಮಾಡಿ ಪರಿಶಿಷ್ಟ ಪಂಗಡ ಸಿಂಧುತ್ವಕ್ಕೆ ಆದೇಶಿಸಬೇಕು ಎಂದು ಒತ್ತಾಯಿಸಲಾಗುವುದು ಎಂದರು.

ಮುಂದಿನ ಬಜೆಟ್‌ನಲ್ಲಿ ಕುರುಬ ಅಭಿವೃದ್ಧಿ ನಿಗಮ ಮಂಡಳಿ ಸ್ಥಾಪನೆ ಮಾಡಿ ಅದಕ್ಕೆ 900 ಕೋಟಿ ಹಣ

ಬಿಡುಗಡೆ ಮಾಡಬೇಕು. ಜಗದ್ಗುರು ಶ್ರೀ ರೇವಣಸಿದ್ದೇಶ್ವರ ಮೂಲ ಗುರುಪೀಠ, ಚಾಲನೆ, ಪಂಚ ಶಾಖೆ ಪೀಠಗಳು ಸ್ಥಾಪನೆ 5 ಕೋಟಿ ಹಣ ಒದಗಿಸಬೇಕು. ಕುರುಬ ಸಮಾಜದ ದೇವಸ್ಥಾನದ ಅರ್ಚಕರಿಗೆ ಮತ್ತು ಪಟ್ಟದ ಪೂಜಾರಿಗಳಿಗೆ ತಿಂಗಳಿಗೆ 10 ಸಾವಿರ ರೂಪಾಯಿ ಕೊಡಬೇಕು.ಡೊಳ್ಳಿನ ಕಲಾವಿದರಿಗೆ ತಿಂಗಳಿಗೆ 5000 ರೂ. ಕೊಡಬೇಕು ಎಂದರು.

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಪ್ರತಿ ಹಳ್ಳಿಗಳಲ್ಲಿ ರಾಜ್ಯ ಸರಕಾರ ವತಿಯಿಂದ ಜಯಂತಿ ಆಚರಣೆ ಮಾಡಬೇಕು. ಶ್ರೀ ಜಗದ್ಗುರು ರೇವಣಸಿದ್ದೇಶ್ವರ ಸರಕಾರ ವತಿಯಿಂದ ಜಯಂತಿ ಆಚರಣೆ ಮಾಡಬೇಕು.

ಕುರಿಗಾರರ ಮಕ್ಕಳಿಗೆ ಕನಕ ವಸತಿ ಶಾಲೆ ಪ್ರತಿ ಜಿಲ್ಲೆಗೆ ಸ್ಥಾಪನೆ ಮಾಡಬೇಕು ಸೇರಿದಂತೆ ಹಲವು ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಡಿ.15 ರಂದು ಬೃಹತ್ ಪ್ರತಿಭಟನೆ ಮಾಡಲಾಗುವುದು. ದಾವಣಗೆರೆಯಿಂದ ಮೂರು ಸಾವಿರ ಕುರುಬ ಸಮಾಜದ ಬಾಂಧವರು ಭಾಗಿಯಾಗಲಿದ್ದಾರೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ಪಿ.ಬಿ.ಬೀರಪ್ಪ, ದೇವರ ದೊಡ್ಡಪ್ಪ, ಮನು ಎಂ.ದೇವನಗರಿ, ಕೆ.ಎಂ.ವಿಜಯ್ ದೊಡ್ಡಬಾತಿ, ಭಗತ್ ಸಿಂಹ, ಜಿ.ಎನ್.ಮಾಲತೇಶ್, ಹೆಚ್. ಮಾರುತಿ, ಕೆ.ಪರಶುರಾಮಪ್ಪ, ನಾಗರಾಜ್ ಎರೇಸೀಮೆ, ಪಿ.ಜಿ.ಗಂಗಾಧರ, ಸುಜಾತಮ್ಮ ಜಗಳೂರು, ಹನುಮಂತಪ್ಪ ಶೀಗಡಿ ಹರಿಹರ, ಮಾಲತೇಶ್ ಹದಡಿ ಇತರರು ಇದ್ದರು.

# ಜಯನಗರ ಶ್ರೀ ಕೃಷ್ಣದೇವರಾಯ ವಿವಿಯಲ್ಲಿ ಉದ್ಯೋಗ ಕೋಶ ಅನುಷ್ಠಾನ ಕಾರ್ಯಾಗಾರ

**ಬಳ್ಳಾರಿ:** ವಿದ್ಯಾರ್ಥಿಗಳು ತಂತ್ರಜ್ಞಾನದ ಸರಿಯಾದ ಬಳಕೆಯಿಂದ ಜೀವನ ರೂಪಿಸಿಕೊಳ್ಳುವ ಶಿಲ್ಪಿಯಾಗಬಹುದು ಎಂದು ಬೆಂಗಳೂರು ಇಂಡಿಯಾ4ಐಎಎಸ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪಿ.ಸಿ ಶ್ರೀನಿವಾಸ ಹೇಳಿದರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ. ಬಿ ಆರ್ ಅಂಬೇಡ್ಕರ್ ಸಭಾಭವನದಲ್ಲಿ ವಿವಿ ಅಧೀನದ ಕಾಲೇಜುಗಳ ಪ್ಲೇಸ್‌ಮೆಂಟ್ ಸೆಲ್ ಅಧಿಕಾರಿಗಳು ಹಾಗೂ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಎರಡು ದಿನಗಳ 'ಉದ್ಯೋಗ ಮಹತ್ವ ಹಾಗೂ ಉದ್ಯೋಗ ಕೋಶದ ಅನುಷ್ಠಾನ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವೇಗವಾಗಿ ಬೆಳೆಯುತ್ತಿರುವ ತಂತ್ರಜ್ಞಾನ ಯುಗದಲ್ಲಿ ಕೋಟ್ಯಾಂತರ ಉದ್ಯೋಗ ಆಕಾಂಕ್ಷಿಗಳು ಉದ್ಯೋಗಕ್ಕಾಗಿ ಹಂಬಲಿಸುತ್ತಿದ್ದಾರೆ. ಈ ನಿಟ್ಟಿನಲ್ಲಿ ಕನ್ನಡಿಗರೇ ಸ್ಥಾಪಿಸಿರುವ ಸಂಸ್ಥೆಯಲ್ಲಿ ನೂರಾರು ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ನಡೆಸಿ ಯಶಸ್ವಿಯಾಗುತ್ತಿದ್ದಾರೆ ಎಂದರು.

ನಿವೃತ್ತ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ, ಪ್ಲೇಸ್‌ಮೆಂಟ್ ಸೆಲ್‌ನ ರಾಜ್ಯ ನೋಡಲ್ ಅಧಿಕಾರಿ ಪ್ರೊ.ಎ ನಾರಾಯಣ ಪ್ರಸಾದ್ ಮಾತನಾಡಿ, ವಿದ್ಯಾರ್ಥಿಗಳಲ್ಲಿ



ಆತ್ಮವಿಶ್ವಾಸದ ಕೊರತೆಯು ಹೆಚ್ಚಾಗುತ್ತಿದೆ. ತಾತ್ಸಾರ, ಕೀಳರಿಮೆಯನ್ನು ತೆಗೆದು ಹಾಕುವ ಮೂಲಕ ತಮ್ಮಲ್ಲಿರುವ ನೈಪುಣ್ಯತೆ ಬಳಸಿಕೊಳ್ಳಬೇಕು. ಉದ್ಯಮಶೀಲತೆ, ನಾವೀನ್ಯತೆ ಚಿಂತನೆಯನ್ನು ಮೂಡಿಸುವ ಉದ್ದೇಶದಿಂದ ಕಾರ್ಯಾಗಾರವನ್ನು ವಿವಿಯಲ್ಲಿ ಆಯೋಜಿಸಿದ್ದೇವೆ. ಮುಂಬರುವ ದಿನಗಳಲ್ಲಿ ಉದ್ಯೋಗ ಭರವಸೆ ಕೋಶದ ಮೂಲಕ ವಿದ್ಯಾರ್ಥಿಗಳಿಗೆ ಪ್ಲೇಸ್‌ಮೆಂಟ್ ದೊರಕಿಸುವ ಕಾರ್ಯ ಆಗಲಿದೆ ಎಂದು ಹೇಳಿದರು.

ವಿವಿಯ ಕುಲಪತಿ ಪ್ರೊ.ಎಂ ಮುನಿರಾಜು ಅಧ್ಯಕ್ಷತೆ ವಹಿಸಿ ಮಾತನಾಡಿ, ವಿದ್ಯಾರ್ಥಿಗಳಿಗೆ ಐಎಎಸ್, ಕೆಎಎಸ್, ಬ್ಯಾಂಕಿಂಗ್ ಪರೀಕ್ಷೆಗಳಿಗೆ ತಯಾರಿ ಹಾಗೂ ಉದ್ಯೋಗ ಕುರಿತು ಮಾರ್ಗದರ್ಶನದ ಅವಶ್ಯಕತೆಯಿದೆ. ವಿದ್ಯಾರ್ಥಿಗಳು ಉದ್ಯೋಗಾವಕಾಶಗಳನ್ನು ಪಡೆಯಲು ವಿಷಯ ತಜ್ಞರ ಜೊತೆ ಸಂವಾದ, ಉಪನ್ಯಾಸ, ವಿಚಾರಗೋಷ್ಠಿಗಳಲ್ಲಿ ಭಾಗವಹಿಸುವ ಮೂಲಕ ಪ್ರಯೋಜನ ಪಡೆಯಬೇಕು ಎಂದರು.

ಕಾರ್ಯಕ್ರಮದಲ್ಲಿ ಇಂಡಿಯಾ4ಐಎಎಸ್ ಸಂಸ್ಥೆಯ ಸಿಬ್ಬಂದಿ ನಾಗರಾಜು, ವಿವಿಯ ಉದ್ಯೋಗ ಕೋಶದ ಸಂಯೋಜಕರಾದ ಡಾ.ಸುನೀಲ್ ಉಪಸ್ಥಿತರಿದ್ದರು.

ಎರಡು ದಿನಗಳ ಕಾರ್ಯಾಗಾರದಲ್ಲಿ ವಿವಿಯ ಪ್ರಾಧ್ಯಾಪಕರುಗಳು, ಕಾಲೇಜುಗಳ ಉಪನ್ಯಾಸಕರುಗಳು ಹಾಗೂ 200ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಗ್ರಾಮೀಣಾಭಿವೃದ್ಧಿ ನೌಕರರ ಶ್ರಮಕ್ಕೆ ರಾಷ್ಟ್ರೀಯ ಗರಿ

# ಜಲ ಸಂರಕ್ಷಣೆಯಲ್ಲಿ ದೇಶದ ಗಮನ ಸೆಳೆದ ಜಿಲ್ಲೆ / ತಾಲೂಕು ಮಟ್ಟದ ಹಿರಿಯ ಅಧಿಕಾರಿಗಳಿಗೆ ಸನ್ಮಾನ

**ಗದಗ** : ಜಲಸಂಚಾಯಿ ಜನಭಾಗಿದಾರಿ 1.0' ಕಾರ್ಯಕ್ರಮದ ಮೂಲಕ

ರಾಷ್ಟ್ರ ಮಟ್ಟದಲ್ಲಿ ಗದಗ ಜಿಲ್ಲೆಗೆ ಮನ್ನಣೆ ಸಿಗುವಂತೆ ಮಾಡಿದ ಜಿಲ್ಲೆಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಯ ಶ್ರಮ ಮಹತ್ವದ್ದಾಗಿದೆ ಎಂದು ಜಿಲ್ಲಾಧಿಕಾರಿ ಶ್ರೀಧರ ಸಿ.ಎನ್. ಅವರು ಹೇಳಿದರು.

ಗದಗ ಜಿಲ್ಲಾ ಪಂಚಾಯತಿ ಸಭಾ ಭವನದಲ್ಲಿ ಬುಧವಾರ ಹಮ್ಮಿಕೊಂಡ ಪ್ರಗತಿ ಪರಿಶೀಲನೆ ಮತ್ತು ತಾಲೂಕು ಮಟ್ಟದ ಹಿರಿಯ ಅಧಿಕಾರಿಗಳಿಗೆ ಹಮ್ಮಿಕೊಂಡ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಜಲಶಕ್ತಿ ಅಭಿಯಾನದ ಮಹತ್ವದ ಭಾಗವಾಗಿರುವ 'ಜಲಸಂಚಾಯಿ ಜನಭಾಗಿದಾರಿ 1.0' ಕಾರ್ಯಕ್ರಮದಲ್ಲಿ ಗದಗ ಜಿಲ್ಲೆಯು ಮಹತ್ವದ ಸಾಧನೆ ಮಾಡುವ ಮೂಲಕ ಗದಗ ಜಿಲ್ಲೆಯು ಕರ್ನಾಟಕದಲ್ಲಿ ಪ್ರಥಮ ಸ್ಥಾನ ಗಳಿಸಿದ್ದು, ರಾಷ್ಟ್ರ ಮಟ್ಟದಲ್ಲಿ ನಾಲ್ಕನೇ ಸ್ಥಾನ ಪಡೆಯುವ ಮೂಲಕ 25 ಲಕ್ಷ ರೂಪಾಯಿಗಳ ನಗದು ಬಹುಮಾನ ಪಡೆದಿದೆ. ಇದರ ಎಲ್ಲ ಶ್ರೇಯ ಗ್ರಾಮ ಪಂಚಾಯತಿ ಹಂತದಲ್ಲಿ ಸಿಬ್ಬಂದಿಗೆ ಸಲ್ಲುತ್ತದೆ ಎಂದರು.

2024 ಏಪ್ರಿಲ್ 1ರಿಂದ 2025 ಮಾರ್ಚ್ 31ರ ಅವಧಿಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ಮನರೇಗಾ) ಹಾಗೂ ಇತರೆ ಯೋಜನೆಗಳಡಿ ಜಿಲ್ಲೆಯ ಗ್ರಾಮೀಣ ಜನರ ಸಹಭಾಗಿತ್ವದಲ್ಲಿ ಮಳೆ ನೀರಿನ ಸಂರಕ್ಷಣೆಗೆ 11,971 ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ.



ಈ ಬೃಹತ್ ಜಲ ಸಂರಕ್ಷಣೆ ಕಾರ್ಯ ರಾಷ್ಟ್ರದ ಗಮನ ಸೆಳೆದಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿಯವರಾದ ಸಿ.ಆರ್. ಮುಂಡರಗಿ ಅವರು ಮಾತನಾಡಿ, ಜಲ ಸಂಚಯ ಜನ ಭಾಗಿದಾರಿ ಪ್ರಶಸ್ತಿಗೆ ಆಯ್ಕೆ ಮಾಡುವ ಮುನ್ನ ಕೇಂದ್ರ ನೋಡಲ್ ಅಧಿಕಾರಿಗಳು 2025 ಜೂನ್ 16ರಿಂದ 21ರ ವರೆಗೆ ಸ್ಥಳ ಪರಿಶೀಲನೆ, ದಾಖಲೆಗಳ ಪರಿಶೀಲನೆ ನಡೆಸಿ, ಕಾಮಗಾರಿಗಳು ಉನ್ನತ ಮಾನದಂಡಗಳನ್ನು ಪೂರೈಸಿರುವುದು ಖಚಿತಪಡಿಸಿಕೊಂಡು ಮೆಚ್ಚುಗೆ ವ್ಯಕ್ತಪಡಿಸಿದ್ದರು. 465 ಮಳೆ ನೀರು ಕೊಯ್ಲು , 75 ಬೋರವೆಲ್ ರಿಚಾರ್ಜ್, 10 ಚೆಕ್ ಡ್ಯಾಂ ನಿರ್ಮಾಣ ಮಾಡಲಾಗಿದೆ ಎಂದರು.

ಗದಗ ಜಿಲ್ಲೆಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಶ್ರಮ ಎಲ್ಲ ಹಂತದ ಸಿಬ್ಬಂದಿಯ ಮಹತ್ತರ ಕಾರ್ಯ ರಾಷ್ಟ್ರ ಮಟ್ಟದಲ್ಲಿ ಪ್ರಶಸ್ತಿ ಲಭಿಸುವಂತೆ ಮಾಡಿದೆ ಎಂದರು.

ಪ್ರಶಸ್ತಿ ದೊರಕುವಲ್ಲಿ ಶ್ರಮ ವಹಿಸಿದ

ಅಂತ್ಯಂತ ಶ್ರಮಿಸಿದ ಸಹಾಯಕ ಜಿಲ್ಲಾ ಕಾರ್ಯಕ್ರಮ ಸಮನ್ವಯ ಅಧಿಕಾರಿ ಕಿರಣಕುಮಾರ ಎಸ್.ಎಚ್.,& ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಮಲ್ಲಯ್ಯ ಕೊರವನವರ (ಗದಗ), ಶ್ಯಾಮ್ ಸುಂದರ ಇನಾಮದಾರ್ (ನರಗುಂದ), ಕೃಷ್ಣಪ್ಪ ಧರ್ಮರ (ಲಕ್ಷ್ಮೇಶ್ವರ), ವಿಶ್ವನಾಥ ಹೊಸಮನಿ (ಮುಂಡರಗಿ), ಚಂದ್ರಶೇಖರ ಬಿ. ಕಂದಕೂರ (ರೋಣ/ ಗಜೇಂದ್ರಗಡ)

ಸಹಾಯಕ ನಿರ್ದೇಶಕರು (ಉಖಾ) ಕುಮಾರ ಪೂಜಾರ (ಗದಗ), ಸಂತೋಷ ಪಾಟೀಲ (ನರಗುಂದ), ಬಸವರಾಜ ಬಡಿಗೇರ (ಗಜೇಂದ್ರಗಡ), ಸುರೇಶ ಲಮಾಣಿ (ಪಂ ರಾ ಶಿರಹಟ್ಟಿ),

ಇ–ಕೆವೈಸಿ ಯಲ್ಲಿ ಉತ್ತಮ ಪ್ರಗತಿ ಸಾಧಿಸಿದ ಸುರಕೋಡ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ ಶ್ರುತಿ ಸಂಗಳದ, ಎಚ್.ಎಸ್. ಚಟ್ರಿ ಇತರರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಜಿಪಂ ಮುಖ್ಯ ಯೋಜನಾಧಿಕಾರಿಯಾದ ಎ.ಎ. ಕಂಬಾಳಿಮಠ, ಯೋಜನಾಧಿಕಾರಿಗಳಾದ ಎಂ.ವಿ. ಚಳಗೇರಿ, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಇತರರು ಇದ್ದರು.

# ಹಕ್ಕು ಪಡೆಯದೆ ಇರುವ ಠೇವಣಿಗಳ ನಿವಾರಣೆ

**ಹಾಸನ :** ಲೀಡ್ ಬ್ಯಾಂಕ್ ಹಾಸನ ಇವರ ವತಿಯಿಂದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಹಕ್ಕು ಪಡೆಯದೆ ಇರುವ ಠೇವಣಿಗಳ ನಿವಾರಣೆ ಮತ್ತು ತೀರ್ಮಾನ ಶಿಬಿರದಲ್ಲಿ ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾದ ಪ್ರಾದೇಶಿಕ ನಿರ್ದೇಶಕಿ ಕಾಯಾ ತ್ರಿಪಾಠಿಯವರು ಮಾತನಾಡಿ ಹಕ್ಕು ಪಡೆಯದ ಠೇವಣಿಗಳನ್ನು ಸರಿಯಾದ ದಾಖಲೆಗಳ ಮೂಲಕ ಸುಲಭವಾಗಿ ವಾಪಸ್ಸು ಪಡೆಯಲು ಸಾರ್ವಜನಿಕರು ಅನುಸರಿಸಬೇಕಾದ ವಿಧಾನಗಳ ಕುರಿತು ತಿಳಿಸಿಕೊಟ್ಟಿದ್ದಾರೆ.

ಶಿಬಿರದಲ್ಲಿ ಈಗಾಗಲೇ ಸೂಕ್ತ ದಾಖಲೆಗಳನ್ನು ನೀಡಿ ಕ್ಲೈಮ್ ಮಾಡಿದ ಠೇವಣಿಗಳನ್ನು, ಖಾತೆಗಳಿಗೆ ವರ್ಗಾಯಿಸಿದ




ದಾಖಲೆಗಳನ್ನು, ಫಲಾನುಭವಿಗಳಿಗೆ ನೀಡಲಾಯಿತು. ಹಲವು ಗ್ರಾಹಕರು ಹಣವನ್ನು ಕ್ಲೈಮ್ ಮಾಡಲು ಅಗತ್ಯ ಅರ್ಜಿಗಳನ್ನು ಈ ಶಿಬಿರದ ಮೂಲಕ ಬ್ಯಾಂಕುಗಳಿಗೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಬೆಂಗಳೂರಿನ ಆರ್.ಬಿ.ಐ ನ ಸಹಾಯಕ ಮಹಾ ಪ್ರಬಂಧಕರಾದ ಅರುಣ್ ಕುಮಾರ್ ಪಿ, ಲೀಡ್ ಬ್ಯಾಂಕ್‌ನ ಜಿಲ್ಲಾ ಅಗ್ರಣಿ ವ್ಯವಸ್ಥಾಪಕರಾದ ಲತಾ ಸರಸ್ವತಿ, ಹಾಸನದ ಲೈಫ್ ಇನ್ಶೂರೆನ್ಸ್ ಕಾರ್ಪೊರೇಷನ್ ಆಫ್ ಇಂಡಿಯಾದ ಹಿರಿಯ ವ್ಯವಸ್ಥಾಪಕರಾದ ಅರುಳ್ ಸೆಲ್ವಿ, ಜಿಲ್ಲಾ ಪಂಚಾಯಿತಿಯ ಯೋಜನಾ ನಿರ್ದೇಶಕರಾದ ಚಂದ್ರಮೌಳಿ ಮತ್ತಿತರರು ಉಪಸ್ಥಿತರಿದ್ದರು.

# ಸಾಲಿಗ್ರಾಮ ಗಣೇಶ್ ಶೆಣೈಯವರಿಗೆ "ಕರ್ನಾಟಕ ಕಲಾ ಕಾಯಕ ರತ್ನ" ರಾಷ್ಟ್ರೀಯ ಪ್ರಶಸ್ತಿಗೆ ಆಯ್ಕೆ

**ದಾವಣಗೆರೆ:** ಹುಬ್ಬಳ್ಳಿಯ "ವಿಶ್ವದರ್ಶನ" ಕನ್ನಡ ದಿನಪತ್ರಿಕೆಯವತಿಯಿಂದ ದಾವಣಗೆರೆಯ ಖ್ಯಾತ "ದಾವಣಗೆರೆಯ ಸಾಂಸ್ಕೃತಿಕ ರಾಯಭಾರಿ" ಎಂದು ಹೆಸರು ಗಳಿಸಿದ ಕಳೆದ ನಲವತ್ತು ವರ್ಷಗಳಿಂದ ನಿರಂತರವಾಗಿ ಕಠಿಣ ಪರಿಶ್ರಮದಿಂದ ಕಲೆ, ಸಾಹಿತ್ಯ, ಸಂಗೀತ, ಯಕ್ಷಗಾನ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಲಿಗ್ರಾಮ ಗಣೇಶ್ ಶೆಣೈಯವರನ್ನು "ಕರ್ನಾಟಕ ಕಲಾ ಕಾಯಕ ರತ್ನ" ರಾಷ್ಟ್ರೀಯ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಹುಬ್ಬಳ್ಳಿಯ "ವಿಶ್ವದರ್ಶನ" ಕನ್ನಡ ದಿನಪತ್ರಿಕೆಯ ಪ್ರಧಾನ ಸಂಪಾದಕರಾದ ಡಾ.ಎಸ್.ಎಸ್.ಪಾಟೀಲ್ ತಿಳಿಸಿದ್ದಾರೆ.

ದಿನಾಂಕ 27–12–2025ರ ಶನಿವಾರ ದಾವಣಗೆರೆಯ ಕುವೆಂಪು ಕನ್ನಡ ಭವನದಲ್ಲಿ 2025–26ನೇ ಸಾಲಿನ ಈ ರಾಷ್ಟ್ರೀಯ ಪ್ರಶಸ್ತಿಯನ್ನು ಪ್ರದಾನ ಮಾಡಲಿದ್ದು ಕಲಾಕುಂಚ, ಯಕ್ಷರಂಗ, ಸಿನಿಮಾಸಿರಿ, ಕರ್ನಾಟಕ ಸಗಮ ಸಂಗೀತ ಪರಿಷತ್, ಶ್ರೀಮತಿ ಸರಸ್ವತಿ ದಾಸಪ್ಪ ಶೆಣೈ ಪ್ರತಿಷ್ಠಾನ, ಸಿನಿಮಾಸಿರಿ ಸಂಸ್ಥೆ, ಕರ್ನಾಟಕ ಸಗಮ ಸಂಗೀತ ಪರಿಷತ್, ಕನ್ನಡ ಸಾಹಿತ್ಯ ಪರಿಷತ್, ಜಿಲ್ಲಾ ಛಾಯಾಗ್ರಾಹಕ ಸಂಘ, ಗೌಡ ಸಾರಸ್ವತ ಸಮಾಜ, ನವಜ್ಯೋತಿ ಕ್ಲಬ್, ಕರಾವಳಿ ಮಿತ್ರ ಮಂಡಳಿ, ಬಿಚ್ಚತ್ತಿ ಕುಟುಂಬ ಮುಂತಾದ ಅನೇಕ ಸಂಘಟನೆಗಳ ಸರ್ವ ಸದಸ್ಯರು, ಪದಾಧಿಕಾರಿಗಳು ಅಭಿಮಾನದಿಂದ ಅಭಿನಂದಿಸಿದ್ದಾರೆ.

# ಶ್ರೀ ಗಾಯಿತ್ರಿ ಪರಿವಾರದ ಬೆಳ್ಳಿಹಬ್ಬದ ಸಮಾರಂಭವನ್ನು ಕಾರಣಾಂತರದಿಂದ ಮುಂದುವರಿಸಲಾಗಿದೆ

**ದಾವಣಗೆರೆ:** ದಾವಣಗೆರೆಯ ಶ್ರೀ ಗಾಯತ್ರಿ ದೇವಿಯ ಉಪಾಸಕರ ಕ್ರಿಯಾತ್ಮಕ ಆಧ್ಯಾತ್ಮ ಸಂಸ್ಥೆ ಶ್ರೀ ಗಾಯತ್ರಿ ಪರಿವಾರದ ಬೆಳ್ಳಿಹಬ್ಬ ಮತ್ತು ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜೆ ಕಾರಣಾಂತರದಿಂದ ಅನಿವಾರ್ಯವಾಗಿ 14–12–2025 ರಂದು ನಡೆಯಲಿರುವ ಈ ಸಮಾರಂಭ ಮುಂದುವರಿಸಲಾಗಿದೆ ಎಂದು ಪರಿವಾರದ ಅಧ್ಯಕ್ಷರಾದ ಡಾ॥ ರಮೇಶ್ ಪಟೇಲ್ ತಿಳಿಸಿದ್ದಾರೆ.
ಈ ಆಧ್ಯಾತ್ಮಿಕ ಸಮಾರಂಭವನ್ನು ಮುಂದಿನ ದಿನಗಳನ್ನು ನಿರ್ಧಾರ ಮಾಡಲು ಸಭೆ ಕರೆದು ನಿರ್ಣಯ ಮಾಡಲಾಗುತ್ತಿದೆ ಎಂದು ಪರಿವಾರದ ಪ್ರಧಾನ ಕಾರ್ಯದರ್ಶಿಯಾದ ಸಾಲಿಗ್ರಾಮ ಗಣೇಶ್ ಶೆಣೈ ಪ್ರಕಟಿಸಿದ್ದಾರೆ. ಹೆಚ್ಚಿನ ಮಾಹಿತಿಗೆ ಈ ಕೆಳಗಿನ ಸನೀಹವಾಣಿಗಳಿಗೆ 9538732777, 9845277088, 9448979957 ಸಂಪರ್ಕಿಸಬಹುದು ಎಂದು ಪರಿವಾರದ ಕೋಶಾಧ್ಯಕ್ಷರಾದ ಪುರುಷೋತ್ತಮ ಡಿ.ಪಟೇಲ್ ವಿನಂತಿಸಿದ್ದಾರೆ.

# ಮಹಿಳಾ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳಿಗೆ ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

**ಬಳ್ಳಾರಿ:** ಪ್ರಸ್ತಕ ಸಾಲಿನ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಮೂಲಕ ಅನುಷ್ಠಾನಗೊಳಿಸುತ್ತಿರುವ ಉದ್ಯೋಗಿನಿ ಯೋಜನೆ ಮತ್ತು ಚೇತನಾ ಯೋಜನೆ, ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ, ಧನಶ್ರೀ ಯೋಜನೆ ಹಾಗೂ ಮಾಜಿ ದೇವದಾಸಿ ಪುನರ್ವಸತಿ ಯೋಜನೆಗಳಡಿ ವಿವಿಧ ಸೌಲಭ್ಯಗಳಿಗಾಗಿ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು 2026 ರ ಜನವರಿ 15 ರ ವರೆಗೆ ವಿಸ್ತರಿಸಲಾಗಿದೆ. ಭೌತಿಕ ಮತ್ತು ಆರ್ಥಿಕ ಗುರಿ ನಿಗದಿ ಪಡಿಸಿದ್ದು, ಈ ಯೋಜನೆಗಳಿಗೆ ಮಹಿಳಾ ಫಲಾನುಭವಿಗಳು ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು.

# ಆಕಾಶದಲ್ಲಿ ಅದ್ಭುತ ಉಲ್ಕೆಗಳ ಸುರಿಮಳೆ

**ಚಿತ್ರದುರ್ಗ:** ಇದೇ ಡಿಸೆಂಬರ್ 13 ಮತ್ತು 14 ರಂದು ಮಾನವನ ಕುತೂಹಲ ಕೆರಳಿಸುವ ವಿಸ್ಮಯ ನಡೆಯಲಿದೆ. ಈ ಎರಡು ದಿನಗಳ ರಾತ್ರಿ 9 ರಿಂದ ಬೆಳಗಿನ ಜಾವ 4 ಗಂಟೆಯವರೆಗೆ ಪೂರ್ವ ದಿಕ್ಕಿನಲ್ಲಿ ಜೆಮಿನಿ(ಮಿಥುನ) ನಕ್ಷತ್ರರಾಶಿಯ ಕಡೆಯಿಂದ ಪ್ರತಿ ಗಂಟೆಗೆ 25 ರಿಂದ 50 ಉಲ್ಕೆಗಳು ಮಳೆಯ ರೂಪದಲ್ಲಿ ಭೂಮಿಯ ಕಡೆ ಬೀಳುವ ಸುಂದರ ನೋಟ ಕಾಣಸಿಗಲಿದೆ. ಈ ಉಲ್ಕಾಪಾತದ ಮೂಲ 3200 ಫೈತಾನ್ ಕ್ಷುದ್ರಗ್ರಹ. 100 ವರ್ಷಗಳ ಹಿಂದೆ ತನ್ನ ವೇಗ ಬದಲಿಸಿಕೊಂಡು ಸೂರ್ಯನ ಸಮೀಪ ಹಾರಾಟ ಮಾಡುತ್ತಿರುವ ಈ ಬಂಡೆ..ಲೋಹಗಳಿಂದಾದ ಕ್ಷುದ್ರಗ್ರಹ, ಸೂರ್ಯನ ತಾಪಕ್ಕೆ ಕರಗುತ್ತಾ ಧೂಳು ಹಾಗೂ ಚಿಕ್ಕ ಚಿಕ್ಕ ಕಲ್ಲಿನ ಕಣಗಳನ್ನು ಬಾಹ್ಯಾಕಾಶದಲ್ಲಿ ಚೆಲ್ಲುತ್ತಿದೆ. ಈ ಸಮಯದಲ್ಲಿ ವಿದ್ಯುದ್ದೀಪಗಳ ಹಾಗೆ ಬೆಳಕು ಕಾಣುವ ಈ ಅಪರೂಪದ ದೃಶ್ಯಗಳನ್ನು ನೋಡಲು ಮರೆಯಬೇಡಿ ಎಂದು ಹವ್ಯಾಸಿ ಖಗೋಳ ವೀಕ್ಷಕ ಹಾಗೂ ಚಿತ್ರದುರ್ಗ ಸೈನ್ಸ್ ಫೌಂಡೇಶನ್ ಕಾರ್ಯದರ್ಶಿ ಶ್ರೀ ಎಚ್.ಎಸ್. ಟಿ. ಸ್ವಾಮಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ಕೇಟಿಂಗ್ ಸಂಸ್ಥೆಯ ಇಬ್ಬರು ರಾಷ್ಟ್ರಮಟ್ಟಕ್ಕೆ ಆಯ್ಕೆ ಸೈಯದ್ ಹಾಗೂ ನಿಖಿತಾಗೆ ಬಹುಮಾನ



**ಶಿವಮೊಗ್ಗ:** ಇಲ್ಲಿನ ನಮ್ಮ ಶಿವಮೊಗ್ಗ ರೋಲರ್ ಸ್ಕೇಟಿಂಗ್ ಅಸೋಸಿಯೇಷನ್ ನ ಇಬ್ಬರು ಕ್ರೀಡಾಪಟುಗಳು ಕರ್ನಾಟಕ ಶಿಕ್ಷಣ ಇಲಾಖೆ ನಡೆಸಿದ ರಾಜ್ಯಮಟ್ಟದ ಸ್ಕೇಟಿಂಗ್ ಪಂದ್ಯಾವಳಿಯಲ್ಲಿ ಚಿನ್ನ ಹಾಗೂ ಬೆಳ್ಳಿ ಪದಕ ಪಡೆಯುವ ಮೂಲಕ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದು, ಜಿಲ್ಲೆಗೆ ಕೀರ್ತಿ ತಂದ ಕ್ರೀಡಾಪಟುಗಳನ್ನು ಸಂಸ್ಥೆ ಅಭಿನಂದಿಸಿದೆ. ರಾಜ್ಯಮಟ್ಟದ ಸ್ಕೇಟಿಂಗ್ ಕ್ರೀಡಾ ಪಂದ್ಯಾವಳಿಯು ಬೆಂಗಳೂರಿನ ಗಿಡ್ಡೇನಹಳ್ಳಿ ಸಿಟಿ ಸ್ಕೇಟರ್ಸ್ ಅರೆನಾದಲ್ಲಿ ನಡೆದ ರಾಜ್ಯಮಟ್ಟದ ಪಂದ್ಯಾವಳಿಯಲ್ಲಿ 2000, 1000 ಹಾಗೂ 500 ಮೀಟರ್ ಸ್ಕೇಟಿಂಗ್ ಪಂದ್ಯಾವಳಿಯಲ್ಲಿ ನಮ್ಮ ಶಿವಮೊಗ್ಗ ಸಂಸ್ಥೆಯ ಕ್ರೀಡಾಪಟುಗಳು ಮೂರು ಚಿನ್ನದ ಪದಕ ಪಡೆದಿದ್ದು, ಜಿಲ್ಲೆಗೆ ಕೀರ್ತಿ ತಂದಿದ್ದಾರೆ.ಶಿವಮೊಗ್ಗದ ಜುಲ್ಫಿಕರ್ ಹಾಗೂ ನಾಜಿಮಾ ದಂಪತಿಗಳ ಮಗನಾಗಿರುವ ಪೈಸಲ್ ಸಾಧನೆಗೆ ಅಭಿನಂದನೆ ಸಲ್ಲಿಸಲಾಗಿದೆ. ಅಂತೆಯೇ ಎರಡು ಬೆಳ್ಳಿ ಪದಕ ಪಡೆದ ನಿಖಿತಾ ಎನ್. ಉಪಾಧ್ಯ ಅವರು 500 ಮೀ ರೇಸ್ ಹಾಗೂ 3000 ಮೀಟರ್ ರೋಡ್ ರೇಸ್ ಸ್ಪರ್ಧೆಯಲ್ಲಿ ದ್ವಿತೀಯ ಬಹುಮಾನ ಪಡೆದಿದ್ದಾರೆ. ಜಿ. ಆರ್. ನಾಗರಾಜ ಹಾಗು ಅಶ್ವಿನಿ ಹೆಚ್. ವಿ. ದಂಪತಿಗಳ ಪುತ್ರಿ ನಿಖಿತಾ ಸಾಧನೆಗೆ ಅಭಿನಂದಿಸಲಾಗಿದೆ.ಈ ಇಬ್ಬರು ಕ್ರೀಡಾಪಟುಗಳು ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದು, ಇವರು ನಮ್ಮ ಶಿವಮೊಗ್ಗ ಸ್ಕೇಟಿಂಗ್ ಸಂಸ್ಥೆಯ ವಿಶ್ವಾಸ ಹಾಗೂ ಅತೀಶ್ ಅವರ ಬಳಿ ತರಬೇತಿ ಪಡೆಯುತ್ತಿದ್ದರು. ಜಿಲ್ಲೆಗೆ ಕೀರ್ತಿ ತಂದ ಕ್ರೀಡಾಪಟುಗಳನ್ನು ನಮ್ಮ ಶಿವಮೊಗ್ಗ ಸಂಸ್ಥೆಯ ಅಧ್ಯಕ್ಷ ಮೋಹನ್ ಕುಮಾರ್, ಪ್ರಧಾನ ಕಾರ್ಯದರ್ಶಿ ಎಂ ರವಿ ಹಾಗೂ ಸಂಸ್ಥೆಯ ಎಸ್ ಕೆ ಗಜೇಂದ್ರ ಸ್ವಾಮಿ, ಉಮಾ ರವಿ, ಯುವಜನ ಮತ್ತು ಕ್ರೀಡಾಧಿಕಾರಿ ರೇಖ್ಯಾನಾಯ್ಕ್ ಹಾಗೂ ಸಂಸ್ಥೆಯ ಪದಾಧಿಕಾರಿಗಳು, ಪೋಷಕರು ಅಭಿನಂದಿಸಿದ್ದಾರೆ.

# ಚಿಂತೂರು-ಮರೇಡುಮಿಲ್ಲಿ ಘಾಟ್ ರಸ್ತೆಯಲ್ಲಿ ಬಸ್ ಕಂದಕಕ್ಕೆ ಉರುಳಿಬಿದ್ದು 9 ಯಾತ್ರಿಕರು ಸಾವು, 22 ಮಂದಿಗೆ ಗಾಯ

**ವಿಶಾಖಪಟ್ಟಣಂ:** ಚಿಂತೂರು-ಮರೇಡುಮಿಲ್ಲಿ ಘಾಟ್ ರಸ್ತೆಯಲ್ಲಿ ಶುಕ್ರವಾರ ನಸುಕಿನ ಜಾವ ಖಾಸಗಿ ಟ್ರಾವೆಲ್ ಬಸ್ ನಿಯಂತ್ರಣ ತಪ್ಪಿ ಕಂದಕಕ್ಕೆ ಉರುಳಿ ಬಿದ್ದ ಪರಿಣಾಮ ಕನಿಷ್ಠ 9 ಮಂದಿ ಪ್ರಯಾಣಿಕರು ಮೃತಪಟ್ಟಿದ್ದಾರೆ.

ಭದ್ರಾಚಲಂ ದೇವಸ್ಥಾನದ ದರ್ಶನ ಪಡೆದು ಅನ್ನಾವರಂ ಕಡೆಗೆ 35 ಮಂದಿ ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಬಸ್ ಇದಾಗಿತ್ತು. ಆರಂಭಿಕ ಮಾಹಿತಿಯ ಪ್ರಕಾರ, ಕನಿಷ್ಠ ಒಂಬತ್ತು ಜನರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಇಪ್ಪತ್ತೆರಡು ಜನರು ಗಾಯಗೊಂಡಿದ್ದು, ಚಿಕಿತ್ಸೆಗಾಗಿ ಹತ್ತಿರದ ವೈದ್ಯಕೀಯ ಸೌಲಭ್ಯಗಳಿಗೆ ಸ್ಥಳಾಂತರಿಸಲಾಗುತ್ತಿದೆ. ಎಲ್ಲರೂ ಚಿತ್ತೂರು ಜಿಲ್ಲೆಯ ನಿವಾಸಿಗಳಾಗಿದ್ದು, ಅಪಘಾತದ ಸಮಯದಲ್ಲಿ ಅವರನ್ನು ತೀರ್ಥಯಾತ್ರೆಗೆ ಕರೆದೊಯ್ಯಲಾಗಿತ್ತು.

ರಾಜುಗರಿಮೆಟ್ಟ ತಿರುವಿನಲ್ಲಿ ಈ ಘಟನೆ ಸಂಭವಿಸಿದ್ದು, ಚಾಲಕ ವಾಹನದ ನಿಯಂತ್ರಣ ಕಳೆದುಕೊಂಡು ಕಂದಕಕ್ಕೆ ಬಸ್ ಉರುಳಿ ಬಿದ್ದಿತು ಎಂದು ಹೇಳಲಾಗುತ್ತಿದೆ.

ಮಾಹಿತಿ ಪಡೆದ ನಂತರ ಪೊಲೀಸ್ ಸಿಬ್ಬಂದಿ ಮತ್ತು ಸ್ಥಳೀಯ ನಿವಾಸಿಗಳು ಸ್ಥಳಕ್ಕೆ ಧಾವಿಸಿ ಕತ್ತಲೆ ಮತ್ತು ಕಠಿಣ ಭೂಪ್ರದೇಶದಲ್ಲಿ ರಕ್ಷಣಾ ಕಾರ್ಯಾಚರಣೆಯನ್ನು ಪ್ರಾರಂಭಿಸಿದರು. ಹೆಚ್ಚಿನ ವಿವರಗಳನ್ನು ನಿರೀಕ್ಷಿಸಲಾಗಿದೆ.



## ಸಿಎಂ ಆಘಾತ , ಸಂತಾಪ

ಅಪಘಾತದ ಸುದ್ದಿ ಕೇಳಿ ಆಂಧ್ರ ಪ್ರದೇಶ ಸಿಎಂ ಎನ್ ಚಂದ್ರಬಾಬು ನಾಯ್ಡು ಆಘಾತ ವ್ಯಕ್ತಪಡಿಸಿದ್ದಾರೆ. ಚಿತ್ತೂರು ಜಿಲ್ಲೆಯ ಅಲ್ಲೂರಿ ಸೀತಾರಾಮ ರಾಜು ಬಳಿ ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಖಾಸಗಿ ಬಸ್ ಅಪಘಾತ ಸುದ್ದಿ ನಮ್ಮನ್ನು ತೀವ್ರವಾಗಿ ಆಘಾತಗೊಳಿಸಿದೆ. ಈ ಅಪಘಾತದಲ್ಲಿ ಹಲವಾರು ಜೀವಗಳು ಬಲಿಯಾಗಿವೆ ಎಂಬುದು ಹೃದಯವಿದ್ರಾವಕ. ಅಪಘಾತದ ಬಗ್ಗೆ ಅಧಿಕಾರಿಗಳೊಂದಿಗೆ ಮಾತನಾಡಿದ್ದೇನೆ. ಸಂತ್ರಸ್ತರಿಗೆ ನೀಡಲಾಗುತ್ತಿರುವ ಸಹಾಯದ ಬಗ್ಗೆ ವಿವರಗಳನ್ನು ಸಂಗ್ರಹಿಸಿದ್ದೇನೆ. ಗಾಯಾಳುಗಳಿಗೆ ಉತ್ತಮ ವೈದ್ಯಕೀಯ ನೆರವು ಸಿಗುವಂತೆ ನೋಡಿಕೊಳ್ಳಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಅಪಘಾತದಲ್ಲಿ ಪ್ರಾಣ ಕಳೆದುಕೊಂಡವರ ಕುಟುಂಬಗಳಿಗೆ ಸರ್ಕಾರ ಬೆಂಬಲವಾಗಿ ನಿಲ್ಲುತ್ತದೆ ಎಂದು ಎಕ್ಸ್ ಖಾತೆಯಲ್ಲಿ ತಿಳಿಸಿದ್ದಾರೆ.

## ಪ್ರಧಾನಿ ಆಘಾತ, ಪರಿಹಾರ ಘೋಷಣೆ

ಆಂಧ್ರಪ್ರದೇಶದ ಅಲ್ಲೂರಿ ಸೀತಾರಾಮ ರಾಜು ಜಿಲ್ಲೆಯಲ್ಲಿ ಸಂಭವಿಸಿದ ಬಸ್ ಅಪಘಾತದಲ್ಲಿ ಮೃತಪಟ್ಟವರ ಬಗ್ಗೆ ಕೇಳಿ ತೀವ್ರ ನೋವಾಗಿದೆ. ಈ ಸಂಕಷ್ಟದ ಸಮಯದಲ್ಲಿ ಸಂತ್ರಸ್ತ ಜನರು ಮತ್ತು ಅವರ ಕುಟುಂಬದ ಜೊತೆ ನಿಲ್ಲುತ್ತೇವೆ. ಗಾಯಾಳುಗಳು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸುತ್ತೇನೆ.



ಮೃತರ ಸಂಬಂಧಿಕರಿಗೆ ಪಿಎಂಎನ್ಆರ್ಎಫ್‌ನಿಂದ 2 ಲಕ್ಷ ರೂಪಾಯಿ ಪರಿಹಾರ ಮತ್ತು ಗಾಯಾಳುಗಳ ಚಿಕಿತ್ಸೆಗೆ ತಲಾ 50 ಸಾವಿರ ರೂಪಾಯಿ ನೀಡಲಾಗುವುದು ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಪ್ರಕಟಿಸಿದ್ದಾರೆ.

# ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ

**ಚಿತ್ರದುರ್ಗ:** ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನುಜಿಲ್ಲೆಯಲ್ಲಿ ಇದೇ ಡಿ. 21 ರಿಂದ 24 ವರೆಗೆ ಹಮ್ಮಿಕೊಳ್ಳಲಾಗಿದೆ.ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಜಿಲ್ಲೆಯಲ್ಲಿ ಒಟ್ಟು 1169 ತಂಡಗಳನ್ನು ರಚಿಸಿಕೊಂಡು ಕಳೆದ ಬಾರಿ ನಡೆಸಿದ ಲಸಿಕಾ ಕೇಂದ್ರಗಳಲ್ಲಿ ಈ ಬಾರಿಯೂ ಸಹ ಎರಡು ಹನಿಗಳ ಪೋಲಿಯೋ ಲಸಿಕೆಯನ್ನು ಹಾಕಲಾಗುವುದು. ಕಾರ್ಯಕ್ರಮದ ಮೇಲ್ವಿಚಾರಣೆಗಾಗಿ 239 ಮೇಲ್ವಿಚಾರಕರನ್ನು ನೇಮಿಸಲಾಗಿದೆ.ಜಿಲ್ಲೆಯಲ್ಲಿ 0-5 ವರ್ಷದೊಳಗಿನ ಮಕ್ಕಳಿಗೆ ಈ ಹಿಂದೆ ಎಷ್ಟೆ ಬಾರಿ ಪೋಲಿಯೋ ಹನಿ ಹಾಕಿಸಿದ್ದರೂ ಪುನಃ ಇದೇ ಡಿ.21 ರಿಂದ 24 ರವರೆಗೆ ಪೋಲಿಯೋ ಹಾಕಿಸಲು 1,26,361 ಮಕ್ಕಳನ್ನು ಗುರುತಿಸಲಾಗಿದೆ.ಸಾರ್ವಜನಿಕರು, ಸರ್ಕಾರೇತರ ಸಂಘ-ಸಂಸ್ಥೆಗಳು, ಧಾರ್ಮಿಕ ಮುಖಂಡರು, ಚುನಾಯಿತ ಪ್ರತಿನಿಧಿಗಳು ಹಾಗೂ ಇತರೆ ಅಧಿಕಾರಿ ವರ್ಗದವರು ಸೇರಿದಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯವರ ಸಹಕಾರದೊಂದಿಗೆ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಹಕರಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಮನವಿ ಮಾಡಿದ್ದಾರೆ.

# ಭೀಕರ ಸಿಲಿಂಡರ್ ಸ್ಫೋಟ, 7 ಮಂದಿ ಗಂಭೀರ ಗಾಯ, ಇಡೀ ಮನೆ ನೆಲಸಮ



**ಕೊಪ್ಪಳ:** ಭೀಕರ ಸಿಲಿಂಡರ್ ಸ್ಫೋಟ, 7 ಮಂದಿ ಗಂಭೀರ ಗಾಯ, ಇಡೀ ಮನೆ ನೆಲಸಮ

ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲೂಕಿನ ಹೆಬ್ಬಾಳ ಗ್ರಾಮದಲ್ಲಿ ಭೀಕರ ಸಿಲಿಂಡರ್ ಸ್ಫೋಟ ಸಂಭವಿಸಿ ಏಳು ಜನರಿಗೆ ಗಂಭೀರ ಗಾಯಗಳಾಗಿವೆ. ಹೊಸ ಗ್ಯಾಸ್ ಸಿಲಿಂಡರ್ ಅಳವಡಿಕೆ ಮಾಡುತ್ತಿದ್ದ ವೇಳೆ ಇರಿಸಿದ್ದ ಸಿಲಿಂಡರ್ ಸ್ಫೋಟಗೊಂಡಿದ್ದು, ಮನೆಯಲ್ಲಿದ್ದವರೆಲ್ಲರೂ ತೀವ್ರ ಗಾಯಗೊಂಡ ದುರ್ಘಟನೆ ನಡೆದಿದೆ.

ಗಂಗಾವತಿ ಗ್ರಾಮೀಣ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ನಡೆದಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

**ನಡೆದ ಘಟನೆ :** ಹೆಬ್ಬಾಳ ಗ್ರಾಮದ ಒಂದು ಮನೆಯಲ್ಲಿ ಹಳೆ ಸಿಲಿಂಡರ್ ಖಾಲಿಯಾಗಿ ಹೊಸ ಸಿಲಿಂಡರ್ ನ್ನು ಫಿಕ್ಸ್ ಮಾಡುತ್ತಿದ್ದರು. ಹೊಸ ಸಿಲಿಂಡರ್ ಅಳವಡಿಸುತ್ತಿದ್ದಾಗ ಅಚಾನಕಾಗಿ ಸ್ಫೋಟ ಸಂಭವಿಸಿ, ಮನೆಯ ಗೋಡೆಗಳು ಕುಸಿದುಬಿದ್ದಿದೆ.

ಅವಘಡದಲ್ಲಿ ಗಾಯಗೊಂಡವರನ್ನು ರಾಜ (38), ಸುರೇಶ್ (35), ದುರುಗಪ್ಪ (27), ಹುಸೇನಮ್ಮ (40), ನಾಗರಾಜ (18), ದುರುಗಮ್ಮ (17), ವಿಷ್ಣು (16), ಶ್ರೀಕಾಂತ್ (22) ಎಂದು ಗುರುತಿಸಲಾಗಿದೆ. ಎಲ್ಲರನ್ನೂ ಗಂಗಾವತಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಗಾಯಾಳುಗಳ ಸ್ಥಿತಿ ಕಂಡು ಕುಟುಂಬಸ್ಥರು ಕಣ್ಣೀರು ಹಾಕುತ್ತಿದ್ದಾರೆ.

ಹೊಸ ಸಿಲಿಂಡರ್ ಅಳವಡಿಸುತ್ತಿರುವಾಗ ಗ್ಯಾಸ್ ಲೀಕ್ ಆಗಿ ಸ್ಫೋಟ

ಪ್ರಾಥಮಿಕ ವರದಿಯ ಪ್ರಕಾರ, ಹೊಸ ಸಿಲಿಂಡರ್ ಅಳವಡಿಸುತ್ತಿರುವಾಗ ಗ್ಯಾಸ್ ಲೀಕ್ ಆಗಿ ಸ್ಫೋಟ ಸಂಭವಿಸಿದಂತೆ ತೋರುತ್ತದೆ. ಸಿಲಿಂಡರ್ ಅಳವಡಿಕೆಯಲ್ಲಿ ಸುರಕ್ಷತಾ ನಿಯಮಗಳನ್ನು ಪಾಲಿಸದೆ ಇರುವುದು ಕಾರಣವಾಗಿರಬಹುದು ಎಂದು ಪೊಲೀಸರು ತನಿಖೆಯಲ್ಲಿ ಸೂಚಿಸಿದ್ದಾರೆ. ಗಂಗಾವತಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖಾ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪಂಚನಾಮೆ ನಡೆಸಿದ್ದಾರೆ. ಸಿಲಿಂಡರ್ ಸರಬರಾಜು ಮಾಡುವ ಕಂಪನಿಯ ಸಿಬ್ಬಂದಿಯನ್ನು ವಿಚಾರಣೆಗೆ ಕರೆಸಿಕೊಳ್ಳಲಾಗಿದ್ದು, ಗ್ಯಾಸ್ ಅಳವಡಿಕೆಯಲ್ಲಿ ತಪ್ಪುಗಳಿದ್ದರೆ ಕಠಿಣ ಕ್ರಮ ತೆಗೆದುಕೊಳ್ಳುವುದಾಗಿ ಜಿಲ್ಲಾ ಪೊಲೀಸ್ ವರಿಷ್ಠರು ತಿಳಿಸಿದ್ದಾರೆ.

# ಸರ್ಕಾರಿ ಶಾಲೆ ಮುಚ್ಚುವ ಪ್ರಕ್ರಿಯೆಯನ್ನು ಸರ್ಕಾರ ಕೂಡಲೇ ನಿಲ್ಲಿಸಬೇಕು: ಹಲವು ಸಂಘಟನೆಗಳ ಒತ್ತಾಯ

**ದಾವಣಗೆರೆ:** ರಾಜ್ಯ ಸರ್ಕಾರವು ಪಂಚಾಯಿತಿಗೊಂದು ಕರ್ನಾಟಕ ಸಾರ್ವಜನಿಕ ಶಾಲೆಯನ್ನು ಪ್ರಾರಂಭಿಸುವ ನೆಪದಲ್ಲಿ 25,683 ಶಾಲೆಗಳನ್ನು ಮುಚ್ಚುವ ಹುನ್ನಾರ ಸರಿಯಲ್ಲ. ಈ ಕೂಡಲೇ ಸರ್ಕಾರಿ ಶಾಲೆ ಮುಚ್ಚುವ ಪ್ರಕ್ರಿಯೆಯನ್ನು ನಿಲ್ಲಿಸಬೇಕು ಎಂದು ಸರ್ಕಾರಿ ಶಾಲೆ ಉಳಿಸಿ. ಬೆಳೆಸಿ ಸಮನ್ವಯ ವೇದಿಕೆ ಮತ್ತು ಕರ್ನಾಟಕ ರಾಜ್ಯ ಎಸ್.ಡಿ.ಎಂ.ಸಿ. ಮತ್ತು ಮೇಲುಸ್ತುವಾರಿ ಸಮಿತಿಗಳ ಸಮನ್ವಯ ವೇದಿಕೆ, ದಾವಣಗೆರೆ ಜಿಲ್ಲಾ ಘಟಕದ ಮುಖಂಡ, ಡಿಎಸ್ಎಸ್ ರಾಜ್ಯ ಸಂಚಾಲಕ ಹೆಚ್. ಮಲ್ಲೇಶ್ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2016 ಮತ್ತು 2017ರ ಸರ್ಕಾರಿ ಶಾಲೆಗಳ ಸಬಲೀಕರಣ ಸಮಿತಿ ನೀಡಿದ ವರದಿಯನ್ನು ಚರ್ಚೆ ಮಾಡಿ ಅದರಲ್ಲಿರುವ ಅಂಶಗಳನ್ನು ಕೂಡಲೇ ಜಾರಿಗೊಳಿಸಬೇಕು.ರಾಜ್ಯ ಶಿಕ್ಷಣ ನೀತಿ ಆಯೋಗ ರೂಪಿಸಿರುವ ರಾಜ್ಯ ಶಿಕ್ಷಣ ನೀತಿಯನ್ನು ಚಳಿಗಾಲದ ವಿಧಾನಸಭಾ ಅಧಿವೇಶನದಲ್ಲಿ ಮಂಡಿಸಿ ಜಾರಿಗೆ ತರಬೇಕು. ಶಿಕ್ಷಣ ಹಕ್ಕು ಕಾಯಿದೆ 2009ನ್ನು ಪೂರ್ಣವಾಗಿ ಮತ್ತು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಕ್ರಿಯಾ ಯೋಜನೆ ರೂಪಿಸಬೇಕು. ಈ ಕ್ರಿಯಾ ಯೋಜನೆ ಜಾರಿಗೆ ಸರ್ಕಾರ ಅಗತ್ಯ ಹಣಕಾಸನ್ನು ಒದಗಿಸಬೇಕು ಎಂದರು.

ಆಂಗ್ಲ ಭಾಷೆಯನ್ನು ಒಂದು ಭಾಷೆಯನ್ನಾಗಿ ಪ್ರಭುತ್ವದ ಮಟ್ಟಕ್ಕೆ ಕಲಿಸಲು ನುರಿತ ಆಂಗ್ಲ ಭಾಷಾ ಶಿಕ್ಷಕರನ್ನು ನೇಮಿಸಬೇಕು. ಭಾಷೆಯನ್ನು ಪರಿಣಾಮಕಾರಿಯಾಗಿ ಕಲಿಸಲು ಅಗತ್ಯ ಸಂಪನ್ಮೂಲ ಮತ್ತು ತರಬೇತಿಯನ್ನು ನೀಡಬೇಕು. ರಾಜ್ಯದಲ್ಲಿ ತ್ರಿಭಾಷ ಸೂತ್ರದ ಬದಲು ದ್ವಿಭಾಷ ಸೂತ್ರವನ್ನು ಜಾರಿಗೊಳಿಸಬೇಕು. ಕನ್ನಡ ಆಡಳಿತ ಭಾಷೆಯನ್ನಾಗಿ ಮತ್ತು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಸರ್ಕಾರಿ ಶಾಲಾ ಕಾಲೇಜುಗಳಲ್ಲಿ ಕಲಿತ ವಿದ್ಯಾರ್ಥಿಗಳಿಗೆ ಸರ್ಕಾರಿ ಉದ್ಯೋಗಗಳನ್ನು ಮೀಸಲಿಡಬೇಕು ಎಂದು ಹೇಳಿದರು.

ಒಂದರಿಂದ ಮೂರು ಕಿಲೋ ಮೀಟರ್ ವ್ಯಾಪ್ತಿಯಲ್ಲಿನ ಎಲ್ಲಾ ಶಾಲೆಗಳ ಸ್ಕೂಲ್ ಮ್ಯಾಪಿಂಗ್ ಕೈಗೊಳ್ಳಬೇಕು. ಅದರ ಅನ್ವಯ ಈಗಾಗಲೇ ಸರ್ಕಾರಿ, ಸರ್ಕಾರಿ ಅನುದಾನಿತ ಕಿರಿಯ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯಿದ್ದಲ್ಲಿ, ಎಷ್ಟೇ ಒತ್ತಡವಿದ್ದರೂ ಖಾಸಗಿ ಅನುದಾನ ರಹಿತ ಶಾಲೆಗಳಿಗೆ ಅನುಮತಿ ನೀಡಬಾರದು. ಬದಲಿಗೆ ಸರ್ಕಾರಿ, ಸರ್ಕಾರಿ ಅನುದಾನಿತ ಶಾಲೆಗಳನ್ನು ನೆರೆಹೊರೆಯ ಶಾಲೆಯನ್ನಾಗಿ ಅಭಿವೃದ್ಧಿಪಡಿಸಲು ಎಲ್ಲಾ ಬಗೆಯ ಕ್ರಮಗಳನ್ನು ಕೈಗೊಳ್ಳಬೇಕು. ಅಗತ್ಯವಿದ್ದಲ್ಲಿ ಹೊಸ ಶಾಲೆಗಳನ್ನು ಸರ್ಕಾರ ತೆರೆಯಬೇಕು.

ಜಿಲ್ಲಾ ಸಂಚಾಲಕ ಕುಂದವಾಡ ಮಂಜುನಾಥ್ ಮಾತನಾಡಿ, ಯುಡೈಸ್, ಸ್ಯಾಟ್‌ಗಳ ಮೂಲಕ ಸಂಗ್ರಹಿಸುವ ಶಾಲಾ ಸಂಪನ್ಮೂಲಗಳ ಮಾಹಿತಿ, ಮೂಲಸೌಕರ್ಯ ವಿದ್ಯಾರ್ಥಿ, ಶಿಕ್ಷಕರ ಇತ್ಯಾದಿ ಮಾಹಿತಿಯು ಈಗಾಗಲೇ ಮುಖ್ಯ ಶಿಕ್ಷಕರಿಗೆ ಲಭ್ಯವಿದ್ದು, ಈ ಎಲ್ಲಾ ಮಾಹಿತಿ ಎಸ್.ಡಿ.ಎಂ.ಸಿ. ಸದಸ್ಯರು. ಒಂದು ಪೋಷಕರು ಮತ್ತು ಸಾರ್ವಜನಿಕರಿಗೆ ಲಭ್ಯವಾಗುವಂತೆ ಅಭಿವೃದ್ಧಿಪಡಿಸಿ ಎಲ್ಲಾ ಎಸ್ಡಿಎಂಸಿ ಸದಸ್ಯರಿಗೆ ಮತ್ತು ಪಾಲಕರಿಗೆ ಒದಗಿಸಬೇಕು.

ಏಕಪಕ್ಷೀಯವಾಗಿ ತೀರ್ಮಾನ ಕೈಗೊಳ್ಳುತ್ತಿರುವ ಪ್ರಾಥಮಿಕ ಮತ್ತು ಪ್ರೌಢಶಾಲಾ ಸಚಿವರನ್ನು ಅವರ ಹುದ್ದೆಯಿಂದ ತೆರವುಗೊಳಿಸಬೇಕು. ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯ ಕುರಿತು ಆಳವಾದ ಒಳನೋಟ, ಬದ್ಧತೆ ಮತ್ತು ಪ್ರಜಾಸತ್ತಾತ್ಮಕವಾಗಿ ಕಾರ್ಯನಿರ್ವಹಿಸುವ ಅನುಭವ ಇರುವ ಶಾಸಕರನ್ನು ಸಚಿವರನ್ನಾಗಿ ನೇಮಿಸಬೇಕು ಸೇರಿದಂತೆ ಇತರೆ ಹಕ್ಕೊತ್ತಾಯ ಮಂಡಿಸಿದರು.

ಸುದ್ದಿಗೋಷ್ಠಿಯಲ್ಲಿ ಲಿಂಗರಾಜ ಎಂ.ಗಾಂಧೀನಗರ, ಎಸ್.ಕೆ.ಆದಿಲ್ ಖಾನ್, ಸತೀಶ್ ಅರವಿಂದ್, ರಾಕೇಶ್ ಕಕ್ಕರಗೊಳ್ಳ, ಪ್ರವೀಣ್ ಕಕ್ಕರಗೊಳ್ಳ, ಸುರೇಶ್ ಶಿಡ್ಲಪ್ಪ, ಅರುಣ್, ಜೀವನ, ಚಿದಾನಂದಪ್ಪ ಇತರರು ಇದ್ದರು.

# ಗುರುವಂದನೆ ಹಾಗೂ ಸ್ನೇಹಸಮ್ಮಿಲನ

**ಗದಗ:** ಬೆಟಗೇರಿಯ ಬಾಸೆಲ್‌ಮಿಷನ್ ಕೃಷಿ ಪ್ರೌಢಶಾಲೆಯ 2001-02ನೇ ಸಾಲಿನ ಎಸ್ಎಸ್ಎಲ್‌ಸಿ ವಿದ್ಯಾರ್ಥಿಗಳಿಂದ ಗುರುವಂದನೆ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮ ಡಿ.13 ರಂದು ಮುಂಜಾನೆ 10 ಗಂಟಗೆ ಜರುಗಲಿದೆ. 1962ರಲ್ಲಿ ಆರಂಭಗೊಂಡ ಬಾಸೆಲ್‌ಮಿಷನ್ ಕೃಷಿ ಪ್ರೌಢಶಾಲೆಯಲ್ಲಿ ವಿದ್ಯಾಭ್ಯಾಸ ಮಾಡಿದ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಉನ್ನತ ಮಟ್ಟದಲ್ಲಿ ಜೀವನ ನಡೆಸುತ್ತಿದ್ದಾರೆ. ಇಲ್ಲಿನ ಶಿಕ್ಷಕ ವೃಂದದ ಮಾರ್ಗದರ್ಶನದಲ್ಲಿ ಇಂದು ಐಎಎಸ್, ಐಪಿಎಸ್, ಕೆಎಎಸ್ ಅಧಿಕಾರಿಗಳು, ಇಂಜಿನೀಯರ್‌ಗಳು, ದೇಶ ಕಾಯುವ ಯೋಧರು, ರಾಜಕಾರಣಿಗಳಾಗಿ ಉನ್ನತ ಮಟ್ಟದಲ್ಲಿದ್ದಾರೆ. ಹಲವಾರು ಜನರು ದೊಡ್ಡ ಕಂಪನಿಗಳಲ್ಲಿ ಸೇವೆಸಲ್ಲಿಸುತ್ತಿದ್ದಾರೆ. 25 ವರ್ಷಗಳ ಹಿಂದೆ ತಾವು ಕಲಿತ ಶಾಲೆಗೆ ಹಾಗೂ ಕಲಿಸಿದ ಶಿಕ್ಷಕ ವೃಂದಕ್ಕೆ ಡಿ. 13 ರಂದು ಎಪ್ಪತ್ತು ಜನ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಸೇರಿ ಗುರುವಂದನೆ ಸಲ್ಲಿಸಲಿದ್ದಾರೆ.ಶಿಕ್ಷಕ-ಶಿಕ್ಷಕಿಯರಾದ ಸಂತೋಷ ನಂದಿಕೇಶ್ವರ, ಜೆಸ್ಸಿಕಾ ಡಿಕ್ರೂಜ್, ಗೀತಾ ಗುಂಡಿ, ರೋಜಲಿನ್ ಜಾಕಬ್, ಅನಿತಾ ಆಸಂಗಿ, ಶೈಲಜಾ ಗೌಡರ, ಎಂ.ಡಿ. ತಹಸೀಲ್ದಾರ್, ಮೋಹನ ಕಲಕೋಟಿ, ಎಸ್. ಪುಷ್ಪಾರಾಣಿ, ರೈಚೆಲ್ ಮಿರಜಕರ್, ದಿವ್ಯಾ ಕಿಣಗಿ, ರಮಾನಂದ ಖೋಡೆ, ಎಂ.ಎಸ್. ಗೌಡರ, ಭಾಗ್ಯಾ ಪಿ.ಬಿ., ಬಾಲಪ್ಪ ಜೋಗಿನ ಅವರನ್ನು ಸನ್ಮಾನಿಸಲಾಗುವುದು ಎಂದು ಹಳೆಯ ವಿದ್ಯಾರ್ಥಿ ಗದಗ-ಬೆಟಗೇರಿ ನಗರಸಭೆ ಮಾಜಿ ಸದಸ್ಯರಾದ ಮಂಜುನಾಥ ಹೇಮಣ್ಣ ಮುಳಗುಂದ ತಿಳಿಸಿದ್ದಾರೆ.

# CSR ಅಡಿಯಲ್ಲಿ ಅಭಿವೃದ್ಧಿ; ಮರಳಿ ಗತ ವೈಭವ ಪಡೆದ 'ಕನೆಕಲ್ಲು' ಕೆರೆ!



**ಬೆಂಗಳೂರು:** ಕೆರೆ ಪುನರುಜ್ಜೀವನ ಮತ್ತು ಅಭಿವೃದ್ಧಿ ಚಟುವಟಿಕೆಗಳಿಂದಾಗಿ ವಾಗಟ ಗ್ರಾಮ ಪಂಚಾಯತ್‌ನಲ್ಲಿರುವ 21.33 ಎಕರೆ ವಿಸ್ತೀರ್ಣದ ಕನೆಕಲ್ಲು ಕೆರೆ ಮರಳಿ ಗತ ವೈಭವವನ್ನು ಪಡೆದಿದೆ.

ಉಜ್ಜೀವನ್ ಸ್ಮಾಲ್ ಫೈನಾನ್ಸ್ ಬ್ಯಾಂಕ್ ತನ್ನ ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿ ಯೋಜನೆ ಅಡಿಯಲ್ಲಿ, ಬೆಂಗಳೂರಿನ ಯುನೈಟೆಡ್ ವೇ ಸಹಭಾಗಿತ್ವದಲ್ಲಿ ಈ ಪ್ರಾಜೆಕ್ಟ್ ಕೈಗೆತ್ತಿಕೊಂಡಿತ್ತು.

ಕೆರೆ ಅಭಿವೃದ್ಧಿಯಿಂದಾಗಿ ನೀರಿನ ಹಿಡಿದಿಟ್ಟುಕೊಳ್ಳುವ ಸಾಮರ್ಥ್ಯವನ್ನು 62 ಮಿಲಿಯನ್ ಲೀಟರ್‌ಗಳಿಂದ 92 ಮಿಲಿಯನ್ ಲೀಟರ್‌ಗಳಿಗೆ ಹೆಚ್ಚಿದೆ. ತುಂಬಿ ತುಳುಕುತ್ತಿರುವ ಈ ಕೆರೆಯಿಂದಾಗಿ ಸುತ್ತಲಿನ 16 ಹಳ್ಳಿಗಳಿಗೆ ಪ್ರಯೋಜನವಾಗಿದೆ.

ಕೆರೆಯಲ್ಲಿ ದೊಡ್ಡ ಪ್ರಮಾಣದ ಹೂಳು ತೆಗೆಯಲಾಗಿದೆ. 535 ಮೀಟರ್ ಮುಖ್ಯ ಒಡ್ಡು ಮತ್ತು 1,310 ಮೀಟರ್ ಬಾಹ್ಯ ಕಟ್ಟೆಗಳನ್ನು ಬಲಪಡಿಸುವುದು ಮತ್ತು ನೀರಿನ ಹರಿವಿನ ಮಾರ್ಗಗಳ ಪುನಃಸ್ಥಾಪಿಸಲಾಗಿದೆ. ಸುಮಾರು 180 ಘನ ಮೀಟರ್ ಪೌಷ್ಟಿಕ-ಸಮೃದ್ಧ ಹೂಳನ್ನು ಹತ್ತಿರದ ರೈತರಿಗೆ ಮರುಹಂಚಿಕೆ ಮಾಡಲಾಯಿತು, ಇದು ಕೃಷಿ ಉತ್ಪಾದಕತೆ ಮತ್ತು ಮಣ್ಣಿನ ಪುಷ್ಟೀಕರಣಕ್ಕೆ ಸಹಾಯ ಮಾಡುತ್ತದೆ.

ಪುನರುಜ್ಜೀವನಗೊಂಡ ಕೆರೆಯಿಂದ ಅಂತರ್ಜಲ ಮರುಪೂರಣ, ಮಣ್ಣಿನ ತೇವಾಂಶ ಮಟ್ಟದಲ್ಲಿ ಸುಧಾರಣೆಯಾಗಲಿದೆ. ಸುತ್ತಮುತ್ತಲಿನ ಹಳ್ಳಿಗಳಿಗೆ ದೀರ್ಘಕಾಲದ ವರೆಗೆ ನೀರಾವರಿ ಸೌಲಭ್ಯ ಕಲ್ಪಿಸುತ್ತದೆ. ಒಂದು ವರ್ಷದಲ್ಲಿ ಕೆರೆ ಸುತ್ತಲೂ 2,000 ಸಸಿಗಳನ್ನು ನೆಡಲಾಗಿದ್ದು, ಜಲಚರ ಜೀವವೈವಿಧ್ಯತೆಯನ್ನು ಬೆಂಬಲಿಸಲು 20,000 ಮೀನುಗಳನ್ನು ಸರೋವರಕ್ಕೆ ಬಿಡಲಾಗಿದೆ.

ಈ ಕ್ರಮದಿಂದಾಗಿ 16 ಹಳ್ಳಿಗಳ ರೈತರು, ಯುವಕರು ಮತ್ತು ನಿವಾಸಿಗಳಿಗೆ ಪ್ರಯೋಜನವನ್ನು ನೀಡುವ ನಿರೀಕ್ಷೆಯಿದೆ, ಇದರಿಂದ ಜೀವನೋಪಾಯ ಮತ್ತು ಹೆಚ್ಚಿನ ಪರಿಸರ ಸ್ಥಿತಿಸ್ಥಾಪಕತ್ವಕ್ಕೆ ಕೊಡುಗೆ ನೀಡುತ್ತದೆ ಎಂದು ಹೇಳಲಾಗಿದೆ.

ಕೆರೆಯಲ್ಲಿ ದೊಡ್ಡ ಪ್ರಮಾಣದ ಹೂಳು ತೆಗೆಯಲಾಗಿದೆ. 535 ಮೀಟರ್ ಮುಖ್ಯ ಒಡ್ಡು ಮತ್ತು 1,310 ಮೀಟರ್ ಬಾಹ್ಯ ಕಟ್ಟೆಗಳನ್ನು ಬಲಪಡಿಸುವುದು ಮತ್ತು ನೀರಿನ ಹರಿವಿನ ಮಾರ್ಗಗಳ ಪುನಃಸ್ಥಾಪಿಸಲಾಗಿದೆ. ಸುಮಾರು 180 ಘನ ಮೀಟರ್ ಪೌಷ್ಟಿಕ-ಸಮೃದ್ಧ ಹೂಳನ್ನು ಹತ್ತಿರದ ರೈತರಿಗೆ ಮರುಹಂಚಿಕೆ ಮಾಡಲಾಯಿತು, ಇದು ಕೃಷಿ ಉತ್ಪಾದಕತೆ ಮತ್ತು ಮಣ್ಣಿನ ಪುಷ್ಟೀಕರಣಕ್ಕೆ ಸಹಾಯ ಮಾಡುತ್ತದೆ.

# ಪತ್ರಿಕೋದ್ಯಮ ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನ

**ಚಿತ್ರದುರ್ಗ:** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಪತ್ರಿಕೋದ್ಯಮ ವಿಷಯ ವ್ಯಾಸಂಗ ಮಾಡಿರುವ ಪದವಿ, ಸ್ನಾತಕೋತ್ತರ ಪದವಿಧರರಿಗೆ ಚಿತ್ರದುರ್ಗ ಜಿಲ್ಲೆಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಚೇರಿಯಲ್ಲಿ ಮಾಧ್ಯಮ ಚಟುವಟಿಕೆಗಳ ಕಾರ್ಯನಿರ್ವಹಣೆ ಕುರಿತು 12 ತಿಂಗಳ ಅವಧಿಯ ಅಪ್ರೆಂಟಿಸ್ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ತರಬೇತಿಗಾಗಿ ಕರ್ನಾಟಕದಲ್ಲಿ ಕಾನೂನಾತ್ಮಕವಾಗಿ ಸ್ಥಾಪಿತಗೊಂಡ ವಿಶ್ವವಿದ್ಯಾನಿಲಯದಿಂದ ಪತ್ರಿಕೋದ್ಯಮದಲ್ಲಿ ಪದವಿ ಅಥವಾ

ಸ್ನಾತಕೋತ್ತರ ಪದವಿ ಪೂರ್ಣಗೊಳಿಸಿರುವ ಹಾಗೂ ಕಂಪ್ಯೂಟರ್ ಜ್ಞಾನವಿರುವ ಕನ್ನಡ ಭಾಷೆ ಬಳಸಲು ಪ್ರಬುದ್ಧತೆ ಇರುವ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬಹುದು.

ಮೆರಿಟ್ ಹಾಗೂ ಸಂದರ್ಶನದ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳಿಗೆ 35 ವರ್ಷ ಮೀರಿರಬಾರದು.

# ಬೀದಿ ನಾಯಿಗಳನ್ನು ದತ್ತು ಪಡೆಯಲು ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಸರ್ವೋಚ್ಚ ನ್ಯಾಯಾಲಯದ ಆದೇಶದನ್ವಯ ಚಿಂತಾಮಣಿ ನಗರ ವ್ಯಾಪ್ತಿಯಲ್ಲಿ ಬರುವ ಬೀದಿ ನಾಯಿಗಳ ನಿರ್ವಹಣೆ ಹಾಗೂ ಸಂಬಂಧಿಸಿದ ನಾಯಿಗಳನ್ನು ಸಾಕಲು ಸಾರ್ವಜನಿಕರು ಅಥವಾ ಸಂಘ ಸಂಸ್ಥೆಗಳವರು ಬೀದಿ ನಾಯಿಗಳನ್ನು ದತ್ತು ನೀಡಲು/ಪಡೆಯಲು ನಿಯಮಾನುಸಾರ ಕ್ರಮ ವಹಿಸಾಗುವುದು. ದತ್ತು ಪಡೆಯಲು ಇಚ್ಛೆಯುಳ್ಳ ವ್ಯಕ್ತಿ ಅಥವಾ ಸಂಸ್ಥೆಗಳವರು ಆಸಕ್ತಿ ಇದ್ದವರು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಚಿಂತಾಮಣಿ ನಗರಸಭೆಯನ್ನು ಸಂಪರ್ಕಿಸಬಹುದೆಂದು ಚಿಂತಾಮಣಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾನ್ಯ ಸಿವಿಲ್ ಜಡ್ಜ್ ಮತ್ತು ಜೆ.ಎಂ. ಎಫ್.ಸಿ.ನ್ಯಾಯಾಲಯ, ಜಗಳೂರು

**ಸಿ.ಆರ್ ಮಿಸ್ ನಂ:1090/2025**

**ಅರ್ಜಿದಾರರು:** 1) ಲಕ್ಷ್ಮೀ ಕೋಂ ಲೇಟ್ ಉಮೇಶ ವಯಸ್ಸು 40 ವರ್ಷ, ಕೆಲಸ: ಗೃಹಿಣಿ2) ಕೀರ್ತಿ ತಂದೆ ಉಮೇಶ ವಯಸ್ಸು 20 ವರ್ಷ, 3) ಕಿರಣ್ ಕುಮಾರ್ ತಂದೆ ಉಮೇಶ ವಯಸ್ಸು 18 ವರ್ಷ, 4) ವಿಷ್ಣು ತಂದೆ ಉಮೇಶ ವಯಸ್ಸು 16 ವರ್ಷ, ಅರ್ಜಿದಾರರೆಲ್ಲರ ವಾಸ ಚಿಕ್ಕಬನ್ನಿಹಟ್ಟಿ ಗ್ರಾಮ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ

**ವಿರುದ್ಧ**

**ಎದುರುದಾರರು** : ತಹಶೀಲ್ದಾರರು, ತಾಲ್ಲೂಕು ಕಛೇರಿ, ಜಗಳೂರು ಟೌನ್, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.

## ಸಾರ್ವಜನಿಕ ನೋಟಿಸ್

ಮೇಲ್ಕಂಡ ಪ್ರಕರಣವನ್ನು 1ನೇ ಅರ್ಜಿದಾರರ ಗಂಡ, 2 ರಿಂದ 4ನೇ ಅರ್ಜಿದಾರರ ತಂದೆಯಾದ ಉಮೇಶ ಬಿನ್ ಈರಪ್ಪ ಇವರು ದಿನಾಂಕ:08.11.2024ರಂದು ಜಗಳೂರು ತಾಲ್ಲೂಕು. ಚಿಕ್ಕಬನ್ನಿಹಟ್ಟಿ ಗ್ರಾಮದ ಅರ್ಜಿದಾರರ ಮನೆಯಲ್ಲಿ ಸ್ವಾಭಾವಿಕವಾಗಿ ತೀರಿ ಕೊಂಡಿದ್ದರಿಂದ ಸದರಿ ಅಂಶವನ್ನು ಎದುರುದಾರರು ನೊಂದಾಯಿಸಿ ಕೊಂಡು ಮರಣ ಸಮರ್ಥನಾ ಪತ್ರವನ್ನು ನೀಡುವಂತೆ ಕೋರಿ, ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ:-24.01.2025ರ ಬೆಳಗ್ಗೆ 11.00 ಗಂಟೆಗೆ ವಿಚಾರಣೆಗೆ ನಿಗದಿಪಡಿಸಿದ್ದು ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ತಾವಾಗಲೀ, ತಮ್ಮ ಪರ ವಕೀಲರ ಮುಖಾಂತರವಾಗಲೀ, ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದ್ದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸ ಲಾಗುವುದು ತಿಳಿಯಿರಿ.ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ:12.12 2025 ರಂದು ನೀಡಲಾಗಿದೆ.

ನ್ಯಾಯಾಲಯದ ಅಪ್ಪಣೆ ಮೇರೆಗೆ

ಅರ್ಜಿದಾರರ ಪರ ವಕೀಲರು
ಕೆ.ವಿ ರುದ್ರೇಶ್ ವಕೀಲರು
ದಿನಾಂಕ:26.11.2025

ಶಿರಸ್ತೆದಾರರು
ಸಿವಿಲ್ ಜಡ್ಜ್
ಜೆ.ಎಂ. ಎ.ಎಫ್. ಸಿ.
ನ್ಯಾಯಾಲಯ ಜಗಳೂರು

## 90 ಸರ್ಕಾರಿ ಐ.ಟಿ.ಐ. ಗಳಿಗೆ ಯಂತ್ರೋಪಕರಣ ಒದಗಿಸಲು 50 ಕೋಟಿ ರೂ. ಅನುದಾನ– ಡಾ. ಶರಣಪ್ರಕಾಶ್ ಪಾಟೀಲ

**ಬೆಳಗಾವಿ :** ರಾಜ್ಯದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ಪರಿಷ್ಕೃತ ಪಠ್ಯಕ್ರಮದ ಅನುಸಾರ ಯಂತ್ರೋಪಕರಣಗಳನ್ನು ಖರೀದಿಸಿ ಒದಗಿಸಲು 50 ಕೋಟಿ ರೂ. ಅನುದಾನ ಒದಗಿಸಿದ್ದು, ಈಗಾಗಲೆ ಟೆಂಡರ್ ಪ್ರಕ್ರಿಯೆ ನಡೆದಿದೆ ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್ ಹೇಳಿದರು.

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ವಿಧಾನಮಂಡಲದ ಅಧಿವೇಶನದಲ್ಲಿ ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಗುರುವಾರ ಅವರು ಮಾತನಾಡಿದರು.

ಸಿರಗುಪ್ಪ ಶಾಸಕ ನಾಗರಾಜ್ ಬಿ.ಎಂ. ಅವರ ಚುಕ್ಕೆ ಗುರುತಿನ ಪ್ರಶ್ನೆಯಲ್ಲಿ ಸಿರಗುಪ್ಪ ಕ್ಷೇತ್ರ ವ್ಯಾಪ್ತಿಯಲ್ಲಿ ಸರ್ಕಾರಿ ಐಟಿಐ ಅನ್ನು 2014–15 ರಲ್ಲಿ ಮಂಜೂರು ಮಾಡಿದ್ದು, ಈ ಸಂಸ್ಥೆಯಲ್ಲಿ ವಿದ್ಯಾರ್ಥಿಗಳ ಕಲಿಕೆಗೆ ಬೇಕಾಗಿರುವ ಉಪಕರಣಗಳು ಲಭ್ಯವಿಲ್ಲದೆ ತೊಂದರೆಯಾಗಿದೆ ಎಂಬುದಾಗಿ ಸರ್ಕಾರದ ಗಮನ ಸೆಳೆದರು.

ಇದಕ್ಕೆ ಪ್ರತಿಕ್ರಿಯಿಸಿದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್, ರಾಜ್ಯದ 90 ಸರ್ಕಾರಿ ಐಟಿಐ ಗಳಲ್ಲಿ ಡಿ.ಜಿ.ಟಿ. ನವದೆಹಲಿ ಅವರ ಪರಿಷ್ಕೃತ ಪಠ್ಯಕ್ರಮದ ಅನುಸಾರ ಅಗತ್ಯವಿರುವ ಯಂತ್ರೋಪಕರಣಗಳನ್ನು ಒದಗಿಸಲು ಈಗಾಗಲೆ ಟೆಂಡರ್ ಕರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡ ಬಳಿಕ, ಸಿರಗುಪ್ಪದ ಸರ್ಕಾರಿ ಐಟಿಐ ಸಂಸ್ಥೆಗೂ ಕೂಡ ಹೊಸದಾಗಿ ಅಗತ್ಯ ಯಂತ್ರೋಪಕರಣಗಳನ್ನು ಖರೀದಿಸಿ, ಒದಗಿಸಲಾಗುವುದು ಎಂದು ಸಚಿವ ಶರಣ ಪ್ರಕಾಶ್ ಪಾಟೀಲ್ ಹೇಳಿದರು.

## ಅರಿವು ವಿದ್ಯಾಭ್ಯಾಸ ಸಾಲ ಯೋಜನೆಗೆ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ಹಾಸನ :** ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ(ನಿ) ಹಾಸನ ಇವರ ವತಿಯಿಂದ ಮತೀಯ ಅಲ್ಪಸಂಖ್ಯಾತರಾದ ಮುಸ್ಲಿಂ, ಜೈನ್, ಬೌದ್ಧ, ಸಿಖ್, ಹಾಗೂ ಪಾರ್ಸಿ ಜನಾಂಗದವರಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆಯ್ಕೆಯಾಗಿ ಸಿಇಟಿ/ಡಿ.ಸಿಇಟಿ/ಪಿಜಿ–ಸಿಇಟಿ/ನೀಟ್ ಮೂಲಕ ಪ್ರವೇಶ ಪಡೆದು ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ 2025–26ನೇ ಸಾಲಿನ ಅರಿವು ವಿದ್ಯಾಭ್ಯಾಸ ಸಾಲ ಯೋಜನೆ (ರಿನ್ಯೂವಲ್) ಯೋಜನೆಯಡಿಯಲ್ಲಿ ಸೌಲಭ್ಯ ನೀಡಲು Website : www.kmdconline.karnataka.gov.in ಮೂಲಕ ಆನ್‌ಲೈನ್ ಅಲ್ಲಿ ಅರ್ಜಿ ಸಲ್ಲಿಸಲು ದಿನಾಂಕ: 03–01–2026 ರವರೆಗೆ ಅವಧಿ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರ ಕಚೇರಿ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ (ನಿ) ಮೌಲಾನಾ ಆಜಾದ್ ಭವನ, 1ನೇ ಮಹಡಿ, ಆಕಾಶವಾಣಿ ಕ್ವಾಟ್ರಸ್ ಹಿಂಭಾಗ, ಸಾಲಗಾಮೆ ಮುಖ್ಯ ರಸ್ತೆ, ಶ್ರೀ ವಿದ್ಯಾ ಗಣಪತಿ ಅಡ್ಡರಸ್ತೆ, ಮಲ್ನಾಡ್ ಇಂಜಿನಿಯರಿಂಗ್ ಕಾಲೇಜ್ ಹತ್ತಿರ, ಹಾಸನ–573202 ದೂರವಾಣಿ ಸಂಖ್ಯೆ: 08172–246333 ಇವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

## ರೈಲು ಗಾಡಿಯಿಂದ ಬಿದ್ದು ವ್ಯಕ್ತಿ ಸಾವು

**ಶಿವಮೊಗ್ಗ :** ನವೆಂಬರ್ 28 ರಂದು ಸುಮಾರು 40 ರಿಂದ 45 ವರ್ಷದ ಅಪರಿಚಿತ ವ್ಯಕ್ತಿಯೊಬ್ಬರು ಭದ್ರಾವತಿ ರೈಲ್ವೇ ನಿಲ್ದಾಣದ ಹತ್ತಿರ ರೈಲು ಗಾಡಿಯಿಂದ ಬಿದ್ದು ಗಾಯಗೊಂಡಿದ್ದು ಚಿಕಿತ್ಸೆಗಾಗಿ ಜಿಲ್ಲಾ ಮೆಗ್ಗಾನ್ ಆಸ್ಪತ್ರೆಗೆ ದಾಖಲಿಸಲಾಗಿ ಡಿ.10 ರಂದು ಚಿಕಿತ್ಸೆ ಫಲಕಾರಿಯಾದೇ ಮೃತಪಟ್ಟಿರುತ್ತಾರೆ. ಮೃತ ವ್ಯಕ್ತಿಯು ಸುಮಾರು 5.5 ಅಡಿ ಎತ್ತರ, ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ, ಕೋಲುಮುಖ, ತಲೆಯಲ್ಲಿ ಸುಮಾರು 2–3 ಇಂಚು ಉದ್ದನೆಯ ಕಪ್ಪು ಮತ್ತು ಬಿಳಿ ಕೂದಲು, ಕುರುಚಲು ಗಡ್ಡ, ಮೀಸೆ ಬಿಟ್ಟಿರುತ್ತಾನೆ. ಈ ಮೃತನ ವಾರಸುದಾರರು ಯಾರಾದರೂ ಇದ್ದಲ್ಲಿ ರೈಲ್ವೇ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್, ದೂ.ಸಂ: 08182–222974, ಮೊ.ಸಂ: 948082124 ನ್ನು ಸಂಪರ್ಕಿಸಬಹುದೆಂದು ಶಿವಮೊಗ್ಗ ರೈಲ್ವೇ ಪೊಲೀಸ್ ಠಾಣೆಯ ಠಾಣಾಧಿಕಾರಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಗದಗ :** ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಯುವಸ್ಪಂಧನ ಕೇಂದ್ರದಲ್ಲಿ ನರಗುಂದ ತಾಲೂಕು–01, ಶಿರಹಟ್ಟಿ ತಾಲೂಕು–01 ಯುವಪರಿವರ್ತಕರ ಹುದ್ದೆ ಖಾಲಿ ಇದ್ದು, ಹುದ್ದೆಯಲ್ಲಿ ಕಾರ್ಯನಿರ್ವಹಿಸಲು ಪದವೀಧರರಾಗಿರಬೇಕು, ಹಾಗೂ 35 ವರ್ಷದೊಳಗಿನ ಮಹಿಳೆಯರಾಗಿರಬೇಕು, ವಾಕ್ಚಾತುರ್ಯ ಹೊಂದಿರಬೇಕು, ಕಂಪ್ಯೂಟರ ಜ್ಞಾನ ಹಾಗೂ ಟೈಪಿಂಗ್ ಕೌಶಲ್ಯ ಹೊಂದಿರಬೇಕು.ಆಸಕ್ತ ಯುವಕ/ಯುವತಿಯರು ತಮ್ಮ ಸ್ವ ವಿವರಗಳೊಂದಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಡಿ. 17 ರೊಳಗೆ ಅರ್ಜಿಯನ್ನು ಸಲ್ಲಿಸಬಹುದು, ಹೆಚ್ಚಿನ ಮಾಹಿತಿಗಾಗಿ ಮೊ.ಸಂ 7349223455 ಕಛೇರಿ ದೂರವಾಣಿ ಸಂಖ್ಯೆ 08372–238345ಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ನಾಳೆ ಸಂಸ್ಕೃತಿ ಕಿಡ್ಸ್ ವಾರ್ಷಿಕೋತ್ಸವ

**ಶಿವಮೊಗ್ಗ :–** ನಗರದ ಡಾ। ಸಿಎಲ್ ರಾಮಣ್ಣ ರಸ್ತೆಯ (ಓಲ್ಡ್ ಬಾರ್‌ಲೈನ್ ರಸ್ತೆ) ಪ್ರತಿಷ್ಠಿತ ಸಂಸ್ಕೃತಿ ಕಿಡ್ಸ್‌ನ ಶಾಲಾ ವಾರ್ಷಿಕೋತ್ಸವ ಹಾಗೂ ಸಂಸ್ಕೃತಿ ಸಂಭ್ರಮ ಕಾರ್ಯಕ್ರಮವು ಡಿ. 12ರ ನಾಳೆ ಸಂಜೆ 4.30ರಿಂದ ನಗರದ ಕುವೆಂಪು ರಂಗಮಂದಿರ ದಲ್ಲಿ ಜರುಗಲಿದ್ದು , ಮುಖ್ಯ ಅತಿಥಿಗಳಾಗಿ ವಾಸವಿ ಮಹಿಳಾ ಸಂಘದ ಅಧ್ಯಕ್ಷೆ ಶ್ರೀಮತಿ ಪ್ರತಿಭಾ ಅರುಣ್ ಪಾಲ್ಗೊಳ್ಳುವರು.

ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮ ವೀಕ್ಷಿಸಲು ಪೋಷಕರು ಮತ್ತು ಆಸಕ್ತರು ಪಾಲ್ಗೊಳ್ಳಲು ಸಂಸ್ಥೆಯ ಅಧ್ಯಕ್ಷ ರಘು ಹೆಚ್. ಆರ್., ಕಾರ್ಯದರ್ಶಿ ಅನಿತಾ ರಘು ಸೇರಿದಂತೆ ಸಂಸ್ಥೆಯ ಪದಾಧಿಕಾರಿಗಳು ಕೋರಿದ್ದಾರೆ.

## ಸಾರ್ವಜನಿಕರ ಗಮನಕ್ಕೆ

**ಗದಗ** : ಸಮುದಾಯ ಮಾನಸಿಕ ಆರೋಗ್ಯ ಹಗಲು ಆರೋಗ್ಯ ಕೇಂದ್ರ (ಮಾನಸಧಾರ) ಮಾನಸಿಕ ರೋಗಿಗಳ ಪುನಶ್ವೇತನಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗದಗ ವತಿಯಿಂದ ಡೇಕೇರ್ ಸೆಂಟರ್ (ಮಾನಸದಾರ) ಕೇಂದ್ರವನ್ನು ಸ್ಥಾಪಿಸಲು ಆಸಕ್ತಿಯ ಅಭಿವ್ಯಕ್ತಿ ಆಹ್ವಾನಿಸಿದ್ದು, ಜಿಲ್ಲೆಯ ಅರ್ಹ ಮತ್ತು ಅನುಭವ ಸರ್ಕಾರೇತರ ಸ್ವಯಂ ಸೇವಾ ಸಂಸ್ಥೆಗಳಿಂದ ಕೆ.ಟಿ.ಟಿ.ಪಿ ನಿಯಾಮನುಸಾರ ಆಸಕ್ತಿಯ ಅಭಿವ್ಯಕ್ತಿ ಆಹ್ವಾನಿಸಲಾಗಿದೆ.

ಆಸಕ್ತ ಸ್ವಯಂಸೇವಾ ಸಂಸ್ಥೆಗಳ ಅಧಿಸೂಚನೆ ಮತ್ತು ಅರ್ಜಿ ಸಲ್ಲಿಸಲು ವಿವರಗಳನ್ನು www.kppp.karnataka.gov.in ವೆಬ್‌ಸೈಟ್‌ನಲ್ಲಿ ಪಡೆಯಬಹುದು ದಿನಾಂಕ: 11/12/2025 ರಿಂದ 19/12/2025ರ ಸಂಜೆ 4:00 ಗಂಟೆಯೊಳಗೆ ಅಗತ್ಯ ಮಾಹಿತಿಯೊಂದಿಗೆ ಅಪ್‌ಲೋಡ್ ಮಾಡತಕ್ಕದ್ದು. ಹಾಗೂ ಸಂಬಂಧಿಸಿದ ಎನ್.ಜಿ.ಓ ಸಂಸ್ಥೆಯವರು ಅಧಿಸೂಚನೆಯಲ್ಲಿ ತಿಳಿಸಿರುವಂತೆ ದಿನಾಂಕ: 22/12/2025, ರಂದು ಬೆಳಗ್ಗೆ 11:00ಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿಯಲ್ಲಿ ಮೂಲ ದಾಖಲೆಗಳೊಂದಿಗೆ ಪರಿಶೀಲನೆಗಾಗಿ ಖುದ್ದಾಗಿ ಹಾಜರಾಗತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

## ಡಿ.17 ರಂದು ವಿಕಲಚೇತನರ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಸುವರ್ಣಸೌಧದ ಎದುರು ಪ್ರತಿಭಟನೆ



**ದಾವಣಗೆರೆ:** ವಿಕಲಚೇತನರಿಗೆ ಪ್ರಸ್ತುತ ನೀಡುತ್ತಿರುವ ಮಾಸಾಶನವನ್ನು ಕನಿಷ್ಟ 5 ಸಾವಿರ ರೂ, ಗಳಿಗೆ ಹೆಚ್ಚಿಸುವುದು, ವಿಕಲಚೇತನರಿಗೆ ರಾಜಕೀಯ ಪ್ರಾತಿನಿಧ್ಯ, ಹಾಗೂ ವಿಕಲಚೇತನರ ಪ್ರತ್ಯೇಕ ನಿಗಮ ಮಂಡಳಿ ಸ್ಥಾಪನೆ ಮಾಡಬೇಕು ಎಂಬುದು ಸೇರಿದಂತೆ ಇತರೆ ಬೇಡಿಕೆಗಳಿಗೆ ಒತ್ತಾಯಿಸಿ ಕರ್ನಾಟಕ ರಾಜ್ಯ ವಿಕಲಚೇತನರ ಆರ್ ಪಿಡಿ ಟಾಸ್ಕ್ ಫೋರ್ಸ್ ಸಂಘಟನೆಯು ಡಿ.17 ರಂದು ಬೆಳಗಾವಿಯ ಸುವರ್ಣ ಸೌಧದ ಎದುರು ಪ್ರತಿಭಟನೆ ಹಮ್ಮಿಕೊಂಡಿದೆ.

ಕೇಂದ್ರ ಸರ್ಕಾರ ವಿಕಲಚೇತನರ ಹಕ್ಕುಗಳ ಕಾಯಿದೆ ಜಾರಿಗೊಳಿಸಿ 9 ವರ್ಷಗಳು ಕಳೆದರು ಕರ್ನಾಟಕ ರಾಜ್ಯ ಸರ್ಕಾರದ ಇಚ್ಛಾಶಕ್ತಿ ಕೊರತೆಯಿಂದ ಕಾಯಿದೆ ಸಂಪೂರ್ಣವಾಗಿ ಜಾರಿಗೆ ಬರದ ಕಾರಣ ವಿಕಲಚೇತನರು ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯವಾಗಿ ಮುಖ್ಯವಾಹಿನಿಗೆ ಬರುವಲ್ಲಿ ಸಾಧ್ಯವಾಗಿಲ್ಲ ಎಂದು ಸಂಘಟನೆಯ ರಾಜ್ಯ ಗೌರವಾಧ್ಯಕ್ಷರಾದ ಎಂ. ವಿಜಯಲಕ್ಷ್ಮಿ ಪತ್ರಿಕಾ ಹೇಳಿಕೆಯಲ್ಲಿ ಬೇಸರ ಹೊರಹಾಕಿದ್ದಾರೆ.

ರಾಜ್ಯ ಸರ್ಕಾರ ಕಳೆದ 2 ಬಜೆಟ್ನಲ್ಲಿ ವಿಕಲಚೇತನರ ಯಾವುದೇ ಪ್ರಮುಖ ಬೇಡಿಕೆಗಳನ್ನು ಈಡೇರಿಸದೇ ವಿಕಲಚೇತನರನ್ನು ಸಂಪೂರ್ಣವಾಗಿ ಕಡೆಗಣಿಸಿದೆ. ಕೂಡಲೇ ಸರ್ಕಾರ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅನುದಾನದಲ್ಲಿ ವಿಕಲಚೇತನರಿಗೆ ಶೇ.5 ರಷ್ಟು ಅನುದಾನವನ್ನು ಮೀಸಲಿಡಬೇಕು, ವಿಕಲಚೇತನರ ರಿಯಾಯಿತಿ ದರದ ಬಸ್ ಪಾಸಿನ ಪ್ರಯಾಣದ ಮಿತಿಯನ್ನು ಹೆಚ್ಚಿಸುವುದು ಸೇರಿದಂತೆ ಹಲವು ಪ್ರಮುಖ ಹಕ್ಕೋತ್ತಾಯಗಳ ಈಡೇರಿಕೆಗಾಗಿ ಒತ್ತಾಯಿಸಿ ಈ ಪ್ರತಿಭಟನೆ ಹಮ್ಮಿಕೊಂಡಿರುವುದಾಗಿ ತಿಳಿಸಿದರು.

## ಎಂಸಿಇ ನೆಟ್‌ಬಾಲ್ ತಂಡ ವಿಟಿಯು ಚಾಂಪಿಯನ್ಸ್



**ಹಾಸನ:** ನಗರದ ಮಲೆನಾಡು ತಾಂತ್ರಿಕ ಮಹಾವಿದ್ಯಾಲಯದ ವಿದ್ಯಾರ್ಥಿಗಳ ನೆಟ್‌ಬಾಲ್ ತಂಡ ಬೆಂಗಳೂರಿನ ರಾಜರಾಜೇಶ್ವರಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ನಡೆದ ವಿಟಿಯು ರಾಜ್ಯ ಮಟ್ಟದ ನೆಟ್‌ಬಾಲ್ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ ಗಳಿಸುವ ಮೂಲಕ ಚಾಂಪಿಯನ್ ಆಗಿ ಹೊರಹೊಮ್ಮಿದೆ. ಕಾಲೇಜಿನ ವಿದ್ಯಾರ್ಥಿಗಳಾದ ಕರಣ್ ಪಿ ಗೌಡ, ನಿರಂಜನ್ ಡಿ ಎಲ್, ಪವನ್ ಎಸ್ ವಿ, ಆಕಾಶ್ ಗೌಡ ಎಸ್ ವಿ, ಚಿರಂತ್ ಎ, ಯಶ್ವಂತ್ ಎ ಎಸ್, ಭರತ್ ಎಚ್ ಕೆ, ಭುವನ್ ಜೆ ಎಚ್, ವಿನಯ್ ಕೆ ಎಂ ಮತ್ತು ರೋಹಿತ್ ಎನ್ ವಿ ವಿಜೇತ ತಂಡದ ಭಾಗವಾಗಿದ್ದರು.

### ಡಿಸೆಂಬರ್ 21 ರಂದು ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ

# 5 ವರ್ಷದೊಳಗಿನ ಮಕ್ಕಳಿಗೆ ತಪ್ಪದೆ ಪಲ್ಸ್ ಪೋಲಿಯೋ ಲಸಿಕೆ ಹಾಕಿಸಿ : ಸಿ ಎನ್ ಶ್ರೀಧರ



**ಗದಗ :** ಡಿಸೆಂಬರ್ 21 ರಂದು ಜಿಲ್ಲೆಯಾದ್ಯಂತ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ, 5 ವರ್ಷದೊಳಗಿನ ಪ್ರತಿ ಮಗುವಿಗೆ ತಪ್ಪದೆ ಪಲ್ಸ್ ಪೋಲಿಯೋ ಲಸಿಕೆ ಹಾಕಿಸಿ ಎಂದು ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ ಕುರಿತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಡಿಸೆಂಬರ್ 21 ರಂದು ಜಿಲ್ಲೆಯಾದ್ಯಂತ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್ ಎಸ್ ನೀಲಗುಂದ ಮಾತನಾಡಿ ಡಿಸೆಂಬರ್ 21 ಕ್ಕೆ 5 ವರ್ಷದೊಳಗಿನ ಪ್ರತಿಯೊಂದು ಮಗುವಿಗೂ ತಪ್ಪದೆ ಪಲ್ಸ್ ಪೋಲಿಯೋ ಲಸಿಕೆ ಹಾಕಿಸಲು ಕ್ರಮ ವಹಿಸಲಾಗಿದೆ ಎಂದರು, ಪಲ್ಸ್ ಪೋಲಿಯೋ ಲಸಿಕೆ ನೀಡಲು ಅಗತ್ಯವಿರುವ ಸಿಬ್ಬಂದಿಗಳಿಗೆ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳನ್ನು ಬಳಸಿಕೊಳ್ಳಲು ಹಾಗೂ ರೂಟ್ ಮ್ಯಾಪ್ ಗಳನ್ನು ಮಾಡಿಕೊಳ್ಳಲಾಗಿದೆ. ವಲಸೆ ಹೋಗಿರುವ ಮತ್ತು ವಲಸೆ ಬಂದಿರುವ ಕುಟುಂಬದ ಮಕ್ಕಳನ್ನು ಗುರುತಿಸಿ ಲಸಿಕೆ ನೀಡಲು ಕ್ರಮ ವಹಿಸಲಾಗಿದೆ. ಜಿಲ್ಲೆಯಲ್ಲಿ 0–5 ವರ್ಷದೊಳಗಿನ 1,15,653 ಮಕ್ಕಳಿಗೆ ಪಲ್ಸ್ ಪೊಲಿಯೋ ಲಸಿಕೆ ಹಾಕುವ ಗುರಿ ಹೊಂದಲಾಗಿದೆ ಎಂದು ಸಭೆಗೆ ತಿಳಿಸಿದರು.

WHO (ಡಬ್ಲೂಎಚ್‌ಒ) ಬಿಜಾಪುರ ಯುನಿಟ್‌ನ, ಎಸ್‌ಎಮ್‌ಒ ಡಾ. ಮುಕುಂದ ಗಲಗಲಿ ಇವರು ಮಾತನಾಡಿ ಡಿಸೆಂಬರ್ 21 ರಂದು ಜಿಲ್ಲೆಯಾದ್ಯಂತ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವನ್ನು ಬೆಳಗ್ಗೆ 8 ರಿಂದ ಸಂಜೆ 5 ಗಂಟೆಯವರೆಗೆ ಬೂತ್ ಮಟ್ಟದಲ್ಲಿ ಲಸಿಕೆ ನೀಡಲಾಗುತ್ತದೆ. ಡಿಸೆಂಬರ್ 22 ರಿಂದ ಡಿಸೆಂಬರ್ 24 ರವರೆಗೆ ಮನೆ ಮನೆಗೆ ಭೇಟಿ ನೀಡಿ ಲಸಿಕೆ ನೀಡುವ ಕಾರ್ಯವನ್ನು ಹಮ್ಮಿಕೊಳ್ಳಲಾಗಿದೆ. ಡಿಸೆಂಬರ್ 21 ರಿಂದ 24 ರವರೆಗೆ 4 ದಿನಗಳು ಸಂಚಾರ ಕೇಂದ್ರಗಳು ಹಾಗೂ ಹೆಚ್ಚಿನ ಅಪಾಯ ಪ್ರದೇಶಗಳಲ್ಲಿ ವಿಶೇಷ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಭೆಗೆ ತಿಳಿಸಿದರು.

ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ..ಮಿನಾಕ್ಷಿ ಕೆ ಎಸ್ ಮಾತನಾಡಿ 0 ದಿಂದ 5 ವರ್ಷದೊಳಗಿನ ಮಕ್ಕಳಿಗೆ ಶೇಕಡ 100 ಲಸಿಕೆ ನೀಡುವ ಗುರಿ ಹೊಂದಲಾಗಿದೆ ಎಂದರು

ಈ ಸಂದರ್ಬದಲ್ಲಿ ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಕರಿಗೌಡರ, ಜಿಲ್ಲಾ ಕುಷ್ಟರೋಗ ನಿರ್ಮೂಲನಾಧಿಕಾರಿ ಡಾ. ರಾಜೇಂದ್ರ ಬಸರಿಗಿಡದ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ವೆಂಕಟೇಶ ರಾಥೋಡ, ಗದಗ ಬೆಟಗೇರಿ ನಗರಸಭೆ ಪೌರಾಯುಕ್ತ ರಾಜರಾಮ ಪವಾರ, ತಾಲೂಕಾ ವೈದ್ಯಾಧಿಕಾರಿಗಳು, ಸಿಪಿಐ, ಪಲ್ಸ ಪೋಲಿಯೋ ಜಿಲ್ಲಾ ಟಾಸ್ಕ ಫೋರ್ಸ್ ಸಮಿತಿಯ ಸದಸ್ಯರು ಹಾಜರಿದ್ದರು

## ಶ್ರೀ ಮಾದಾರ ಚೆನ್ನಯ್ಯ ಸೇವಾ ಸಮಿತಿ



**ಚಿತ್ರದುರ್ಗ:** ಶ್ರೀ ಮಾದರ ಚನ್ನಯ್ಯ ಮಠದಲ್ಲಿ ಶ್ರೀ ಮಾದಾರ ಚನ್ನಯ್ಯ ಸೇವಾ ಸಮಿತಿ ಚಿತ್ರದುರ್ಗ ಜಿಲ್ಲಾ ಘಟಕದ ಕಾರ್ಯಕಾರಿಣಿ ಸಭೆಯೂ ಬುಧವಾರ ಜರುಗಿತು.

ಈ ಸಭೆಯಲ್ಲಿ ಸ್ವಾಮೀಜಿಗಳ ಮುಖೇನ ನೇಮಿತರಾಗಿರುವ ಪದಾಧಿಕಾರಿಗಳ ಘೋಷಣೆ, ತಾಲೂಕು ಸಮಿತಿಗಳ ರಚನೆ, ಹೊಸ ಕಾರ್ಯಯೋಜನೆ, ಸಂಘಟನೆಯ ವಿಸ್ತರಣೆ ಹಾಗೂ ಸಮಾಜಮುಖಿ ಸೇವೆಗಳ ಬಲವರ್ಧನೆ ಕುರಿತು ಮಹತ್ವದ ನಿರ್ಣಯಗಳು ಕೈಗೊಳ್ಳಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀ ಮಾದರ ಚನ್ನಯ್ಯ ಗುರುಪೀಠದ ಶ್ರೀ ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿಗಳು ಇದು ಬೇರೆಯವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ನಾವು ಸಹಾ ಅವರಂತೆ ರಾಜಕಾರಣದಲ್ಲಿ ಮುಂದೆ ಬರಬೇಕು ಸಮಾಜಿಕವಾಗಿ ಮುಂದೆ ಬರಬೇಕು ಸಮಾನತೆಯಲ್ಲಿ ನಮ್ಮನ್ನು ನಾವು ಗುರುತಿಸಿಕೊಳ್ಳಬೇಕಿದೆ. ಇದರ ಬಗ್ಗೆ ಚಿಂತನೆಯನ್ನು ಮಾಡುವ ಉದ್ದೇಶದಿಂದ ಈ ಸಮಿತಿಯನ್ನು ರಚನೆ ಮಾಡಲಾಗಿದೆ ಎಂದರು.

ಇದು ಯಾವುದೇ ಒಂದು ಸಂಘಟನೆಗೆ ಪರ್ಯಾಯವಾಗಲಿ ಅಲ್ಲ, ಯಾವುದೇ ರಾಜಕೀಯ ಪಕ್ಷಕ್ಕೂ ಸಹಾ ಪರ್ಯಾಯ ಎಂದು ಭಾವಿಸಬಾರದು, ಇದು ಶ್ರೀಮಠದ ಮಾರ್ಗದರ್ಶನದಲ್ಲಿ ನಡೆಯುವಂತ ಸಂಘಟನೆಯಾಗಿದೆ. ಇದರಲ್ಲಿ ಕೆಲಸ ಮಾಡುವವರು ಈ ಹಿಂದೆ ಯಾವ ಸಂಘಟನೆಯಲ್ಲಿ ಇದ್ದರು ಎಂದು ಈಗ ಯಾವ ಪಕ್ಷದಲ್ಲಿ ಇದ್ದಾರೆ ಮುಂದೆ ಎಲ್ಲಿ ಇರುತ್ತಾರೆ ಎಂಬ ಪ್ರಶ್ನೆ ಬೇಡ, ಇದರ ಅಗತ್ಯ ಇಲ್ಲ ನಾವುಗಳು ಎಲ್ಲೆ ಇರಲ್ಲಿ ನಮ್ಮ ಶ್ರೀ ಮಾದಾರ ಚನ್ನಯ್ಯ ಸೇವಾ ಸಮಿತಿಗೆ ಬದ್ದರಾಗಿರಬೇಕು ಎಂದರು.

ಈ ಸಂದರ್ಭದಲ್ಲಿ ಮಾತನಾಡಿದ ರವಿ ಮಲ್ಲಾಪುರ ಸಮುದಾಯದ ಅಸ್ತಿತ್ವ ಅಸ್ಮಿತೆಗೆ ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿಗಳ ಸುಮಾರು ಎರಡೂವರೆ ದಶಕಗಳ ಸಾಧನೆ ಅನನ್ಯ. ಪರಮಪೂಜ್ಯರ ಮಾರ್ಗದರ್ಶನದಂತೆ ರಾಜ್ಯ,ಜಿಲ್ಲಾ,ತಾಲೂಕು ಮಟ್ಟದಲ್ಲಿ ಸೇವಾಸಮಿತಿಯ ಸಂಘಟನಾ ಬಲವರ್ಧನೆ ನಮ್ಮ ಮೊದಲ ಗುರಿಯಾಗಲಿದೆ. ಮತ್ತಿತರರು ಯುವಶಕ್ತಿಯ ಭಾಗವಹಿಸುವಿಕೆ, ಶಿಕ್ಷಣದ ಮಹತ್ವ, ಸಮುದಾಯ ಒಗ್ಗಟ್ಟು ಮತ್ತು ರಾಜಕೀಯ ಸಬಲೀಕರಣ ಕುರಿತು ಅಭಿಪ್ರಾಯ ಹಂಚಿಕೊಂಡರು.

ಈ ಸಂದರ್ಭದಲ್ಲಿ. ಜಿಲ್ಲಾಧ್ಯಕ್ಷ ಶ್ರೀ ಪರಶುರಾಮ್ ಪ್ರಧಾನ ಕಾರ್ಯದರ್ಶಿಯಾದ ರವಿ ಕುಮಾರ್ ಬ್ಯಾಲಹಾಳ್ ಖಜಾಂಚಿದ ನಾಗರಾಜಪ್ಪ ಎಲ್. ದೇವರಾಜ್. ಅನಂತ್. ಪೋಲಿಸ್ ಬೇಟೆ ಪ್ರಸನ್ನ. ರಾಮಾಂಜನೇಯ. ಶ್ರೀನಿವಾಸ್. ಶಿವಪ್ಪ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

### ಘನ ತ್ಯಾಜ್ಯ ನಿರ್ವಹಣೆ ಕುರಿತು ಒಂದು ದಿನದ ಕಾರ್ಯಾಗಾರ

## ನಗರದ ಸ್ವಚ್ಛತೆ ಹಾಗೂ ಸೌಂದರ್ಯ ಕಾಪಾಡಿ ಪರಿಸರ ರಕ್ಷಿಸಿ



**ಗದಗ :** ನಗರದ ಸ್ವಚ್ಛತೆ ಹಾಗೂ ಸೌಂದರ್ಯ ಕಾಪಾಡಿದರೆ ಪರಿಸರ ರಕ್ಷಣೆಯೊಂದಿಗೆ ಆರೋಗ್ಯಕರ ವಾತಾವರಣ ನಿರ್ಮಿಸಲು ಸಾಧ್ಯವಾಗುತ್ತದೆ ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗುರುವಾರ ಸ್ವಚ್ಛಭಾರತ ಅಭಿಯಾನದಡಿ ಘನ ತ್ಯಾಜ್ಯ ನಿರ್ವಹಣೆ ಕುರಿತು ಒಂದು ದಿನದ ಸಾಮರ್ಥ್ಯಾಭಿವೃದ್ಧಿ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ನಗರದಲ್ಲಿ ಉದ್ಯಾನವನಗಳು ಸ್ವಚ್ಛವಾಗಿದ್ದರೆ ಅಲ್ಲಿನ ಸುತ್ತಮುತ್ತಲಿನ ಪರಿಸರ ಚೆನ್ನಾಗಿರುತ್ತದೆ. ಈ ನಿಟ್ಟಿನಲ್ಲಿ ಘನ ತ್ಯಾಜ್ಯ ಸಂಗ್ರಹಣೆ, ವಿಲೇವಾರಿ ಕಾರ್ಯ ಅತೀ ಮುಖ್ಯವಾಗಿದೆ. ನಮ್ಮ ಮನೆಯ ಒಳಗಡೆ ಹೇಗೆ ನಾವು ಸ್ವಚ್ಛತೆ ಕಾಯ್ದುಕೊಳ್ಳುತ್ತೇವೆಯೋ ಹಾಗೆಯೇ ಸಾರ್ವಜನಿಕ ಸ್ಥಳಗಳನ್ನು ಸಹ ಸ್ವಚ್ಛವಾಗಿಟ್ಟುಕೊಳ್ಳಲು ಶ್ರಮಿಸಬೇಕು. ಸ್ವಚ್ಛತೆಗೆ ಆದ್ಯತೆ ಕೊಟ್ಟು ಪರಿಸರ ಮಾಲಿನ್ಯವನ್ನು ತಡೆಗಟ್ಟಿ ನಗರವನ್ನು ಅಭಿವೃದ್ಧಿಪಡಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ನಗರಸಭೆ ಸದಸ್ಯರಾದ ಎಲ್.ಡಿ.ಚಂದಾವರಿ ಅವರು ಮಾತನಾಡುತ್ತಾ ಘನ ತ್ಯಾಜ್ಯ ನಿರ್ವಹಣೆಯಲ್ಲಿ ಸಾರ್ವಜನಿಕರ ಪಾತ್ರವೂ ಮಹತ್ವದ್ದಾಗಿದೆ. ನಗರದ ಸ್ವಚ್ಛತೆ ಕಾಪಾಡುವುದು ( sanitary staff) ಸ್ವಚ್ಛತಾ ಸಿಬ್ಬಂದಿಯವರೊಂದಿಗೆ ಸಾರ್ವಜನಿಕರ ಜವಾಬ್ದಾರಿಯೂ ಆಗಿರುತ್ತದೆ. ಕಾಲೇಜುಗಳಲ್ಲಿ ತ್ಯಾಜ್ಯ ವಸ್ತುಗಳ ನಿರ್ವಹಣೆ ಹಾಗೂ ವಿಲೇವಾರಿ ಕುರಿತು ತಿಳುವಳಿಕೆ ಕಾರ್ಯಕ್ರಮ ಆಯೋಜಿಸಬೇಕು ಎಂದು ತಿಳಿಸಿದರು.

ಗದಗ ಬೆಟಗೇರಿ ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ ಅವರು ಮಾತನಾಡಿ ಘನತ್ಯಾಜ್ಯ ನಿರ್ವಹಣಾ ಕಾರ್ಯಾಗಾರದ ಸದುಪಯೋಗ ಪಡಿಸಿಕೊಳ್ಳಬೇಕು. ಕಮ್ಯುನಿಟಿ ಮೊಬೈಲೈಜರ್‌ಗಳು ವಾರ್ಡವಾರು ಮಾಹಿತಿಯನ್ನು ಅಪ್‌ಡೇಟ್ ಮಾಡುತ್ತಾರೆ. ಅವರ ಸಲಹೆಗಳೊಂದಿಗೆ ಸ್ಯಾನಿಟರಿ ಸುಪರ್‌ವೈಜರ್ಸ ಜವಾಬ್ದಾರಿಯಿಂದ ಕೆಲಸ ನಿರ್ವಹಿಸಬೇಕು. ಗದಗ ನಗರವನ್ನು ಮೂಲಭೂತ ಸೌಕರ್ಯಗಳೊಂದಿಗೆ ಸ್ವಚ್ಛ ನಗರವನ್ನಾಗಿಸಲು ಎಲ್ಲರೂ ಸಹಕರಿಸಬೇಕೆಂದರು.

ಕಾರ್ಯಾಗಾರದಲ್ಲಿ ನಗರಸಭೆ ಸದಸ್ಯರಾದ ಮಹಾಂತೇಶ ನಲವಡಿ, ಸುನಂದಾ ಬಾಕಳೆ, ಶಕುಂತಲಾ ಅಕ್ಕಿ, ಲಕ್ಷ್ಮಿ [illegible] ಶಂಕರ ಖಾಕಿ, ಮೆಹಬೂಬಸಾಬ ನದಾಫ್, ನಗರಾಭಿವೃದ್ಧಿ ಪ್ರಾಧಿಕಾರದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ನಗರಸಭೆ ಸದಸ್ಯರು, ಸ್ಯಾನಿಟರಿ ಸುಪರ್ ವೈ ಸರ್ಸ್ , ಕಮ್ಯುನಿಟಿ ಮೊಬೆಲೈಜರ್ಸ ಹಾಜರಿದ್ದರು.

ಗದಗ ಬೆಟಗೇರಿ ನಗರಸಭೆಯ ಸಹಾಯಕ ಕಾರ್ಯಪಾಲಕ ಅಭಿಯಂತರ ( ಪರಿಸರ) ಆನಂದ ಬದಿಯವರು ಸರ್ವರನ್ನು ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## ಬಿ.ಇಡಿ ಪ್ರಶಿಕ್ಷಣಾರ್ಥಿಗಳಿಗೆ ಜಿಲ್ಲಾ ಮಟ್ಟದ ರಸಪ್ರಶ್ನೆ ಸ್ಪರ್ಧೆ

**ಹಾವೇರಿ:** ಶ್ರೀ ಗಳಗನಾಥ ಮತ್ತು ನಾ.ಶ್ರೀ. ರಾಜಪುರೋಹಿತ ಪ್ರತಿಷ್ಠಾನದ ವತಿಯಿಂದ ಹಾವೇರಿ ಜಿಲ್ಲೆಯ ಬಿ.ಇಡಿ ಪ್ರಶಿಕ್ಷಣಾರ್ಥಿಗಳಿಗೆ ಜಿಲ್ಲಾ ಮಟ್ಟದ ರಸಪ್ರಶ್ನೆ ಸ್ಪರ್ಧೆಯನ್ನು ಜನೇವರಿ 5 ರಂದು ಸೋಮವಾರ ಬೆಳಿಗ್ಗೆ 10 ಗಂಟೆಗೆ ಹಾವೇರಿ ನಗರದ ಟಿ.ಎಂ.ಎ.ಇ ಶಿಕ್ಷಣ ಮಹಾವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ.

ಐತಿಹಾಸಿಕ, ಪೌರಾಣಿಕ, ಕರ್ನಾಟಕಕ್ಕೆ ಸಂಬಂಧಿಸಿದ ಕಲೆ, ಸಾಹಿತ್ಯ, ಸಂಗೀತ, ಕ್ರೀಡೆ ಬೌಗೋಳಿಕ ಮುಂತಾದ ಸಾಮಾನ್ಯ ಜ್ಞಾನ ಒಳಗೊಂಡಂತೆ ಶೇ80 ರಷ್ಟು ಪ್ರಶ್ನೆಗಳು ಹಾಗೂ ಶ್ರೀ ಗಳಗನಾಥ ಮತ್ತು ನಾ.ಶ್ರೀ. ರಾಜಪುರೋಹಿತರ ಕುರಿತು ಶೇ20 ರಷ್ಟು ಪ್ರಶ್ನೆಗಳನ್ನು ಕೇಳಲಾಗುವುದು. ಪ್ರತಿ ಮಹಾವಿದ್ಯಾಲಯದಿಂದ ಒಂದು ತಂಡ ಪಾಲ್ಗೊಳ್ಳಲು ಅವಕಾಶವಿರುತ್ತದೆ. ಒಂದು ತಂಡದಲ್ಲಿ ಈರ್ವರು ಪ್ರಶಿಕ್ಷಣಾರ್ಥಿಗಳು ಪಾಲ್ಗೊಳ್ಳಬೇಕು. ಸ್ಪರ್ಧೆಯಲ್ಲಿ 5 ಕ್ಕಿಂತ ಹೆಚ್ಚು ತಂಡಗಳು ಭಾಗವಹಿಸಿದಲ್ಲಿ 20 ಅಂಕಗಳ ಲಿಖಿತ ಪರೀಕ್ಷೆ ನಡೆಸಲಾಗುವುದು, ಅತೀ ಹೆಚ್ಚು ಅಂಕಗಳನ್ನು ಪಡೆದ 5 ತಂಡಗಳನ್ನು ಮಾತ್ರ ಅಂತಿಮ ಮೌಖಿಕ ಸ್ಪರ್ಧೆಗೆ ಆಯ್ಕೆ ಮಾಡಲಾಗುವುದು.

ವಿಜೇತ ತಂಡಗಳಿಗೆ ಪ್ರಥಮ ರೂ.5000/–, ದ್ವಿತೀಯ ರೂ.4,000/– ಹಾಗೂ ತೃತೀಯ ರೂ.3,000/– ಮತ್ತು ಸಮಾಧಾನಕರ ಎರಡು ತಂಡಗಳಿಗೆ ತಲಾ ರೂ.1000/– ಗಳಂತೆ ನಗದು ಹಾಗೂ ಪ್ರಮಾಣ ಪತ್ರ ನೀಡಲಾಗುವುದು.

ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲ ತಂಡಗಳಿಗೂ ಪ್ರಮಾಣ ಪತ್ರ ನೀಡಲಾಗುವುದು. ಪ್ರವೇಶ ಉಚಿತವಾಗಿದ್ದು ಡಿಸೆಂಬರ್ 30 ರೊಳಗಾಗಿ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, #32, 'ಬಿ', ಬ್ಲಾಕ್ ಎರಡನೇ ಮಹಡಿ ಜಿಲ್ಲಾಡಳಿತ ಭವನ ಹಾವೇರಿ–581110 ವಿಳಾಸಕ್ಕೆ ಪ್ರಾಚಾರ್ಯರರ ಮುಖಾಂತರ ಹೆಸರನ್ನು ನೋಂದಾಯಿಸಬೇಕು. ಹೆಚ್ಚಿನ ಮಾಹಿತಿಗಾಗಿ ಪ್ರತಿಷ್ಠಾನದ ಶ್ರೀ ಹನುಮಂತಗೌಡ ಗೊಲ್ಲರ ಮೊ:9449122464 ಅವರನ್ನು ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಅಂಚೆ ಇಲಾಖೆಯ ಡಾಕ್ ಅದಾಲತ್ತ

**ಹಾವೇರಿ:** ಹಾವೇರಿ ಅಂಚೆ ವಿಭಾಗದ ಅಂಚೆ ಇಲಾಖೆಯ ಡಾಕ್ ಅದಾಲತ್ತ ಡಿಸೆಂಬರ್ 23 ರಂದು ಬೆಳಿಗ್ಗೆ 10 ಗಂಟೆಗೆ ಹಾವೇರಿ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ಆಯೋಜಿಸಲಾಗಿದೆ.

ಅದಾಲತ್ತನಲ್ಲಿ ತೀರ್ಮಾನಿಸುವ ಅಹವಾಲುಗಳಿದ್ದಲ್ಲಿ, ದಿನಾಂಕ 19–12–2025ರೊಳಗಾಗಿ ಅಹವಾಲುಗಳನ್ನು ಲಿಖಿತವಾಗಿ ಅಂಚೆ ಅಧೀಕ್ಷಕರು, ಹಾವೇರಿ ಅಂಚೆ ವಿಭಾಗ, ಹಾವೇರಿ–581110 ಈ ವಿಳಾಸಕ್ಕೆ ಅಥವಾ ಇ–ಅಂಚೆ(dohaveri.ka@indiapost.gov.in ) ಗೆ ಕಳಿಹಿಸಬಹುದು. ಡಾಕ್ ಅದಾಲತ್ತನಲ್ಲಿ ಹಾಜರಾಗುವವರಿಗೆ ಯಾವುದೇ ತರಹದ ಭತ್ಯೆ ನೀಡಲಾಗುವುದಿಲ್ಲ ಎಂದು ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜವಾಹರ ನವೋದಯ ವಿದ್ಯಾಲಯದ ಪ್ರವೇಶ ಪರೀಕ್ಷೆ ವಿಚಕ್ಷಕ ದಳ ರಚನೆ

**ಗದಗ** : ಗದಗ ಜಿಲ್ಲೆಯಲ್ಲಿ ದಿ: 13–12–2025 ರಂದು ಬೆಳಿಗ್ಗೆ 11 ಗಂಟೆಯಿಂದ 1.30 ಗಂಟೆಯವರೆಗೆ ಜವಾಹರ ನವೋದಯ ವಿದ್ಯಾಲಯದ ಪ್ರವೇಶ ಪರೀಕ್ಷ ಜರುಗಲಿದೆ. ಈ ಪರೀಕ್ಷೆ ಸುಗಮವಾಗಿ ಹಾಗೂ ನಿಷ್ಪಕ್ಷಪಾತವಾಗಿ ಜರುಗಲು ಅಗತ್ಯ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸುವ ಜೊತೆಗೆ ವಿಚಕ್ಷಕ ದಳ ರಚನೆ ಮಾಡಲಾಗಿದೆ ಎಂದು ಜಿಲ್ಲಾದಿಕಾರಿ ಹಾಗೂ ಜಿಲ್ಲಾ ದ 'ಂಡಾಧಿಕಾರಿ ಸಿ.ಎನ್.ಶ್ರೀಧರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಲ ಸಂರಕ್ಷಣೆಯಲ್ಲಿ ಗದಗ ಜಿಲ್ಲೆಗೆ ನರಗುಂದ ತಾಲೂಕು ಪ್ರಥಮ

# ಗದಗ ಜಿಲ್ಲೆ ದೇಶದಲ್ಲೇ 4ನೇ ಸ್ಥಾನಕ್ಕೇರಲು ನರಗುಂದ ತಾಪಂ ಕೊಡುಗೆ ಪ್ರಮುಖ

# 25 ಲಕ್ಷ ರೂ. ನಗದು ಬಹುಮಾನಕ್ಕೆ ಗದಗ ಜಿಲ್ಲೆ ಭಾಜನ






**ನರಗುಂದ** :- ಜಲಶಕ್ತಿ ಅಭಿಯಾನದ ಮಹತ್ವದ ಭಾಗವಾಗಿರುವ 'ಜಲಸಂಚಾಯಿ ಜನಭಾಗಿದಾರಿ 1.0' ಕಾರ್ಯಕ್ರಮದಲ್ಲಿ ಗದಗ ಜಿಲ್ಲೆಯ ನರಗುಂದ ತಾಲೂಕು ಐತಿಹಾಸಿಕ ಸಾಧನೆ ಮಾಡುವ ಮೂಲಕ ಗದಗ ಜಿಲ್ಲೆಗೆ ಕೀರ್ತಿ ತಂದಿದೆ. ಜಲ ಸಂರಕ್ಷಣೆ ಕಾಮಗಾರಿಗಳ ಅನುಷ್ಠಾನದಲ್ಲಿ ಗದಗ ಜಿಲ್ಲೆಯಲ್ಲಿ ನರಗುಂದ ತಾಲೂಕು ಪ್ರಥಮ ಸ್ಥಾನ ಗಳಿಸಿದ್ದು, ದೇಶದ 780 ಜಿಲ್ಲೆಗಳಲ್ಲಿ (ಝೋನ್ 3, ಕೆಟಗರಿ 3 ರಲ್ಲಿ) ಗದಗ ಜಿಲ್ಲೆ ನಾಲ್ಕನೇ ಸ್ಥಾನ ಪಡೆಯಲು ನರಗುಂದ ತಾಲೂಕು ಪ್ರಮುಖವಾದ ಕೊಡುಗೆ ನೀಡಿದೆ. ಈ ಮೂಲಕ ಗದಗ ಜಿಲ್ಲೆ ಕೇಂದ್ರದಿಂದ 25 ಲಕ್ಷ ರೂಪಾಯಿಗಳ ನಗದು ಬಹುಮಾನಕ್ಕೆ ಭಾಜನವಾಗಿದೆ.

ನೀರಿಗಾಗಿ ಒಂದಾಗಿ ಪ್ರತಿ ಹನಿ ನೀರನ್ನು ಸಂರಕ್ಷಿಸಿ ಎಂಬ ಧ್ಯೇಯದೊಂದಿಗೆ ಜಲಸಂಚಾಯಿ ಜನಭಾಗಿದಾರಿ 1.0 ಅಭಿಯಾನವನ್ನು ಪ್ರಾರಂಭಿಸಲಾಗಿತ್ತು. ಮಳೆ ನೀರನ್ನು ಸಂಗ್ರಹಿಸುವುದು, ಜಲ ಸಂರಕ್ಷಣೆಯ ಸಂಸ್ಕೃತಿಯನ್ನು ಬೆಳೆಸುವುದು, ನೀರಿನ ಗುಣಮಟ್ಟವನ್ನು ಸುಧಾರಿಸುವುದು, ನೀರಿನ ಕೊರತೆಯ ಸವಾಲಿಗೆ ಸಮುದಾಯದ ಸಹಭಾಗಿತ್ವದೊಂದಿಗೆ ಸಮರ್ಥ ಪರಿಹಾರವನ್ನು ಒದಗಿಸುವುದು ಈ ಕಾರ್ಯಕ್ರಮದ ಮುಖ್ಯ ಗುರಿಯಾಗಿತ್ತು.

ನರಗುಂದ ತಾಲೂಕಿನಿಂದ 4029 ಕಾಮಗಾರಿಗಳ ಮಾಹಿತಿಯನ್ನು ಜಲಸಂಚಾಯಿ ಜನಭಾಗಿದಾರಿ 1.0 ಪೋರ್ಟಲ್ ನಲ್ಲಿ ಅಪಲೋಡ ಮಾಡಲಾಗಿದೆ. ಗದಗ ಜಿಲ್ಲೆಯಿಂದ ಒಟ್ಟು 11971 ಕಾಮಗಾರಿಗಳನ್ನು ಅಪಲೋಡ್ ಮಾಡಲಾಗಿದ್ದು, ಅದರಲ್ಲಿ ಲಕ್ಷ್ಮೇಶ್ವರ-353, ಮುಂಡರಗಿ-1272, ರೋಣ-2669, ಗಜೇಂದ್ರಗಡ-74, ಶಿರಹಟ್ಟಿ-45 ಹಾಗೂ ಗದಗ ತಾಲೂಕಿನಿಂದ 3529 ಜಲಸಂರಕ್ಷಣೆಯ ಕಾಮಗಾರಿಗಳ ಪೋಟೋಗಳನ್ನು ಅಪಲೋಡ್ ಮಾಡಲಾಗಿದೆ. ಈ ಮೂಲಕ ನರಗುಂದ ತಾಲೂಕಿನಿಂದ ಅತೀ ಹೆಚ್ಚು ಜಲಸಂರಕ್ಷಣೆಯ ಕಾಮಗಾರಿಗಳನ್ನು ಅನುಷ್ಠಾನ ಮಾಡಿ ಅವುಗಳ ಪೋಟೋಗಳನ್ನು ಅಪಲೋಡ್ ಮಾಡುವುದರ ಮೂಲಕ ಗದಗ ಜಿಲ್ಲೆ ದೇಶದಲ್ಲೇ ನಾಲ್ಕನೇ ಸ್ಥಾನ ಮತ್ತು ಕರ್ನಾಟಕದಲ್ಲಿ ಪ್ರಥಮ ಸ್ಥಾನ ಪಡೆಯಲು ನರಗುಂದ ತಾಲೂಕು ಪ್ರಮುಖ ಪಾತ್ರ ವಹಿಸಿದೆ..

2024 ಏಪ್ರಿಲ್ 1 ರಿಂದ 2025 ಮಾರ್ಚ್ 31 ರ ವರೆಗಿನ ಅವಧಿಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ಮನರೇಗಾ) ಸೇರಿದಂತೆ ವಿವಿಧ ಯೋಜನೆಗಳಡಿ ಬೃಹತ್ ಜಲ ಕ್ರಾಂತಿಗೆ ನರಗುಂದ ತಾಲೂಕಿನಲ್ಲಿ ನಾಂದಿ ಹಾಡಲಾಯಿತು. ಈ ಅವಧಿಯಲ್ಲಿ ಒಟ್ಟು ತಾಲೂಕಿನಲ್ಲಿ 4029 ಜಲ ಸಂರಕ್ಷಣೆ ಕಾಮಗಾರಿಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ, ಜಲಸಂಚಾಯಿ ಪೋರ್ಟಲ್ನಲ್ಲಿ ದಾಖಲಿಸಲಾಯಿತು. ಮುಖ್ಯವಾಗಿ ವೈಯಕ್ತಿಕ ಮತ್ತು ಸಮುದಾಯ ಬದು ನಿರ್ಮಾಣ, ಮಳೆ ನೀರು ಕೊಯ್ಲು ಕಾಮಗಾರಿಗಳು, ಬೋರವೆಲ್ ರಿಚಾರ್ಜ್ , ಚೆಕ್ ಡ್ಯಾಂ ನಿರ್ಮಾಣದಂತಹ ಕಾಮಗಾರಿಗಳು ಪ್ರಮುಖವಾಗಿವೆ.

ನರಗುಂದ ತಾಲೂಕಿನಲ್ಲಿ ಅಂತರ್ಜಲ ಮಟ್ಟ ಹೆಚ್ಚಿಸುವ ಉದ್ದೇಶದಿಂದ ಹಲವು ಪರಿಸರ ಸ್ನೇಹಿ ಕಾಮಗಾರಿಗಳನ್ನು ಅನುಷ್ಠಾನ ಮಾಡಲಾಗಿದೆ. ಕೇಂದ್ರ ಅಧ್ಯಯನ ತಂಡ ಕಾಮಗಾರಿಗಳ ಗುಣಮಟ್ಟದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದೆ. ಹೀಗಾಗಿ ಗದಗ ಜಿಲ್ಲೆಗೆ ಪ್ರಥಮ ಸ್ಥಾನ ಪಡೆಯಲು ನರಗುಂದ ತಾಲೂಕಿನ ಕೊಡುಗೆ ಅಪಾರ. ಜಿಲ್ಲೆಯಲ್ಲಿ ನಾವು ಪ್ರಥಮ ಸ್ಥಾನ ದೊರೆತಿರುವುದು ನಮಗೆ ಮತ್ತಷ್ಟು ಕ್ರಿಯಾತ್ಮಕ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಪ್ರೋತ್ಸಾಹಕವಾಗಿದೆ. ಸದರಿ ಅಭಿಯಾನಧಡಿ ಶ್ರಮಿಸಿದ ಮನರೇಗಾ ತಂಡಕ್ಕೆ ಹಾಗೂ ತಾಲೂಕಿನ ಎಲ್ಲ ಆರ್.ಡಿ.ಪಿ.ಆರ್ ಅಧಿಕಾರಿ ಸಿಬ್ಬಂದಿ ವರ್ಗಕ್ಕೆ ಅಭಿನಂದನೆಗಳು.

**ಸಂತೋಷಕುಮಾರ್ ಪಾಟೀಲ್, ಸಹಾಯಕ ನಿರ್ದೇಶಕರು, ಗ್ರಾಮೀಣ ಉದ್ಯೋಗ**

## ಕೇಂದ್ರ ತಂಡದಿಂದ ಮನ್ನಣೆ

ನರಗುಂದ ತಾಲೂಕಿನ ಈ ಶ್ರಮಕ್ಕೆ ಕೇಂದ್ರ ತಂಡದಿಂದಲೂ ಮನ್ನಣೆ ದೊರೆತಿದೆ. ಕೇಂದ್ರ ನೋಡಲ್ ಅಧಿಕಾರಿಗಳು 2025 ಜೂನ್ 16 ರಿಂದ 21ರ ವರೆಗೆ ಗದಗ ಜಿಲ್ಲೆಯ ಎಲ್ಲ ತಾಲೂಕುಗಳ ಸ್ಥಳ ಪರಿಶೀಲನೆ, ದಾಖಲೆಗಳ ಪರಿಶೀಲನೆ ನಡೆಸಿದರು. ಈ ವೇಳೆ ನರಗುಂದ ತಾಲೂಕಿನ ವಿವಿಧ ಗ್ರಾಮ ಪಂಚಾಯತಗಳಲ್ಲಿ ಕೈಗೊಂಡ ಜಲಸಂರಕ್ಷಣೆಯ ಕಾಮಗಾರಿಗಳಿಗೆ ಭೇಟಿ ನೀಡಿ ಪರಿಶೀಲಿಸಿ ಕಾಮಗಾರಿಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ್ದರು. ಅಲ್ಲದೆ ಉನ್ನತ ಮಾನದಂಡಗಳನ್ನು ಪೂರೈಸಿರುವುದು ಖಚಿತಪಡಿಸಿಕೊಂಡು ಮೆಚ್ಚುಗೆ ವ್ಯಕ್ತಪಡಿಸಿದ್ದೆ ಗದಗ ಜಿಲ್ಲೆಗೆ ಈ ಪ್ರಶಸ್ತಿ ಬರಲು ಕಾರಣವಾಗಿದೆ.

## ಕಿತ್ತೂರ ರಾಣಿ ಚೆನ್ನಮ್ಮ ಹಾಗೂ ವೀರಮಹಿಳೆ ಪ್ರಶಸ್ತಿಗಾಗಿ ಅರ್ಜಿ ಅಹ್ವಾನ

**ಶಿವಮೊಗ್ಗ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಕಳೆದ ಐದು ವರ್ಷಗಳಿಂದ ಮಹಿಳೆಯರ ಸರ್ವತೋಮುಖ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ಅರ್ಹ ಸಂಸ್ಥೆಗಳಿಗೆ ಹಾಗೂ ವ್ಯಕ್ತಿಯನ್ನೊಳಗೊಂಡಂತೆ ಕಲೆ, ಶಿಕ್ಷಣ, ಸಾಹಿತ್ಯ ಮತ್ತು ಕ್ರೀಡಾ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ಮಹಿಳೆಯರಿಗೆ 2025-26 ನೇ ಸಾಲಿನ ಕಿತ್ತೂರ ರಾಣಿ ಚೆನ್ನಮ್ಮ ಪ್ರಶಸ್ತಿ ಹಾಗೂ ಕ್ಲಿಷ್ಟಕರ ಪರಿಸ್ಥಿತಿಯಲ್ಲಿ ಅತ್ಮಸ್ಥೈರ್ಯದಿಂದ ಹೋರಾಡಿ ಜೀವನೋಪಾಯದಿಂದ ಪಾರು ಮಾಡಿದಂತಹ ಮಹಿಳೆಯರನ್ನು ಗುರುತಿಸಿ ವೀರ ಮಹಿಳಾ ಪ್ರಶಸ್ತಿಗಳನ್ನು ನೀಡಲು ಉದ್ದೇಶಿಸಿದ್ದು, ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ವೀರಮಹಿಳೆ ಪ್ರಶಸ್ತಿಗೆ ಅರ್ಹತೆಗಳು : 18 ರಿಂದ 45ವರ್ಷ ವಯೋಮಿತಿಯೊಳಗಿನ ಒಬ್ಬ ಮಹಿಳೆ ಆಪತ್ಕಾಲದಲ್ಲಿರುವ ಮತ್ತೊಬ್ಬ ವ್ಯಕ್ತಿಯ ಜೀವ ಕಾಪಾಡುವಲ್ಲಿ ಅಥವಾ ಪ್ರಾಣ ರಕ್ಷಿಸುವಲ್ಲಿ ತನ್ನ ಜೀವದ ಹಂಗನ್ನು ತೊರೆದು ಸಮಯ ಪ್ರಜ್ಞೆಯಿಂದ ಧೈರ್ಯ ಸಾಹಸದೊಂದಿಗೆ ಅಪಾಯದಲ್ಲಿರುವ ವ್ಯಕ್ತಿಯ ಜೀವ ಕಾಪಾಡುವಂತಹ ಕಾರ್ಯವನ್ನು ಮಾಡಿದಲ್ಲಿ ಅಂತಹ ಮಹಿಳೆಯರನ್ನು ವೀರ ಮಹಿಳೆ ಎಂದು ಪರಿಗಣಿಸಲಾಗುವುದು. ತಾವು ಮಾಡಿದ ಸಾಧನೆ ಸಾರ್ವಜನಿಕರ ಗಮನಕ್ಕೆ ಬಂದಿರಬೇಕು ಹಾಗೂ ಸಾಧನೆಯು ಪ್ರಶಸ್ತಿ ಪಡೆಯುವ ಹಿಂದಿನ ವರ್ಷದ ಜನವರಿ 01 ರಿಂದ ಡಿಸೆಂಬರ್ 31ರೊಳಗಾಗಿ ಇರಬೇಕು. ವೀರಮಹಿಳೆ ಪ್ರಶಸ್ತಿ ಪಡೆಯುವ ಮಹಿಳೆಯು ವಿಶೇಷ ಶೌರ್ಯ ಹಾಗೂ ಸಾಧನೆ ಮಾಡಿರಬೇಕು. ಪ್ರಶಸ್ತಿಗೆ ಸಂಬಂಧಿಸಿದ ಮಹಿಳೆಯ ತಂದೆ/ತಾಯಿ ಪೋಷಕರು ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಈ ಪ್ರಶಸ್ತಿಗಾಗಿ ರಾಜ್ಯ ವತಿಯಿಂದ ಒಬ್ಬ ಮಹಿಳೆಗೆ ಮಾತ್ರ ರೂ. 25,000 ಗಳ ನಗದು ಹಾಗೂ ಪ್ರಶಸ್ತಿ ಪತ್ರ ನೀಡಲಾಗುವುದು. ಇದನ್ನು ಪ್ರತಿ ವರ್ಷ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯಂದು ನೀಡಲಾಗುವುದು.

ಕಿತ್ತೂರ ರಾಣಿ ಚೆನ್ನಮ್ಮ ಪ್ರಶಸ್ತಿಗೆ ಅರ್ಹತೆಗಳು : ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿಗೆ ವೇತನ ಪಡೆಯುತ್ತಿರುವ ವ್ಯಕ್ತಿಗಳು ಅರ್ಹರಾಗಿರುವುದಿಲ್ಲ.

ಪ್ರಶಸ್ತಿಗೆ ಬರುವ ಅರ್ಜಿಗಳ ಪರಿಶೀಲನೆ ಮತ್ತು ಆಯ್ಕೆಗೆ ಸಂಬಂಧಿಸಿದಂತೆ ಸಮಿತಿಯ ತೀರ್ಮಾನವೇ ಅಂತಿಮ. ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿಗೆ ಅರ್ಜಿ ಸಲ್ಲಿಸುವ ಸ್ವಯಂ ಸೇವಾ ಸಂಸ್ಥೆ ಹಾಗೂ ವ್ಯಕ್ತಿಗಳು ಮಹಿಳೆಯರ ಅಭಿವೃದ್ಧಿಗಾಗಿ ಕನಿಷ್ಠ 5 ವರ್ಷಗಳ ಸೇವೆ ಸಲ್ಲಿಸಿರಬೇಕು.

ಪ್ರಶಸ್ತಿಗೆ ಆಯ್ಕೆ ಮಾಡುವಾಗ ಸಂಸ್ಥೆ ಹಾಗೂ ವ್ಯಕ್ತಿ ಮಹಿಳಾ ಅಭಿವೃದ್ಧಿ ಕ್ಷೇತ್ರದಲ್ಲಿ ಕೈಗೊಂಡ ಕಾರ್ಯಕ್ರಮಗಳ ಮತ್ತು ಇತರೆ ಕ್ಷೇತ್ರಗಳಾದ ಮಹಿಳಾ ಅಭಿವೃದ್ಧಿ, ಕ್ರೀಡೆ, ಕಲೆ, ಸಾಹಿತ್ಯ, ಶಿಕ್ಷಣ ಕ್ಷೇತ್ರಗಳಲ್ಲಿ ವ್ಯಕ್ತಿಗಳು ಶ್ರೇಷ್ಠ ಮಟ್ಟದ ಸಾಧನೆಗಳನ್ನು ಕೈಗೊಂಡಿರಬೇಕು.

ಈ ಪ್ರಶಸ್ತಿಯನ್ನು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಥವಾ ಸರ್ಕಾರವು ನಿಗದಿಪಡಿಸುವ ದಿನಾಂಕ ಮತ್ತು ಸ್ಥಳಗಳಲ್ಲಿ ನೀಡಲಾಗುವುದು. ಪ್ರಶಸ್ತಿಗೆ ಆಯ್ಕೆಯಾದ ವ್ಯಕ್ತಿಗಳು ಪ್ರಶಸ್ತಿಗಳನ್ನು ಖುದ್ದಾಗಿ ಪಡೆಯಬೇಕು ಹಾಗೂ ಸಂಘ ಸಂಸ್ಥೆಗಳಿಗೆ ನೀಡುವ ಪ್ರಶಸ್ತಿಯನ್ನು ಸಂಘದ ಪಧಾಧಿಕಾರಿಗಳು ಸ್ವೀಕರಿಸಬಹುದು.

ಆಸಕ್ತರು ಅರ್ಜಿಯನ್ನು ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, 100 ಅಡಿ ರಸ್ತೆ, ಆಲ್ಕೊಳ. ಶಿವಮೊಗ್ಗ ಇವರಿಂದ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ದಿ:22/12/2025ರೊಳಗಾಗಿ ಸಲ್ಲಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ದೂ.ಸಂ.: 08182-295514ನ್ನು ಸಂಪರ್ಕಿಸುವುದು.

## ನೀರಾವನ್ನು ಪರವಾನಿಗೆ ಪಡೆಯದೇ ಉತ್ಪಾದಿಸಲು ಮನವಿ

**ಚಿತ್ರದುರ್ಗ** : 11000 ರೈತರ ತೋಟಗಳಲ್ಲಿ ನೀರಾ (ಕಲ್ಲರಸ) ವನ್ನು ಪರವಾನಿಗೆ ಪಡೆಯದೇ ಉತ್ಪಾದಿಸಲು ರೈತರಿಗೆ ಅವಕಾಶ ನೀಡಿ ಅನುಕೂಲ ಮಾಡಿಕೊಡುವಂತೆ ಆಗ್ರಹಿಸಿ

ರೈತರ ತೋಟಗಳಲ್ಲಿ ನೀರಾ (ಕಲ್ಲರಸ) ವನ್ನು ಪರವಾನಿಗೆ ಪಡೆಯದೇ ಉತ್ಪಾದಿಸಲು ರೈತರಿಗೆ ಅವಕಾಶ ನೀಡಿ ಅನುಕೂಲ ಮಾಡಿಕೊಡುವಂತೆ ಆಗ್ರಹಿಸಿ ಅಪರ ಜಿಲ್ಲಾಧಿಕಾರಿಗಳಿಗೆ ಮನವಿಯನ್ನು ಭಾರತೀಯ ಜನತಾ ಪಾರ್ಟಿಯ ರೈತ ಮೋರ್ಚಾದ ಅಧ್ಯಕ್ಷರಾದ ಟಿ.ವೆಂಕಟೇಶ್ ಯಾದವ್ ನೇತೃತ್ವದಲ್ಲಿ ಗುರುವಾರ ಸಲ್ಲಿಸಲಾಯಿತು.

ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಕೂರು ತಾಲ್ಲೂಕಿನಲ್ಲಿ ನೀರಾ (ಕಲ್ಲರಸ) ವನ್ನು ಉತ್ಪಾದನೆ ಮಾಡುತ್ತಿರುವಂತಹ ವಸುಂದರ ಫಾರಂ ಮಾಲೀಕರಾದ ಎಸ್.ಸಿ.ವೀರಭದ್ರಪ್ಪನವರ ತೋಟಕ್ಕೆ ಅಬಕಾರಿ ಅಧಿಕಾರಿಗಳು ಏಕಾಏಕಿ ನುಗ್ಗಿ ಅಲ್ಲಿಂದಂತಹ ನೀರಾ (ಕಲ್ಪರಸ) ನಾಮಫಲಕಗಳನ್ನು ಕಿತ್ತು ಎಸೆದು ನೀರಾ ಬಳಕೆಗೆ ಉತ್ಪಾದಿಸುವ ಪರಿಕರಗಳನ್ನೆಲ್ಲ ಕಿತ್ತೆಸೆದು ನೀರಾ ಉತ್ಪಾದಿಸಿದರೆ ಕೇಸ್ ದಾಖಲಿಸುವಾಗಿ ತಾಖೀತು ಮಾಡಿರುವುದು ಖಂಡನಾರ್ಹವಾಗಿದೆ ಎಂದಿದ್ದಾರೆ.

ಇದರಿಂದ ಮನ ನೊಂದಿರುವ ಇವರಿಗೆ ಅಬಕಾರಿ ಅಧಿಕಾರಿಗಳು ಕ್ಷಮೆಯಾಚಿಸಬೇಕು. ಈ ನೀರಾ (ಕಲ್ಪರಸ) ಉತ್ಪಾದನೆಯಿಂದ ಈ ಸ್ವಾಸ್ತ್ರ ಸಮಾಜಕ್ಕೆ ಆರೋಗ್ಯಕರವಾದಂತೆ ಅಂಶಗಳನ್ನು ಹೊಂದಿದೆ ಎಂದು ಹಿಂದಿನ ಋಷಿ ಪರಂಪರೆ, ವೈದ್ಯಕೀಯ ಪರಂಪರೆ,



ಕೃಷಿ ಪರಂಪರೆ ಈ ಎಲ್ಲಾ ಇತಿಹಾಸಗಳನ್ನು ನೋಡಿದಾಗ ಈ ನೀರಾ (ಕಲ್ಪರಸ)ವನ್ನು ಸೇವಿಸಿ ಅನುಭವಿಸಿದಾಗ ಈ ಮನುಷ್ಯ ಸಂಕುಲಕ್ಕೆ ಆರೋಗ್ಯಕರ ಅಂಶಗಳು ಇದರಲ್ಲಿ ಇರುವುದು ಕಂಡು ಬಂದಿದೆ. ಇವತ್ತಿನ ಹಲವಾರು ರೋಗಗಳಿಗೆ ಮತ್ತು ಮನುಷ್ಯಕ್ಕೆ ದೇಹಕ್ಕೆ ಬೇಕಾಗುವಂತಹ ಹಲವಾರು ವಿಟಮಿ□□ಗಳ (ಖನಿಜಾಂಶ) ಇದರಲ್ಲಿವೆ ಎಂದು ಹಲವಾರು ಬಾರಿ ಸಾಬೀತಾಗಿ ದೃಢಪಟ್ಟಿದೆ ಎನ್ನಲಾಗಿದೆ.

ಇದರ ಉಪ ಉತ್ಪನ್ನವಾದಂತಹ ನೀರಾ ಬೆಲ್ಲ ಉತ್ತಮವಾದ ಗುಣಮಟ್ಟವನ್ನು ಕೂಡ ಹೊಂದಿದೆ. ಹಾಗಾಗಿ ಈ ಸಮಾಜಕ್ಕೆ ನೀರಾ (ಕಲ್ಪರಸ) ದಿಂದ ಸ್ವಾಸ್ತ್ರ ಸಮಾಜವನ್ನು ನಿರ್ಮಾಣ ಮಾಡಲು ಮತ್ತು ರೈತರನ್ನು ಆರ್ಥಿಕವಾಗಿ ಸಬಲರನ್ನಾಗಿಸಲು ಉತ್ತಮವಾದಂತಹ ಒಂದು ಕೃಷಿ ಪರಂಪರೆಯಾಗಿದೆ. ಹಾಗಾಗಿ ತತಕ್ಷಣ ತಾವುಗಳು ಸ್ಥಳೀಯವಾಗಿ ಉತ್ಪಾದಿಸುತ್ತಿರುವ ನೀರಾ (ಕಲ್ಪರಸ)ವನ್ನು ರೈತರಿಗೆ ಇನ್ನಷ್ಟು ಉತ್ಪಾದಿಸಲು ಪ್ರೋತ್ಸಾಹ ನೀಡಬೇಕು ಹಾಗೂ ಸರ್ಕಾರಕ್ಕೆ ಚಿತ್ರದುರ್ಗ ಜಿಲ್ಲೆಯಲ್ಲಿ ನೀರಾ (ಕಲ್ಪರಸ)ವನ್ನು ಉತ್ಪಾದಿಸುವಂತ ರೈತರ ರಕ್ಷಣೆಗೆ ಮುಂದಾಗಬೇಕೆಂದು ಮನವಿ ಮಾಡಲಾಯಿತು.

ಈ ಸಂದರ್ಭದಲ್ಲಿ ನಗರಾಧ್ಯಕ್ಷರಾದ ಲೋಕೇಶ್, ಮೊಳಕಾಲ್ಮೂರು ಮಂಡಲ ಅಧ್ಯಕ್ಷರಾದ ಶ್ರೀರಾಮರೆಡ್ಡಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಮದಾಸ್, ಜಿಲ್ಲಾ ವಕ್ತಾರ ನಾಗರಾಜ್ ಬೇದ್ರೇ,

ನಾಯಕನಹಟ್ಟಿ ಮಂಡಲ ಅಧ್ಯಕ್ಷ ಮಲ್ಲೇಶ್, ಶಾಂತಮ್ಮ ನಾಗರಾಜ್, ಪ್ರಭಾಕರ್ ಸಿದ್ದಾರ್ಥ, ಬಸುರಾಜ್, ಹರೀಶ್, ನಗರ ಉಪಾಧ್ಯಕ್ಷ ಪಲ್ಲವಿ ಪ್ರಸನ್ನ, ಮಂಡಲ ಅಧ್ಯಕ್ಷ ಮಲ್ಲೇಶಪ್ಪ, ಜಿಲ್ಲಾ ಕಾರ್ಯದರ್ಶಿ ರೇಖಾ, ಮಹಿಳಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಾಂತಮ್ಮ, ನಾಗರಾಜಪ್ಪ ಸೇರಿದಂತೆ ಇತರರು ಭಾಗವಹಿಸಿದ್ದರು.

## ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನ

**ಗದಗ :** 2025-26ನೇ ಸಾಲಿನಲ್ಲಿ ವಿವಿಧ ಕ್ರೀಡಾಕೂಟದಲ್ಲಿ ರಾಷ್ಟ್ರಮಟ್ಟ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಿ ವಿಜೇತರಾದ ಗದಗ ಜಿಲ್ಲೆಯ ಕ್ರೀಡಾಪಟುಗಳಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಪ್ರೋತ್ಸಾಹಧನವನ್ನು ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ.

ಜ. 1-2025 ರಿಂದ ಡಿ. 31-2025 ರವರೆಗೆ ವಿವಿಧ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ರಾಷ್ಟ್ರ ವಿಶ್ವವಿದ್ಯಾಲಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ವಿಜೇತರಾದ ಗದಗ ಜಿಲ್ಲೆಯ ಕ್ರೀಡಾಪಟುಗಳು ಈ ಕೆಳಕಾಣಿಸಿದ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದು. ಕ್ರೀಡಾಕೂಟದಲ್ಲಿ ಭಾಗವಹಿಸಿದ ಬಗ್ಗೆ ಪ್ರಮಾಣಪತ್ರ, ಕ್ರೀಡಾಪಟುಗಳ ಆಧಾರ ಕಾರ್ಡ, ಕ್ರೀಡಾಪಟುಗಳ ಬ್ಯಾಂಕ ಪಾಸ್ ಬುಕ್, ಪಾಸ್ ಪೂರ್ಟ ಅಳತೆಯ ಪೋಟೋ-01, ದಾಖಲಾತಿಗಳೊಂದಿಗೆ ಅರ್ಜಿಯನ್ನು ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ಗದಗ ಇಲ್ಲಿ ಲಭ್ಯವಿದ್ದು, ಡಿ. 31 ರೊಳಗಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08372-238345ಗೆ ಸಂಪರ್ಕಿಸಲು ಕೋರಲಾಗಿದೆ ಎಂದು ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಲರು ಇವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ರೈಲು ಗಾಡಿಯಿಂದ ಬಿದ್ದು ವ್ಯಕ್ತಿ ಸಾವು

**ಶಿವಮೊಗ್ಗ :** ನವೆಂಬರ್ 28 ರಂದು ಸುಮಾರು 40 ರಿಂದ 45 ವರ್ಷದ ಅಪರಿಚಿತ ವ್ಯಕ್ತಿಯೊಬ್ಬರು ಭದ್ರಾವತಿ ರೈಲ್ವೇ ನಿಲ್ದಾಣದ ಹತ್ತಿರ ರೈಲು ಗಾಡಿಯಿಂದ ಬಿದ್ದು ಗಾಯಗೊಂಡಿದ್ದು ಚಿಕಿತ್ಸೆಗಾಗಿ ಜಿಲ್ಲಾ ಮೆಗ್ಗಾನ್ ಆಸ್ಪತ್ರೆಗೆ ದಾಖಲಿಸಲಾಗಿ ಡಿ.10 ರಂದು ಚಿಕಿತ್ಸೆ ಫಲಕಾರಿಯಾದೇ ಮೃತಪಟ್ಟಿರುತ್ತಾರೆ

## ಅಬಕಾರಿ ದಾಳಿ: 51.75 ಲೀ ಗೋವಾ ಮದ್ಯ ಪತ್ತೆ



**ಶಿವಮೊಗ್ಗ:** ಶಿವಮೊಗ್ಗ ತಾಲೂಕು ಗೋವಿಂದಪುರ ಗ್ರಾಮದ ಶಿವಕುಮಾರ್ ಬಿನ್ ವರದರಾಜ್ ಇವರಿಗೆ ಸೇರಿದ ಶೆಡ್ ಮೇಲೆ ಶಿವಮೊಗ್ಗ ಅಬಕಾರಿ ಇಲಾಖೆ ಸಿಬ್ಬಂದಿಗಳು ಡಿ.10 ರಂದು ದಾಳಿ ನಡೆಸಿ, ಅನಧಿಕೃತವಾಗಿ ಮಾರಾಟ ಮಾಡುವ ಸಲುವಾಗಿ ದಾಸ್ತಾನು ಮಾಡಿದ್ದ 51.75 ಲೀ ಗೋವಾ ಮದ್ಯವನ್ನು ವಶಪಡಿಸಿಕೊಂಡು, ಆರೋಪಿಯನ್ನು ದಸ್ತಗಿರಿ ಮಾಡಿ ಪ್ರಕರಣ ದಾಖಲಿಸಿದ್ದಾರೆ.

ಅಬಕಾರಿ ನಿರೀಕ್ಷಕ ಶ್ರೀನಾಥ್ ಆರ್. ರವರ ನೇತೃತ್ವದಲ್ಲಿ ಪುಟ್ಟಪ್ಪ-ಅ.ಉ.ನಿ, ಶಿವಮೂರ್ತಿ ನಾಯ್ಕ್, ಗಣಪತಿ ಮತ್ತು ಅರ್ಜುನ್ ಇವರುಗಳು ಈ ದಾಳಿಯನ್ನು ನಡೆಸಿರುತ್ತಾರೆ.

## ಎಂಎಲ್‌ಸಿ ಡಿ.ಟಿ.ಶ್ರೀನಿವಾಸ್ ಗೆ ಸಚಿವ ಸ್ಥಾನ ನೀಡಿ ರಾಜ್ಯ ಪ್ರವರ್ಗ-1ರ ಜಾತಿಗಳ ಒಕ್ಕೂಟದ ಆಗ್ರಹ

**ದಾವಣಗೆರೆ:** ರಾಜ್ಯದ ಅತ್ಯಂತ ಹಿಂದುಳಿದ ಸಮುದಾಯದ ನಾಯಕರಾದ ವಿಧಾನ ಪರಿಷತ್ ಸದಸ್ಯ ಡಿ.ಟಿ.ಶ್ರೀನಿವಾಸರಿಗೆ ಸಚಿವ ಸ್ಥಾನ ನೀಡಬೇಕೆಂದು ಕರ್ನಾಟಕ ರಾಜ್ಯ ಪ್ರವರ್ಗ-1ರ ಜಾತಿಗಳ ಒಕ್ಕೂಟ ಆಗ್ರಹಿಸಿದೆ.

ಸುದ್ದಿಗೋಷ್ಠಿಯಲ್ಲಿ ಒಕ್ಕೂಟದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಂಜುನಾಥ ಬಿ.ಗುತ್ತೂರು ಮಾತನಾಡಿ, 2023ರ ವಿಧಾನಸಭಾ ಚುನಾವಣೆಯಲ್ಲಿ ಹಿಂದುಳಿದ ವರ್ಗದವರು ಒಗ್ಗಟ್ಟಾಗಿ ಮತ ಹಾಕಿದ್ದರಿಂದಲೇ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಿದೆ. ಹೀಗಿರುವಾಗ ಪ್ರವರ್ಗ-1ರ ಒಕ್ಕೂಟದ ರಾಜ್ಯಾಧ್ಯಕ್ಷರಾದ ವಿಧಾನ ಪರಿಷತ್ ಸದಸ್ಯ ಡಿ.ಟಿ.ಶ್ರೀನಿವಾಸರನ್ನು ಕೆಪಿಸಿಸಿ ಹಿಂದುಳಿದ ವರ್ಗಗಳ ವಿಭಾಗಗಳ ಅಧ್ಯಕ್ಷರಾಗಿ ನೇಮಿಸಿ, ನಂತರ ರದ್ದುಪಡಿಸಿದ್ದು ಸರಿಯಲ್ಲ ಎಂದರು.

ಇದು ಅತೀ ಹಿಂದುಳಿದ ಎಲ್ಲಾ ಸಮಾಜಗಳಿಗೆ ಮಾಡಿದ ಅವಮಾನವಾಗಿದೆ. ಕಾಂಗ್ರೆಸ್ಸಿಗೆ ಅಸಾಧ್ಯವಾಗಿದ್ದ ಆಗ್ನೇಯ ಶಿಕ್ಷಕರ ಕ್ಷೇತ್ರವನ್ನು ಕಾಂಗ್ರೆಸ್ಸಿಗೆ ಗೆದ್ದುಕೊಟ್ಟಿರುವ ಡಿ.ಟಿ.ಶ್ರೀನಿವಾಸರಿಗೆ ಸಚಿವ ಸ್ಥಾನ ನೀಡಿದರೆ ಅತೀ ಹಿಂದುಳಿದ ಸಮಾಜಗಳಿಗೆ ಅನುಕೂಲವಾಗುತ್ತದೆ. ಹೀಗಾಗಿ ಸಚಿವ ಸಂಪುರ ಪುನಾರಚನೆ ವೇಳೆ ಇವರನ್ನು ಪರಿಗಣಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯದ ಪ್ರವರ್ಗ-1 ಹಿಂದುಳಿದ ಜಾತಿಗಳಲ್ಲಿ 95 ಜಾತಿ, 376 ಉಪ ಜಾತಿಗಳು ಬರಲಿದ್ದು, ಈ ಸಮಾಜಗಳ ಒಟ್ಟು ಜನಸಂಖ್ಯೆ ಸುಮಾರು 75 ಲಕ್ಷದಷ್ಟು ಇದೆ. ಆರ್ಥಿಕ, ಸಾಮಾಜಿಕ, ಔದ್ಯೋಗಿಕವಾಗಿ ಅತ್ಯಂತ ಹಿಂದುಳಿದ ಈ ಜಾತಿಗಳಲ್ಲಿ ಸಾಕ್ಷರತೆ ಪ್ರಮಾಣ ಅತ್ಯಂತ ಕಡಿಮೆ ಇದೆ. ರಾಜಕೀಯ ಪ್ರಾತಿನಿಧ್ಯವಂತೂ ಇಲ್ಲವೇ ಇಲ್ಲ ಎಂಬಂತಾಗಿದೆ. ಸ್ಥಳೀಯ ಸಂಸ್ಥೆ, ತಾಲೂಕು ಮತ್ತು ಜಿಲ್ಲಾ ಪಂಚಾಯಿತಿಗಳಲ್ಲೂ ಪ್ರಾತಿನಿಧ್ಯ ಇಲ್ಲವಾಗಿದೆ. ಹೀಗಾಗಿ ಅತ್ಯಂತ ಹಿಂದುಳಿದ ಸ್ಥಿತಿಗೆ ಈ ಸಮಾಜಗಳು ತಲುಪಿವೆ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ಒಕ್ಕೂಟದ ಅಧ್ಯಕ್ಷ ಶ್ರೀನಿವಾಸ ತುರ್ಚಘಟ್ಟ, ಮುಖಂಡರಾದ ಎಸ್.ತಿಪ್ಪೇಸ್ವಾಮಿ, ಭೋಜರಾಜ, ಶ್ರೀನಿವಾಸ, ಯು.ಹನುಮಂತರಾಜ ಇತರರು ಸುದ್ದಿಗೋಷ್ಠಿಯಲ್ಲಿ ಹಾಜರಿದ್ದರು.

## ಅರ್ಜಿ ಆಹ್ವಾನ

**ಗದಗ :** ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಯುವಸ್ಪಂಧನ ಕೇಂದ್ರದಲ್ಲಿ ನರಗುಂದ ತಾಲೂಕು-01, ಶಿರಹಟ್ಟಿ ತಾಲೂಕು-01 ಯುವಪರಿವರ್ತಕರ ಹುದ್ದೆ ಖಾಲಿ ಇದ್ದು, ಹುದ್ದೆಯಲ್ಲಿ ಕಾರ್ಯನಿರ್ವಹಿಸಲು ಪದವೀಧರರಾಗಿರಬೇಕು, ಹಾಗೂ 35 ವರ್ಷದೊಳಗಿನ ಮಹಿಳೆಯರಾಗಿರಬೇಕು, ವಾಕ್ಚಾತುರ್ಯ ಹೊಂದಿರಬೇಕು, ಕಂಪ್ಯೂಟರ ಜ್ಞಾನ ಹಾಗೂ ಟೈಪಿಂಗ್ ಕೌಶಲ್ಯ ಹೊಂದಿರಬೇಕು.

ಆಸಕ್ತ ಯುವಕ/ಯುವತಿಯರು ತಮ್ಮ ಸ್ವ ವಿವರಗಳೊಂದಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಡಿ. 17 ರೊಳಗೆ ಅರ್ಜಿಯನ್ನು ಸಲ್ಲಿಸಬಹುದು, ಹೆಚ್ಚಿನ ಮಾಹಿತಿಗಾಗಿ ಮೊ.ಸಂ 7349223455 ಕಛೇರಿ ದೂರವಾಣಿ ಸಂಖ್ಯೆ 08372-238345ಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ರಾಜ್ಯ ಮಟ್ಟದ ಉಚಿತ ಅರ್ಚಕ ತರಬೇತಿ ಶಿಬಿರ ಆಯೋಜನೆ

**ಶಿವಮೊಗ್ಗ:** ಮಂಡ್ಯ ಜಿಲ್ಲೆ ನಾಗಮಂಗಲ ತಾಲೂಕಿನ ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದಿಂದ ಪ್ರತಿ ವರುಷದಂತೆ ಈ ಬಾರಿಯು ಡಿಸೆಂಬರ್ 16 ರಿಂದ 26 ರವರಗೆ 18 ನೇ ರಾಜ್ಯ ಮಟ್ಟದ ಉಚಿತ ಅರ್ಚಕ ತರಬೇತಿ ಶಿಬಿರವನ್ನು ಆಯೋಜಿಸಲಾಗುತ್ತಿದೆ. ಈ ಶಿಬಿರವು ಎಲ್ಲಾ ಜಾತಿ, ಧರ್ಮ ಮತ್ತು ಲಿಂಗಗಳ ಬೇಧವಿಲ್ಲದೆ ಸಂಪೂರ್ಣ ಉಚಿತವಾಗಿ ಜನರಿಗೆ ಕ್ಷೇತ್ರದ ಬಿಜಿಎಸ್ ಸಭಾ ಮಂಟಪದಲ್ಲಿ ನಡೆಯಲಿದೆ ಎಂದು ಮಹಾಸಂಸ್ಥಾನ ಮಠದ ಪ್ರಧಾನ ಕಾರ್ಯದರ್ಶಿ ಹಾಗೂ ಶಿವಮೊಗ್ಗ ಶಾಖೆಯ ಕಾರ್ಯದರ್ಶಿಗಳು ಆದ ಪೂಜ್ಯ ಶ್ರೀ ಶ್ರೀ ಪ್ರಸನ್ನನಾಥ ಸ್ವಾಮೀಜಿ ತಿಳಿಸಿದ್ದಾರೆ. ಪರಮ ಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ಡಾ. ಬಾಲಗಂಗಾಧರನಾಥ ಮಹಾ ಸ್ವಾಮೀಜಿಗಳವರ ಆಶಯದಂತೆ 17 ವರ್ಷಗಳಿಂದ ರಾಜ್ಯ ಮಟ್ಟದ ಅರ್ಚಕ ವೃತ್ತಿ ಶಿಕ್ಷಣ ತರಬೇತಿಯನ್ನು ಆಯೋಜಿಸಿದ್ದು,ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಈ ಕಾರ್ಯಕ್ರಮದ ಸದುಪಯೋಗವನ್ನು ಪಡೆದುಕೊಳ್ಳಬೇಕಾಗಿ ಆಶಿಸುತ್ತೇವೆ.

ಅಂದು ಶ್ರೀ ಆದಿಚುಂಚನಗಿರಿ ಪೀಠಾಧ್ಯಕ್ಷರಾದ ಪರಮ ಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿ ಯವರ ಸಾನಿಧ್ಯದಲ್ಲಿ,ಮಠದ ಪ್ರಧಾನ ಕಾರ್ಯದರ್ಶಿ ಪೂಜ್ಯ ಶ್ರೀ ಶ್ರೀ ಪ್ರಸನ್ನನಾಥ ಸ್ವಾಮೀಜಿ ಹಾಗೂ ಶಾಖಾಮಠಗಳ ಶ್ರೀಗಳು ಪಾಲ್ಗೊಳ್ಳಲಿದ್ದಾರೆ.

ಯಾರು ಭಾಗವಹಿಸಬಹುದು:

14 ರಿಂದ 60 ವರ್ಷದೊಳಗಿನ ಯಾರಾದರೂ ಈ ಶಿಬಿರದಲ್ಲಿ ಭಾಗವಹಿಸಬಹುದು.

ಏನು ಒದಗಿಸಲಾಗುತ್ತದೆ:

ಉಚಿತ ಊಟ ಮತ್ತು ವಸತಿ,ಉಚಿತ ಸಮವಸ್ತ್ರ, ಪೂಜಾ ಪುಸ್ತಕಗಳು ಮತ್ತು ನೋಟ್‌ಬುಕ್‌ಗಳನ್ನು ವಿತರಿಸಲಾಗುವುದು. ಏನು ತರಬೇಕು:

ತಟ್ಟೆ, ಲೋಟ, ಚಾಪೆ, ದಿಂಬು ಮತ್ತು ಹೊದಿಕೆ, ಉಡುಪು, ದಿನ ನಿತ್ಯ ಬಳಕೆ ವಸ್ತುಗಳು ಮತ್ತು ಲಘು ಹೊದಿಕೆಯನ್ನು ತರಬೇಕು.

### ಮುಖ್ಯ ಅಂಶಗಳು:

> ಮೊದಲ ದಿನ ನೋಂದಣಿ ಕಡ್ಡಾಯ, > ಆಧಾರ್ ಕಾರ್ಡ್ ಜೆರಾಕ್ಸ್ ಮತ್ತು ಎರಡು ಪಾಸ್‌ಪೋರ್ಟ್ ಸೈಜ್ ಫೋಟೋಗಳನ್ನು ತರಬೇಕು.> ಪೂರ್ಣ ಕಾಲದಲ್ಲಿ ಶಿಬಿರದಲ್ಲಿ ಭಾಗವಹಿಸಬೇಕು. > ಪೂರ್ಣ ಕಾಲದಲ್ಲಿ ಭಾಗವಹಿಸಿದವರಿಗೆ ಪ್ರಮಾಣಪತ್ರ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ: 9481492311,9886958585,9448124141,9535601859 ಗೆ ಕರೆ ಮಾಡಿ ಎಂದು ಶ್ರೀ ಮಠದ ವ್ಯವಸ್ಥಾಪಕರು ಪತ್ರಿಕಾ ಪ್ರಕಟಣೆಯಲ್ಲಿ ಕೋರಿದ್ದಾರೆ

### ಶಿಬಿರದಲ್ಲಿ ಏನು ಕಲಿಸಲಾಗುತ್ತದೆ:

ಪೂಜಾ ವಿಧಾನಗಳು,ಸಂಕಲ್ಪ ಹೇಗೆ ಮಾಡುವುದು,ವೇದ ಮಂತ್ರಗಳನ್ನು ಹೇಗೆ ಪಠಿಸುವುದು,ಗಾಯತ್ರಿ ಮಂತ್ರ, ಧ್ಯಾನ ಶ್ಲೋಕಗಳು, ಪಂಚಾಂಗ (ಹಿಂದೂ ಕ್ಯಾಲೆಂಡರ್) ಅಧ್ಯಯನ, ನುರಿತ ಅಧ್ಯಾಪಕರಿಂದ ಭೋಧನೆ ಮತ್ತು ಉತ್ತಮ ವಾಗ್ಮಿಗಳಿಂದ ಉಪನ್ಯಾಸವಿರುವುದು ವಿಶೇಷ.

## ಗಿಳಿಯನ್ನು ರಕ್ಷಿಸಲು ಹೋಗಿ ಪ್ರಾಣ ಕಳೆದುಕೊಂಡ ಯುವಕ; ಏನಿದು ಹೃದಯ ವಿದ್ರಾವಕ ಘಟನೆ



**ಬೆಂಗಳೂರು:** ಹೈಟೆನ್ಷನ್ ವೈರ್ ಕಂಬದ ಮೇಲೆ ಕುಳಿತಿದ್ದ ಗಿಳಿಯನ್ನು ರಕ್ಷಿಸಲು ಹೋಗಿ ಯುವಕನೋರ್ವ ಮೃತಪಟ್ಟ ದಾರುಣ ಘಟನೆ ನಡೆದಿದೆ. ಬೆಂಗಳೂರಿನ ಗಿರಿನಗರದ ಖಾಸಗಿ ಅಪಾರ್ಟ್‌ಮೆಂಟ್‌ನಲ್ಲಿ ಈ ದುರಂತ ಸಂಭವಿಸಿದ್ದು, ಮೃತನನ್ನು ಅರುಣ್ ಕುಮಾರ್ (32) ಎಂದು ಗುರುತಿಸಲಾಗಿದೆ. ಗಿರಿನಗರ ಪೊಲೀಸ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆಯುತ್ತಿದೆ. ಅರುಣ್ ಅವರಿಗೆ ಸೇರಿದ, ವಿದೇಶದಿಂದ ತರಿಸಿದ, ಬರೋಬ್ಬರಿ 2 ಲಕ್ಷ ರೂ. ಬೆಲೆಯ ಗಿಳಿ ಹೈಟೆನ್ಷನ್ ವೈರ್ ಕಂಬದ ಮೇಲೆ ಕುಳಿತಿತ್ತು ಎಂದು ಸ್ಥಳೀಯರು ತಿಳಿಸಿದ್ದಾರೆ.

ಈ ಗಿಳಿಯನ್ನು ಅಲ್ಲಿಂದ ರಕ್ಷಿಸಲು ಹೋಗಿ ಯುವಕನೇ ವಿದ್ಯುತ್ ಶಾಕ್‌ಗೆ ಗುರಿಯಾಗಿ ಅಸು ನೀಗಿದ್ದು, ಸ್ಥಳೀಯರಿಗೆ ಆಘಾತ ತಂದಿದೆ. 66 ಸಾವಿರ ಕೆವಿ ವಿದ್ಯುತ್ ವೈರ್‌ನಿಂದ ಹೊಡೆದ ಶಾಕ್‌ಗೆ ಅರುಣ್ ಕಾಂಪೌಂಡ್ ಮೇಲಿಂದ ಕೆಳಗೆ ಬಿದ್ದಿದ್ದಾರೆ. ತಕ್ಷಣ ಅವರನ್ನು ಆಸ್ಪತ್ರೆಗೆ ಕರೆದೊಯ್ಯಲಾಯಿತಾದರೂ ಅಷ್ಟರಲ್ಲಿ ಅವರು ಮೃತಪಟ್ಟಿದ್ದರು.

ಅರುಣ್ ಅವರ ಗಿಳಿ ಗಿರಿನಗರದ ಖಾಸಗಿ ಅಪಾರ್ಟ್‌ಮೆಂಟ್ ಒಳಭಾಗದಲ್ಲಿರುವ ಹೈಟೆನ್ಷನ್ ವೈರ್ ಕಂಬದ ಮೇಲೆ ಕುಳಿತಿತ್ತು. ಇದನ್ನು ನೋಡಿದ ಅರುಣ್? ಕುಮಾರ್?, ಕಾಂಪೌಂಡ್ ಮೇಲೆ ನಿಂತು ಸ್ಟೀಲ್ ಪೈಪ್ ಮೂಲಕ ಅದನ್ನು ಅಲ್ಲಿಂದ ಓಡಿಸಲು ಪ್ರಯತ್ನಿಸಿದ್ದಾರೆ. ಈ ವೇಳೆ ವಿದ್ಯುತ್ ವೈರ್‌ಗೆ ಪೈಪ್ ತಗುಲಿ ಶಾಕ್ ಹೊಡೆದಿದೆ ಎನ್ನಲಾಗಿದೆ.

ಸ್ಥಳಕ್ಕೆ ಬೆಸ್ಕಾಂ ಮತ್ತು ಪೊಲೀಸರು ಭೇಟಿ ನೀಡಿ ಪರಿಶೀಲಿಸಿದ್ದಾರೆ. ಅಪಾರ್ಟ್‌ಮೆಂಟ್ ಒಳಗೆ 66 ಸಾವಿರ ಕೆವಿ ಸಾಮರ್ಥ್ಯದ ವೈರ್?ಗಳು ಇರುವುದಕ್ಕೆ ನಿವಾಸಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸಮಗ್ರ ತನಿಖೆ ನಡೆಯುವಂತೆ ಆಗ್ರಹಿಸಿದ್ದಾರೆ.

ಇಂಡಿಗೋ ಬಿಕ್ಕಟ್ಟಿನ ನಡುವೆ ಫ್ಲೈಟ್ ಒಳಗೆ ಪಾರಿವಾಳ ನುಗ್ಗಿ ಅವಾಂತರ: ವಿಡಿಯೊ ವೈರಲ್

ಪಾರಿವಾಳ ಬೆಟ್ಟಿಂಗ್ ವಿಚಾರಕ್ಕೆ ಗಲಾಟೆ; 13 ವರ್ಷದ ಬಾಲಕ ಆತ್ಮಹತ್ಯೆ

ತುಮಕೂರು: ಪಾರಿವಾಳ ಬೆಟ್ಟಿಂಗ್ ವಿಚಾರಕ್ಕೆ 7ನೇ ತರಗತಿ ವಿದ್ಯಾರ್ಥಿ ಡೆತ್ ನೋಟ್ ಬರೆದಿಟ್ಟು ಆತ್ಮಹತ್ಯೆಗೆ ಶರಣಾದ ಘಟನೆ ಕೆಲವು ತಿಂಗಳ ಹಿಂದೆ ತುಮಕೂರಿನಲ್ಲಿ ನಡೆದಿತ್ತು. ವಿಜಯನಗರ 2ನೇ ಮುಖ್ಯ ರಸ್ತೆಯಲ್ಲಿ ನಡೆದಿತ್ತು. ಬಿಜೆಪಿ ಸಾಮಾಜಿಕ ಜಾಲತಾಣದ ಸಂಚಾಲಕಿ ಶಕುಂತಲಾ ನಟರಾಜ್ ಅವರ ಪುತ್ರ ತ್ರಿಶಾಲ್ (13) ಆತ್ಮಹತ್ಯೆಗೆ ಶರಣಾದ ಬಾಲಕ. ಈತ ವಿಶಾಲ್ ಸರ್ವೋದಯ ಶಾಲೆಯಲ್ಲಿ 7ನೇ ತರಗತಿ ವ್ಯಾಸಂಗ ಮಾಡುತ್ತಿದ್ದ. ಮನೆಯಲ್ಲಿ ಯಾರೂ ಇಲ್ಲದ ವೇಳೆ ಶಾಲಾ ಸಮವಸ್ತ್ರದಲ್ಲೇ ನೇಣುಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದ.

ಪಾರಿವಾಳದ ಬೆಟ್ಟಿಂಗ್ ವಿಚಾರಕ್ಕೆ ಸ್ನೇಹಿತರ ನಡುವೆ ಗಲಾಟೆಯಾಗಿದೆ. ಅದೇ ವಿಚಾರಕ್ಕೆ ಮನನೊಂದು ಆತ್ಮಹತ್ಯೆ ಮಾಡಿಕೊಂಡಿರಬಹುದು ಎಂದು ಶಂಕಿಸಲಾಗಿತ್ತು. ಘಟನೆ ಸಂಬಂಧ ಜಯನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

## ಕೋಟ್ಯಾಧಿಪತಿಯಾಗುವ ದುರಾಸೆಯಿಂದ ಮಂತ್ರವಾದಿಯ ಮೊರೆ ಹೋಗಿ ಪ್ರಾಣ ಕಳೆದುಕೊಂಡ ಮೂವರು!



**ಛತ್ತೀಸ್‌ಗಢ:** ಬಹಳ ಬೇಗನೆ ಶ್ರೀಮಂತರಾಗುವ ಬಯಕೆಯಿಂದ ಮೂವರು ಪ್ರಾಣ ಕಳೆದುಕೊಂಡ ಘಟನೆ ಛತ್ತೀಸ್‌ಗಢದಲ್ಲಿ ನಡೆದಿದೆ. ಬಿಲಾಸ್‌ಪುರದ ಸ್ವಯಂ ಘೋಷಿತ ಮಾಂತ್ರಿಕನೊಬ್ಬ ನಡೆಸಿದ ವಾಮಾಚಾರದ ವಿಧಿವಿಧಾನಗಳ ವೇಳೆಯಲ್ಲಿ ಮೂವರು ಸಾವನ್ನಪ್ಪಿದ್ದಾರೆ. ಇವರು ಸ್ವಇಚ್ಛೆಯಿಂದ ಈ ಆಚರಣೆಯಲ್ಲಿ ಭಾಗವಹಿಸಲು ಒಪ್ಪಿಕೊಂಡಿದ್ದರು ಎನ್ನಲಾಗಿದೆ. ವಾಮಾಚಾರದ ಮೂಲಕ ಇವರು ತಮ್ಮಲ್ಲಿದ್ದ 5 ಲಕ್ಷ ರೂ.ಗಳನ್ನು 2.5 ಕೋಟಿ ರೂ.ಗಳನ್ನಾಗಿ ಮಾಡುವ ದುರಾಸೆ ಹೊಂದಿ ನಿಗೂಢವಾಗಿ ಸಾವನ್ನಪ್ಪಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿ ನಾಲ್ವರನ್ನು ಪೊಲೀಸರು ಬಂಧಿಸಿದ್ದಾರೆ.

ಸ್ಕ್ರ್ಯಾಪ್ ವ್ಯಾಪಾರಿ ಮೊಹಮ್ಮದ್ ಅಶ್ರಫ್ ಮೇಮನ್, ತುಳಸಿ ನಗರದ ಸುರೇಶ್ ಸಾಹು ಮತ್ತು ದುರ್ಗ್‌ನ ನಿತೀಶ್ ಕುಮಾರ್ ಎಂಬವರು ಬಹಳ ಬೇಗನೆ ಕೋಟ್ಯಾಧಿಪತಿಯಾಗಬೇಕು ಎನ್ನುವ ದುರಾಸೆಯಿಂದ ಮಾಂತ್ರಿಕ ರಾಜೇಂದ್ರ ಕುಮಾರ್ ಎಂಬಾತನನ್ನು ಸಂಪರ್ಕಿಸಿದ್ದಾರೆ. ಇದಕ್ಕಾಗಿ ಮಾಂತ್ರಿಕ ಕೆಲವು ವಿಧಿವಿಧಾನಗಳು ಮಾಡಬೇಕು ಎಂದು ಹೇಳಿದ್ದು, ಈ ಧಾರ್ಮಿಕ ಆಚರಣೆಯಲ್ಲಿ ಭಾಗವಹಿಸಲು ಮೂವರು ಸ್ವಯಂ ಪ್ರೇರಿತರಾಗಿ ಒಪ್ಪಿಕೊಂಡಿದ್ದರು.

ಇದಕ್ಕಾಗಿ ಬುಧವಾರ ತಡರಾತ್ರಿ ಉರ್ಗಾ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿರುವ ಬಾರ್ಬಸ್‌ಪುರದ ಸ್ಕ್ರ್ಯಾಪ್‌ಯಾರ್ಡ್‌ಗೆ ಮಾಂತ್ರಿಕ ಮತ್ತು ಆತನ ಮೂವರು ಸಹಚರರನ್ನು ಕರೆಸಿಕೊಂಡ ಮೊಹಮ್ಮದ್ ಅಶ್ರಫ್ ಮೇಮನ್, ಸುರೇಶ್ ಸಾಹು ಮತ್ತು ನಿತೀಶ್ ಕುಮಾರ್ ಬಳಿಕ ತಮ್ಮ ಪ್ರಾಣವನ್ನು ಕಳೆದುಕೊಂಡಿದ್ದಾರೆ. ಸ್ಕ್ರ್ಯಾಪ್‌ಯಾರ್ಡ್‌ನ ಕೋಣೆಯಲ್ಲಿ ಮೂವರ ಶವ ಪತ್ತೆಯಾಗಿದೆ. ಈ ಕುರಿತು ಪ್ರಕರಣ ದಾಖಲಿಸಿರುವ ಸಿವಿಲ್ ಲೈನ್ ಪೊಲೀಸರು ತನಿಖೆ ಪ್ರಾರಂಭಿಸಿದ್ದು, ಮಾಂತ್ರಿಕ ಸೇರಿದಂತೆ ಐವರು ಶಂಕಿತರನ್ನು ಬಂಧಿಸಿದ್ದಾರೆ.

# ಮೇಕೆದಾಟು ಯೋಜನೆ ತ್ವರಿತ ಅನುಷ್ಠಾನಕ್ಕೆ ಮುಂದಾದ ಸರ್ಕಾರ; ತಂಡ ರಚಿಸಿ ಆದೇಶ



**ಬೆಂಗಳೂರು:** ಕರ್ನಾಟಕದ ಪರ ಸುಪ್ರೀಂ ಕೋರ್ಟ್ ಆದೇಶದ ಹಿನ್ನೆಲೆಯಲ್ಲಿ ಮೇಕೆದಾಟು ಸಮತೋಲಿತ ಜಲಾನಯನ ಯೋಜನೆ ತ್ವರಿತ ಅನುಷ್ಠಾನಕ್ಕೆ ಕೆಇಆರ್‌ಎಸ್ (ಕರ್ನಾಟಕ ಎಂಜಿನಿಯರಿಂಗ್ ಸಂಶೋಧನಾ ಕೇಂದ್ರ) ನಿರ್ದೇಶಕರ ನೇತೃತ್ವದಲ್ಲಿ ತಂಡವನ್ನು ರಚಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಈ ತಂಡವು ಉಪ ಮುಖ್ಯ ಎಂಜಿನಿಯರ್ ಹಾಗೂ ಸಿಬ್ಬಂದಿಯನ್ನು ಒಳಗೊಂಡಿದ್ದು, ಬೆಂಗಳೂರು ದಕ್ಷಿಣ ಜಿಲ್ಲೆಯ ರಾಮನಗರವನ್ನು ಕೇಂದ್ರ ಸ್ಥಾನವಾಗಿಟ್ಟುಕೊಂಡು ಕಾರ್ಯ ನಿರ್ವಹಿಸಲಿದೆ.

ರಾಮನಗರದಲ್ಲೇ ಮೇಕೆದಾಟು ಯೋಜನೆ ಕಚೇರಿ ಸ್ಥಾಪಿಸಲಾಗುವುದು ಎಂದು ಆದೇಶದಲ್ಲಿ ತಿಳಿಸಲಾಗಿದೆ.

2025ರ ನವೆಂಬರ್ 18ರಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಮೇಕೆದಾಟು ಯೋಜನೆ ತ್ವರಿತ ಜಾರಿಗೆ ಮುಖ್ಯ ಎಂಜಿನಿಯರ್ ಕಚೇರಿ ಹಾಗೂ ಒಂದು ಅಧೀಕ್ಷಕ ಎಂಜಿನಿಯರ್ ಕಚೇರಿಯನ್ನು ಆರಂಭಿಸಲು ನಿರ್ಧರಿಸಲಾಗಿತ್ತು. ಆದರೆ ಹೊಸದಾಗಿ ಕಚೇರಿ ಸ್ಥಾಪನೆ ಹಾಗೂ ಹುದ್ದೆಗಳ ನೇಮಕಕ್ಕೆ ಆರ್ಥಿಕ ಇಲಾಖೆಯ ಅನುಮತಿ ಅಗತ್ಯವಾಗಿದ್ದು, ಇದಕ್ಕೆ ಬಹಳಷ್ಟು ಸಮಯಾವಕಾಶ ಬೇಕಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಸರ್ಕಾರವು ಈ ಯೋಜನೆ ಜಾರಿಯ ಜವಾಬ್ದಾರಿಯನ್ನು ಕೆಇಆರ್‌ಎಸ್ ನಿರ್ದೇಶಕರಿಗೆ ವಹಿಸಿದೆ.


ಕೆಇಆರ್‌ಎಸ್ ಸಂಸ್ಥೆ ತನ್ನಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ಹಾಗೂ ನೌಕರರನ್ನು ಒಳಗೊಂಡು ತಂಡವನ್ನು ರಚಿಸಿ ಮೇಕೆದಾಟು ಯೋಜನೆಯ ಜಾರಿಯ ಜವಾಬ್ದಾರಿಯನ್ನು ನೀಡಲಾಗಿದೆ. ಈ ತಂಡಕ್ಕೆ ಓರ್ವ ಕಾರ್ಯಪಾಲಕ ಇಂಜಿನಿಯರ್, ಮೂವರು ತಾಂತ್ರಿಕ ಸಹಾಯಕರು, ಆರು ಸಹಾಯಕ ಇಂಜಿನಿಯರ್, ಓರ್ವ ಸಹಾಯಕ ಆಡಳಿತಾಧಿಕಾರಿ, ಓರ್ವ ಲೆಕ್ಕಾಧೀಕ್ಷಕರು, ಅಧೀಕ್ಷಕರು, ಪ್ರಥಮ ದರ್ಜೆ ಲೆಕ್ಕ ಸಹಾಯಕರು, ಇಬ್ಬರು ಪ್ರಥಮ ದರ್ಜೆ ಸಹಾಯಕರು, ಓರ್ವ ದ್ವಿತಿಯ ದರ್ಜೆ ಲೆಕ್ಕ ಸಹಾಯಕರು, ನಾಲ್ವರು ದ್ವಿತೀಯ ದರ್ಜೆ ಸಹಾಯಕರು, ಓರ್ವ ಶೀಘ್ರಲಿಪಿಗಾರರು, ನಾಲ್ವರು ಬೆರಳಚ್ಚುಗಾರರು, ಓರ್ವ ವಾಹನ ಚಾಲಕರ, ಇಬ್ಬರು ಗ್ರೂಪ್ ಡಿ ಸಿಬ್ಬಂದಿ, 1 ಕಾವಲುಗಾರನನ್ನು ನೇಮಿಸಲಾಗಿದೆ.

ಮೇಕೆದಾಟು ಯೋಜನೆ ಬಗ್ಗೆ ಕೇಂದ್ರ ಸರ್ಕಾರಕ್ಕೆ ಪರಿಷ್ಕೃತ ಡಿಪಿಆರ್ ಸಲ್ಲಿಕೆ: ಡಿ.ಕೆ. ಶಿವಕುಮಾರ್

ಮೇಕೆದಾಟು ಯೋಜನೆ ಕಚೇರಿಯ ಕಟ್ಟಡದ ವ್ಯವಸ್ಥೆಗೆ ಕಾವೇರಿ ನೀರಾವರಿ ನಿಗಮ ನಿಯಮಿತ (ಕೆಎನ್‌ಎನ್‌ಎಲ್) ಕ್ರಮ ಕೈಗೊಳ್ಳಲಿದೆ. ಈ ತಂಡವು ಕೆಎನ್‌ಎನ್‌ಎಲ್‌ನ ವ್ಯವಸ್ಥಾಪನ ನಿರ್ದೇಶಕರ ಅಧೀನದಲ್ಲಿ ಕಾರ್ಯನಿರ್ವಹಿಸಲಿದ್ದು.

ಕಚೇರಿಯ ನಿರ್ವಹಣೆ, ಮೂಲಭೂತ ಸೌಕರ್ಯ ಹಾಗೂ ಇತರೆ ವೆಚ್ಚವನ್ನು ಕೆಎನ್‌ಎನ್‌ಎಲ್ ಅನುದಾನದಿಂದ ಭರಿಸಲಾಗುವುದು. ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಎಲ್ಲಾ ಕಡತ, ಪತ್ರವ್ಯವಹಾರ, ಹಾಗೂ ಇನ್ನಿತರೆ ದಾಖಲೆಗಳನ್ನು ಕೆಇಆರ್‌ಎಸ್ ನಿರ್ದೇಶಕರಿಗೆ ಹಸ್ತಾಂತರಿಸುವಂತೆ ಕೆಎನ್‌ಎನ್‌ಎಲ್‌ನ ವ್ಯವಸ್ಥಾಪಕ ನಿರ್ದೇಶಕರಿಗೆ ಸೂಚಿಸಲಾಗಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.

# ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕ್ರಿಕೆಟ್ ಪಂದ್ಯಕ್ಕೆ ಗ್ರೀನ್ ಸಿಗ್ನಲ್; ಸಚಿವ ಸಂಪುಟದಲ್ಲಿ ಮಹತ್ವದ ನಿರ್ಧಾರ



**ಬೆಳಗಾವಿ:** ರಾಜ್ಯ ಕ್ರಿಕೆಟ್ ಅಭಿಮಾನಿಗಳಿಗೆ ಗುಡ್ ನ್ಯೂಸ್ ಸಿಕ್ಕಿದೆ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕ್ರಿಕೆಟ್ ಪಂದ್ಯಗಳನ್ನು ನಡೆಸಲು ರಾಜ್ಯ ಸಚಿವ ಸಂಪುಟ ಗುರುವಾರ ಒಪ್ಪಿಗೆ ನೀಡಿದೆ. ಕಾಲ್ತುಳಿತ ದುರಂತ ಬಳಿಕ ಸ್ಟೇಡಿಯಂನಲ್ಲಿ ಪಂದ್ಯಗಳು ನಡೆದಿರಲಿಲ್ಲ. ಆದರೆ, ಇದೀಗ ನಿವೃತ್ತ ನ್ಯಾ. ಮೈಕಲ್ ಡಿ ಕುನ್ಹಾ ವರದಿ ಆಧರಿಸಿ ಕ್ರಿಕೆಟ್ ಪಂದ್ಯಗಳನ್ನು ಆಡಿಸಲು ಸರ್ಕಾರ ಅನುಮತಿ ನೀಡಿದ್ದು, ಭದ್ರತೆ ಜವಾಬ್ದಾರಿಯನ್ನು ಗೃಹ ಇಲಾಖೆಗೆ ನೀಡಲಾಗಿದೆ.

ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕ್ರಿಕೆಟ್ ಪಂದ್ಯಗಳಿಗೆ ಅನುಮತಿ ನೀಡುವ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ನಡೆಸಿ ತೀರ್ಮಾನ ಮಾಡಲಾಗುವುದು ಎಂದು ಉಪ ಮುಖ್ಯಮಂತ್ರಿ ಡಿಸಿಎಂ ಡಿಕೆ ಶಿವಕುಮಾರ್ ಭರವಸೆ ನೀಡಿದ್ದರು.

ಬೆಳಗಾವಿಯ ಸರ್ಕಿಟ್ ಹೌಸ್‌ನಲ್ಲಿ ಕೆಎಸ್‌ಸಿಎ ನೂತನ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ಅವರು ತಮ್ಮನ್ನು ಭೇಟಿ ಮಾಡಿದ ನಂತರ ಮಾತನಾಡಿದ್ದ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು, ನಮಗೆ ಕ್ರಿಕೆಟ್ ಟೂರ್ನಿಗಳನ್ನು ನಿಲ್ಲಿಸಬೇಕು ಎನ್ನುವ ಯಾವುದೇ ಉದ್ದೇಶವಿಲ್ಲ. ಆದರೆ ಜನಜಂಗುಳಿಯ ನಿಯಂತ್ರಣ ಕ್ರಮಗಳ ಬಗ್ಗೆ ಆಲೋಚಿಸಬೇಕು. ಜತೆಗೆ ಮೈಕಲ್ ಡಿ ಕುನ್ಹಾ ಸಮಿತಿ ನೀಡಿರುವ ಸಲಹೆಗಳನ್ನು ಹಂತ, ಹಂತವಾಗಿ ಪಾಲನೆ ಮಾಡುವುದು ನಮ್ಮ ಆಲೋಚನೆ. ಇದನ್ನು ವೆಂಕಟೇಶ್ ಪ್ರಸಾದ್ ಅವರು ಕೂಡ ಒಪ್ಪಿಕೊಂಡಿದ್ದಾರೆ ಎಂದು ತಿಳಿಸಿದ್ದರು.

ನಮ್ಮ ರಾಜ್ಯದ ಗೌರವ, ಸ್ವಾಭಿಮಾನಕ್ಕೆ ಯಾವುದೇ ಧಕ್ಕೆ ಆಗದ ರೀತಿಯಲ್ಲಿ ಕ್ರಿಕೆಟ್ ಅಭಿಮಾನಿಗಳ ಭಾವನೆಗಳಿಗೆ ಸ್ಪಂದಿಸಲು ನಮ್ಮ ಸರ್ಕಾರ ಬದ್ಧವಾಗಿದೆ. ಐಪಿಎಲ್ ಸೇರಿದಂತೆ ಯಾವುದೇ ಪಂದ್ಯಗಳು ಬೆಂಗಳೂರಿನಿಂದ ಹೊರಗೆ ಹೋಗಲು ಬಿಡುವುದಿಲ್ಲ. ಒಗ್ಗೂಡಿ ಕೆಲಸ ಮಾಡೋಣ ಎಂದು ಕೆಎಸ್‌ಸಿಎ ಪದಾಧಿಕಾರಿಗಳಿಗೆ ತಿಳಿಸಿರುವುದಾಗಿ ಡಿಕೆಶಿ ಹೇಳಿದ್ದರು.

ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ 2025ರ ಇಂಡಿಯನ್ ಪ್ರೀಮಿಯರ್ ಲೀಗ್ ಟೂರ್ನಿಯಲ್ಲಿ (ಐಪಿಎಲ್ 2025) ಚಾಂಪಿಯನ್ ಆದ ಬಳಿಕ, ಈ ಕ್ರೀಡಾಂಗಣದಲ್ಲಿ ಜೂನ್ 4ರಂದು ಅಭಿನಂದನೆ ಸಮಾರಂಭವನ್ನು ಆಯೋಜಿಸಲಾಗಿತ್ತು.

ಈ ವೇಳೆ ನಿರೀಕ್ಷೆಗೂ ಮೀರಿದ ಜನ ಸಾಗರ ಹರಿದು ಬಂದಿದ್ದರಿಂದ ನೂಕು ನುಗ್ಗಲು ಉಂಟಾಗಿ ಕಾಲ್ತುಳಿತ ಉಂಟಾಗಿತ್ತು. ಇದರಲ್ಲಿ 12 ಮಂದಿ ಮೃತಪಟ್ಟಿದ್ದರು. ಅಂದಿನಿಂದ ಈ ಅಂಗಣದಲ್ಲಿ ಪಂದ್ಯಗಳು ನಡೆಯುತ್ತಿಲ್ಲ. ಆದರೆ, ಇದೀಗ ಸ್ಟೇಡಿಯಂನಲ್ಲಿ ಪಂದ್ಯ ನಡೆಸಲು ಇದೀಗ ರಾಜ್ಯ ಸರ್ಕಾರ ಅನುಮತಿ ನೀಡಿದೆ.

# ಭಾರತದ ಮೇಲೆ ಶೇ.50 ರಷ್ಟು ಸುಂಕ ಹೇರಿದ ಮೆಕ್ಸಿಕೋ; ಆಟೋ ಮೊಬೈಲ್ ಕ್ಷೇತ್ರಕ್ಕೆ ಭಾರೀ ಹೊಡೆತ ಸಾಧ್ಯತೆ

**ನವದೆಹಲಿ:** ಭಾರತದ ಮೇಲೆ ಅಮೆರಿಕ ಹೆಚ್ಚಿನ ಸರಕುಗಳಿಗೆ ಶೇ.50 ರಷ್ಟು ಸುಂಕ ವಿಧಿಸಿದ ನಾಲ್ಕು ತಿಂಗಳ ನಂತರ, ಮೆಕ್ಸಿಕೊ ಭಾರತ ಮತ್ತು ಚೀನಾ ಸೇರಿದಂತೆ ಏಷ್ಯಾದ ಕೆಲ ದೇಶಗಳ ಆಯ್ದ ಉತ್ಪನ್ನಗಳ ಆಮದಿನ ಮೇಲೆ ಶೇ.50 ರಷ್ಟು ಸುಂಕ ವಿಧಿಸಲು ಅನುಮೋದನೆ ನೀಡಿದೆ.

ಸುಂಕಗಳು ಜನವರಿ 1, 2026 ರಿಂದ ಜಾರಿಗೆ ಬರಲಿವೆ. ಮೆಕ್ಸಿಕೋದ ಬಿಡಿಭಾಗಗಳು, ಲಘು ಕಾರುಗಳು, ಬಟ್ಟೆ, ಪ್ಲಾಸ್ಟಿಕ್‌ಗಳು, ಉಕ್ಕು, ಗೃಹೋಪಯೋಗಿ ವಸ್ತುಗಳು, ಆಟಿಕೆಗಳು, ಜವಳಿ, ಪೀಠೋಪಕರಣಗಳು, ಪಾದರಕ್ಷೆಗಳು, ಚರ್ಮದ ವಸ್ತುಗಳು, ಕಾಗದ, ಕಾರ್ಡ್‌ಬೋರ್ಡ್, ಮೋಟಾರ್‌ಸೈಕಲ್‌ಗಳು, ಅಲ್ಯೂಮಿನಿಯಂ, ಟ್ರೇಲರ್‌ಗಳು, ಗಾಜು, ಸೋಪುಗಳು, ಸುಗಂಧ ದ್ರವ್ಯಗಳು ಮತ್ತು ಸೌಂದರ್ಯವರ್ಧಕಗಳಂತಹ ಸರಕುಗಳ ಮೇಲೆ ಮೆಕ್ಸಿಕೋ ಸುಂಕ ವಿಧಿಸಿದೆ ಎಂದು ತಿಳಿದು ಬಂದಿದೆ. ಭಾರತ, ದಕ್ಷಿಣ




ಕೊರಿಯಾ, ಚೀನಾ, ಥೈಲ್ಯಾಂಡ್ ಮತ್ತು ಇಂಡೋನೇಷ್ಯಾದಂತಹ ಮೆಕ್ಸಿಕೋ ಜೊತೆ ವ್ಯಾಪಾರ ಒಪ್ಪಂದ ಮಾಡಿಕೊಳ್ಳದ ದೇಶಗಳ ಮೇಲೆ ಈ ಸುಂಕ ನೀತಿ ಪ್ರಭಾವ ಬೀರಲಿದೆ. ಮೆಕ್ಸಿಕನ್ ಸರ್ಕಾರವು ಏಷ್ಯಾದ ದೇಶಗಳಿಂದ, ವಿಶೇಷವಾಗಿ ಚೀನಾದಿಂದ ಆಮದುಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು ಪ್ರಯತ್ನಿಸುತ್ತಿದೆ. ಪ್ರಸ್ತಾವಿತ ಸುಂಕಗಳು 3.8 ಬಿಲಿಯನ್ ಅಮೆರಿಕನ್ ಡಾಲರ್ (ಸುಮಾರು 33,910 ಕೋಟಿ ರೂ.) ಹೆಚ್ಚುವರಿ ಆದಾಯವನ್ನು ಗಳಿಸುವ ನಿರೀಕ್ಷೆಯಿದೆ.

**ಭಾರತದ ಮೇಲೆ ಹೇಗೆ ಪರಿಣಾಮ ಬೀರುತ್ತದೆ?**

ವರದಿಯ ಪ್ರಕಾರ, ಮೆಕ್ಸಿಕನ್ ಸುಂಕಗಳು ಭಾರತದ ಪ್ರಮುಖ ಕಾರು ರಫ್ತುದಾರರಾದ ವೋಕ್ಸ್‌ವ್ಯಾಗನ್, ಹುಂಡೈ, ನಿಸ್ಸಾನ್ ಮತ್ತು ಮಾರುತಿ ಸುಜುಕಿಯಿಂದ 1 ಬಿಲಿಯನ್ ಡಾಲರ್ ಮೌಲ್ಯದ ಸಾಗಣೆಯ ಮೇಲೆ ಪರಿಣಾಮ ಬೀರುತ್ತವೆ. ಕಾರುಗಳ ಮೇಲಿನ ಆಮದು ಸುಂಕವು 20% ರಿಂದ 50% ಕ್ಕೆ ಏರಿಕೆಯಾಗಲಿದ್ದು, ಭಾರತದ ಅತಿದೊಡ್ಡ ವಾಹನ ರಫ್ತುದಾರರಿಗೆ ಗಮನಾರ್ಹ ಹೊಡೆತ ಬೀಳಲಿದೆ. ಸುಂಕ ಹೆಚ್ಚಳವು ಮೆಕ್ಸಿಕೊಗೆ ಭಾರತೀಯ ಆಟೋಮೊಬೈಲ್ ರಫ್ತಿನ ಮೇಲೆ ನೇರ ಪರಿಣಾಮ ಬೀರುವ ನಿರೀಕ್ಷೆಯಿದೆ.

# ಅಧಿವೇಶನದಲ್ಲೇ ತಾರಕಕ್ಕೇರಿದ ಅಧಿಕಾರ ಹಂಚಿಕೆ ವಿಚಾರ



**ಬೆಳಗಾವಿ:** ರಾಜ್ಯ ಕಾಂಗ್ರೆಸ್‌ನಲ್ಲಿ ಅಧಿಕಾರ ಹಂಚಿಕೆಯ ಕದನ ಮತ್ತೆ ತಾರಕಕ್ಕೇರಿದ್ದು, ವಿಧಾನಮಂಡಲದ ಅಧಿವೇಶನ ನಡೆಯುತ್ತಿರುವ ಬೆಳಗಾವಿಯಲ್ಲಿ ಕುರ್ಚಿ ಕಿತ್ತಾಟ, ಬಣ ರಾಜಕೀಯ, ಔತಣಕೂಟಗಳ ಮೇಲಾಟ ನಡೆದಿದೆ.

ಮುಖ್ಯಮಂತ್ರಿ, ಉಪಮುಖ್ಯಮಂತ್ರಿಗಳ ಬ್ರೇಕ್‌ಫಾಸ್ಟ್ ನಂತರ ಕುರ್ಚಿ ಕಿತ್ತಾಟಕ್ಕೆ ಬೆಂಗಳೂರಿನಲ್ಲೇ ವಿರಾಮ ಬಿದ್ದು ಅಧಿವೇಶನದಲ್ಲಿ ಒಗ್ಗಟ್ಟು ಕಾಯ್ದುಕೊಳ್ಳುವ ಮಂತ್ರವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಜಪಿಸಿದ್ದರು. ಆದರೆ, ಬೆಳಗಾವಿಯ ಅಧಿವೇಶನದ ಹೊತ್ತಿನಲ್ಲೇ ಕಾಂಗ್ರೆಸ್‌ನಲ್ಲಿ ಒಗ್ಗಟ್ಟು ಮಾಯವಾಗಿ ಬಣ ರಾಜಕೀಯ ಬಿರುಸಾಗಿ ನಾಯಕತ್ವ ಬದಲಾವಣೆ ಪರ–ವಿರೋಧ ಚಟುವಟಿಕೆಗಳು ಮತ್ತೆ ಗರಿಗೆದರಿ ತಾರಕಕ್ಕೇರಿವೆ.

ಎರಡು ದಿನಗಳ ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೆಲ ಶಾಸಕರೊಂದಿಗೆ ಮಾಜಿ ಶಾಸಕ ಫಿರೋಜ್ ಸೇಠ್ ಅವರ ನಿವಾಸದಲ್ಲಿ ತಮ್ಮ ಆಪ್ತರೊಂದಿಗೆ ಔತಣ ಕೂಟದಲ್ಲಿ ಭಾಗವಹಿಸಿದ್ದರು. ಇದಾದ ಬಳಿಕ ಎರಡೆರಡು ಬಾರಿ ಮುಖ್ಯಮಂತ್ರಿ ಪುತ್ರ ಯತೀಂದ್ರ ಸಿದ್ದರಾಮಯ್ಯ ಅವರು ನಾಯಕತ್ವ ಬದಲಾವಣೆ ಇಲ್ಲ ಎಂದು ಬಹಿರಂಗವಾಗಿಯೇ ಹೇಳಿಕೆ ನೀಡಿದ್ದು ಕಾಂಗ್ರೆಸ್‌ನಲ್ಲಿ ಕುರ್ಚಿ ಕಿತ್ತಾಟಕ್ಕೆ ಕಿಚ್ಚು ಹಚ್ಚಿದಂತಾಗಿದೆ. ಯತೀಂದ್ರ ಸಿದ್ದರಾಮಯ್ಯ ಅವರ ಹೇಳಿಕೆ ಬೆನ್ನಲ್ಲೆ ನಿನ್ನೆ ಸದನದಲ್ಲಿ ತಮ್ಮ ಆಪ್ತ ಶಾಸಕರೊಂದಿಗೆ ಸಮಾಲೋಚನೆ ನಡೆಸಿದ್ದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ನಿನ್ನೆ ರಾತ್ರಿ ಔತಣಕೂಟದ ನೆಪದಲ್ಲಿ ತಮ್ಮ ಶಕ್ತಿ ಪ್ರದರ್ಶನವನ್ನು ತೋರಿದ್ದಾರೆ.

ಬೆಳಗಾವಿಯ ಹೊರವಲಯದ ತೋಟದ ಮನೆಯಲ್ಲಿ ನಡೆದ ಈ ಔತಣಕೂಟದಲ್ಲಿ ಆಹಾರ ಸಚಿವ ಕೆ.ಹೆಚ್. ಮುನಿಯಪ್ಪ, ಮೀನುಗಾರಿಕೆ ಸಚಿವ ಮಾಂಕಾಳ ವೈದ್ಯ, ಕೃಷಿ ಸಚಿವ ಚಲುವರಾಯಸ್ವಾಮಿ ಸೇರಿದಂತೆ 30 ಕ್ಕೂ ಹೆಚ್ಚು ಶಾಸಕರು ವಿಧಾನಸಭಾ ಸದಸ್ಯರು, 15 ವಿಧಾನಪರಿಷತ್ ಸದಸ್ಯರು, ಡಿಕೆಶಿ ಸಹೋದರ ಹಾಗೂ ಮಾಜಿ ಸಂಸದ ಡಿ.ಕೆ. ಸುರೇಶ್ ಸಹ ಪಾಲ್ಗೊಂಡಿದ್ದು ಇದರ ಜತೆಗೆ ಬಿಜೆಪಿಯಿಂದ ಉಚ್ಚಾಟಿತರಾದ ವಿಶ್ವನಾಥ್, ಶಿವರಾಮ್ ಹೆಬ್ಬಾರ್ ಸಹ ಔತಣಕೂಟದಲ್ಲಿ ಭಾಗಿಯಾಗಿದ್ದರು ಎಂದು ಹೇಳಲಾಗಿದೆ ಅಧಿವೇಶನ ನಡೆದಿರುವ ಹೊತ್ತಿನಲ್ಲಿ ಕಾಂಗ್ರೆಸ್‌ನಲ್ಲಿ ಬಣ ರಾಜಕೀಯ ಮೇಳೈಸಿ ಔತಣಕೂಟದ ರಾಜಕೀಯ ಬಿರುಸಾಗಿದ್ದು, ಮುಂದಿನ ದಿನಗಳಲ್ಲಿ ಕಾಂಗ್ರೆಸ್‌ನಲ್ಲಿ ಹಲವು ಮಹತ್ತರ ಬದಲಾವಣೆಗಳಾಗುವ ಸಾಧ್ಯತೆಗಳನ್ನು ಈ ಔತಣಕೂಟಗಳು ಸಂಕೇತಿಸಿವೆ.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಿನ್ನೆ ನಡೆದ ಔತಣಕೂಟದಲ್ಲಿ ಕಾಂಗ್ರೆಸ್ ಹೈಕಮಾಂಡ್ ಸೂಚನೆಯಂತೆ ನಾವೆಲ್ಲಾ ಅಧಿಕಾರ ಹಂಚಿಕೆಯ ಬಗ್ಗೆ ಏನನ್ನೂ ಮಾತನಾಡದೆ ಮೌನವಾಗಿದ್ದರೂ ಯತೀಂದ್ರ ಅವರು ನಾಯಕತ್ವ ಬದಲಾವಣೆ ಇಲ್ಲ ಎಂದು ಮುಖ್ಯಮಂತ್ರಿ ಪುತ್ರ ಯತೀಂದ್ರ ಸಿದ್ದರಾಮಯ್ಯ ಪದೇ ಪದೇ ಪುನರುಚ್ಚರಿಸುತ್ತಿರುವ ಬಗ್ಗೆ ಚರ್ಚೆ ನಡೆಸಿ ಈ ಹೇಳಿಕೆಗ ಕಡಿವಾಣ ಹಾಕುವ ಸಂಬಂಧ ಹೈಕಮಾಂಡ್ ನಾಯಕರೊಂದಿಗೂ ಚರ್ಚಿಸಲು ತೀರ್ಮಾನಿಸಿದ್ದಾರೆ ಎನ್ನಲಾಗಿದೆ.

ಅಧಿವೇಶನ ಮುಗಿದ ನಂತರ ದೆಹಲಿಗೆ ತೆರಳುತ್ತೇನೆ. ವರಿಷ್ಠರೊಂದಿಗೆ ಎಲ್ಲವನ್ನು ಚರ್ಚಿಸುತ್ತೇನೆ ಅಲ್ಲಿಯವರೆಗೂ ಯಾರೂ ಏನನ್ನೂ ಮಾತನಾಡಬೇಡಿ, ಯಾರ ಹೇಳಿಕೆಗೂ ಉತ್ತರ ಕೊಡುವ ಕೆಲಸ ಬೇಡ ಎಂದು ತಮ್ಮ ಆಪ್ತ ಶಾಸಕರಿಗೆ ಹೇಳಿದ್ದಾರೆ ಎಂದು ಹೇಳಲಾಗಿದೆ.

ನಾನು ದೆಹಲಿಗೆ ಹೋಗುತ್ತೇನೆ ಎಂದು ನಿಮಗೆ ಹೇಳಿದವರು ಯಾರು ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಮಾಧ್ಯಮಗಳ ವಿರುದ್ಧ ಗರಂ ಆದರು.

ವಿಧಾನಮಂಡಲದ ಅಧಿವೇಶನ ಮುಗಿದ ನಂತರ ಮುಖ್ಯಮಂತ್ರಿಗಳು ದೆಹಲಿಗೆ ಹೋಗುತ್ತಾರೆ ಎಂಬ ಬಗ್ಗೆ ಮಾಧ್ಯಮಗಳು ಕೇಳಿದ ಪ್ರಶ್ನೆಗೆ ಸಿಟ್ಟಾದರು.

# 2027 ರ ಜನಗಣತಿಗಾಗಿ 11,718 ಕೋಟಿ ರೂ. ಬಜೆಟ್; ಕೇಂದ್ರ ಸಚಿವ ಸಂಪುಟ ಅನುಮೋದನೆ

**ನವದೆಹಲಿ:** ಕೇಂದ್ರ ಸಚಿವ ಸಂಪುಟ ಶುಕ್ರವಾರ 2027 ರಲ್ಲಿ ಜನಗಣತಿ ನಡೆಸಲು 11,718 ಕೋಟಿ ರೂ.ಗಳ ಬಜೆಟ್ ಅನ್ನು (ಅನುಮೋದಿಸಿದೆ. ಈ ಕುರಿತು ಮಾಹಿತಿ ನೀಡಿದ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್, ದಶಕದ ವಾರ್ಷಿಕ ಜನಗಣತಿ ಕಾರ್ಯದ ಮಹತ್ವವನ್ನು ಒತ್ತಿ ಹೇಳಿದರು, ಜನಗಣತಿಯನ್ನು "ಭಾರತಕ್ಕೆ ಒಂದು ಪ್ರಮುಖ ಕಾರ್ಯ" ಎಂದು ಹೇಳಿದ್ದಾರೆ. ದೇಶಾದ್ಯಂತ ಕೊನೆಯ ಜನಗಣತಿಯನ್ನು 2011 ರಲ್ಲಿ ನಡೆಸಲಾಯಿತು. 2021 ರಲ್ಲಿ ಜನಗಣತಿಗೆ ನಿರ್ಧಾರಿಸಲಾಗಿತ್ತು. ಆದರೆ ಕೋವಿಡ್ 19 ರ ಕಾರಣ ಮುಂದೂಡಲಾಗಿತ್ತು.

ಮುಂದಿನ ಜನಗಣತಿಯನ್ನು 2027 ರಲ್ಲಿ ನಡೆಸಲಾಗುವುದು ಎಂದು ಸರ್ಕಾರ ಈಗ ದೃಢಪಡಿಸಿದೆ. ಎರಡು ಹಂತದಲ್ಲಿ ಜನಗಣತಿ ನಡೆಸಲಾಗುತ್ತದೆ. ಮೊದಲ ಹಂತದಲ್ಲಿ ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ಸರ್ಕಾರಗಳ ಅನುಕೂಲಕ್ಕೆ ಅನುಗುಣವಾಗಿ 30 ದಿನಗಳ ಅವಧಿಯಲ್ಲಿ, ಏಪ್ರಿಲ್ ನಿಂದ ಸೆಪ್ಟೆಂಬರ್ 2026 ರವರೆಗೆ ಮನೆ ಪಟ್ಟಿ ಮತ್ತು ವಸತಿ ಗಣತಿ ನಡೆಸಲಾಗುತ್ತದೆ. ಜನಸಂಖ್ಯಾ ಗಣತಿ ಫೆಬ್ರವರಿ 2027 ರಲ್ಲಿ ನಡೆಯಲಿದೆ (ಹಿಮದಿಂದ ಆವೃತವಾದ ಪ್ರದೇಶಗಳಲ್ಲಿ ನಡೆಯಲಿದೆ.



ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ವೈಷ್ಣವ್, 2027 ರ ಭಾರತದ ಜನಗಣತಿಯನ್ನು ನಡೆಸಲು 11,718.24 ಕೋಟಿ ರೂ.ಗಳನ್ನು ಸಂಪುಟ ಅನುಮೋದಿಸಿದೆ ಎಂದು ಹೇಳಿದರು. ಇದು ವಿಶ್ವದ ಅತಿದೊಡ್ಡ ಆಡಳಿತಾತ್ಮಕ ಮತ್ತು ಸಂಖ್ಯಾಶಾಸ್ತ್ರೀಯ ವ್ಯಾಯಾಮ ಎಂದು ಬಣ್ಣಿಸಲಾಗಿದೆ. 2027 ರ ಜನಗಣತಿಯು ದೇಶದಲ್ಲಿ 16 ನೇ ಮತ್ತು ಸ್ವಾತಂತ್ರ್ಯದ ನಂತರದ ಎಂಟನೇ ಜನಗಣತಿಯಾಗಲಿದೆ.

2027 ಭಾರತದಲ್ಲಿ ಮೊಟ್ಟಮೊದಲ ಡಿಜಿಟಲ್ ಜನಗಣತಿಯಾಗಲಿದೆ ಎಂದು ವೈಷ್ಣವ್ ಹೇಳಿದರು. ಆಂಡ್ರಾಯ್ಡ್ ಮತ್ತು ಐಒಎಸ್ ಪ್ಲಾಟ್‌ಫಾರ್ಮ್‌ಗಳಿಗೆ ಹೊಂದಿಕೆಯಾಗುವ ಮೊಬೈಲ್ ಅಪ್ಲಿಕೇಶನ್‌ಗಳನ್ನು ಬಳಸಿಕೊಂಡು ಡೇಟಾವನ್ನು ಸಂಗ್ರಹಿಸಲಾಗುತ್ತದೆ, ಆದರೆ ಸಂಪೂರ್ಣ ಪ್ರಕ್ರಿಯೆಯನ್ನು ನೈಜ ಸಮಯದಲ್ಲಿ ನಿರ್ವಹಿಸಲು ಮತ್ತು ಮೇಲ್ವಿಚಾರಣೆ ಮಾಡಲು ಕೇಂದ್ರ ಜನಗಣತಿ ನಿರ್ವಹಣೆ ಮತ್ತು ಮಾನಿಟರಿಂಗ್ ಸಿಸ್ಟಮ್ ಪೋರ್ಟಲ್ ಅನ್ನು ಅಭಿವೃದ್ಧಿಪಡಿಸಲಾಗಿದೆ. ಉತ್ತಮ ಯೋಜನೆ ಮತ್ತು ಮೇಲ್ವಿಚಾರಣೆಗಾಗಿ ಚಾರ್ಜ್ ಅಧಿಕಾರಿಗಳು ಮನೆಪಟ್ಟಿ ಬ್ಲಾಕ್ ಕ್ರಿಯೇಟರ್ ವೆಬ್ ಮ್ಯಾಪ್ ಅಪ್ಲಿಕೇಶನ್ ಅನ್ನು ಸಹ ಬಳಸುತ್ತಾರೆ.

## ಬ್ರಿಟಿಷ್ ವಸ್ತು ಸಂಗ್ರಹಾಲಯದಿಂದ ಕಳವಾಯಿತು ಬೆಲೆಬಾಳುವ ಭಾರತೀಯ ಕಲಾಕೃತಿಗಳು



**ಬ್ರಿಸ್ಟಲ್:** ಯುಕೆಯ ವಸ್ತು ಸಂಗ್ರಹಾಲಯದಲ್ಲಿದ್ದ ದುಬಾರಿ ಮೌಲ್ಯದ ಸುಮಾರು 600ಕ್ಕೂ ಹೆಚ್ಚು ಭಾರತೀಯ ಕಲಾಕೃತಿಗಳನ್ನು ಕಳವು ಮಾಡಲಾಗಿದೆ. ಬ್ರಿಟಿಷ್ ಸಾಮ್ರಾಜ್ಯ ಮತ್ತು ಕಾಮನ್‌ವೆಲ್ತ್ ಸಂಗ್ರಹದಿಂದ ಈ ವಸ್ತುಗಳನ್ನು ಕಳವು ಮಾಡಲಾಗಿದ್ದು, ಇದರಿಂದ ನಗರಕ್ಕೆ ಅಪಾರ ಪ್ರಮಾಣದ ನಷ್ಟವಾಗಿದೆ. ಕಳೆದ ಸೆಪ್ಟೆಂಬರ್ 25 ರಂದು ರಾತ್ರಿ 1 ರಿಂದ 2 ಗಂಟೆಯ ನಡುವೆ ಈ ವಸ್ತುಗಳನ್ನು ಕಳವು ಮಾಡಲಾಗಿದ್ದು, ಇದೀಗ ಪೊಲೀಸರು ಆರೋಪಿಗಳ ಪತ್ತೆಗೆ ಸಿಸಿಟಿವಿ ದಾಖಲೆಗಳನ್ನು ಬಿಡುಗಡೆ ಮಾಡಿದ್ದಾರೆ.

ಬ್ರಿಸ್ಟಲ್‌ನ ಬ್ರಿಟಿಷ್ ಸಾಮ್ರಾಜ್ಯ ಮತ್ತು ಕಾಮನ್‌ವೆಲ್ತ್ ವಸ್ತು ಸಂಗ್ರಹಾಲಯದಿಂದ ಸೆಪ್ಟೆಂಬರ್ 25 ರಂದು ರಾತ್ರಿ 600ಕ್ಕೂ ಹೆಚ್ಚು ಭಾರತೀಯ ಕಲಾಕೃತಿಗಳು ಕಳವಾಗಿವೆ. ಇದರಲ್ಲಿ ಬ್ರಿಟಿಷ್ ವಸಾಹತುಶಾಹಿ ಯುಗದ ಭಾರತದ ಹಲವಾರು ಕಲಾಕೃತಿಗಳು ಸೇರಿವೆ.

ಈ ಕುರಿತು ಶಂಕಿತರ ಚಿತ್ರ ಬಿಡುಗಡೆ ಮಾಡಿರುವ ಏವನ್ ಮತ್ತು ಸೋಮರ್‌ಸೆಟ್ ಪೊಲೀಸರು, ಈ ಘಟನೆ ಸೆಪ್ಟೆಂಬರ್ 25ರಂದು ಮುಂಜಾನೆ ನಡೆದಿದ್ದು, ಘಟನೆಯಲ್ಲಿ ನಾಲ್ವರು ಭಾಗಿಯಾಗಿದ್ದರು. ಶಂಕಿತರ ಚಿತ್ರಗಳನ್ನು ಬಿಡುಗಡೆ ಮಾಡಿದ್ದಾರೆ. ಆರೋಪಿಗಳನ್ನು ಗುರುತಿಸಲು ಸಾರ್ವಜನಿಕರು ಸಹಾಯ ಮಾಡುವಂತೆ ಅವರು ಮನವಿ ಮಾಡಿದ್ದಾರೆ.

ಶಂಕಿತರ ಕುರಿತು ಹೆಚ್ಚಿನ ವಿವರಣೆಯನ್ನು ನೀಡಿರುವ ಪೊಲೀಸರು ಒಬ್ಬ ವ್ಯಕ್ತಿ ಸಾಧಾರಣ ಮೈಕಟ್ಟು, ಬಿಳಿ ಕ್ಯಾಪ್, ಕಪ್ಪು ಜಾಕೆಟ್, ತಿಳಿ ಬಣ್ಣದ ಪ್ಯಾಂಟ್ ಧರಿಸಿದ್ದು, ಇನ್ನೋರ್ವ ತೆಳ್ಳಗಿನ ಮೈಕಟ್ಟು, ಬೂದು ಬಣ್ಣದ ಜಾಕೆಟ್, ಕಪ್ಪು ಪ್ಯಾಂಟ್, ಮತ್ತೊಬ್ಬ ಹಸಿರು ಕ್ಯಾಪ್, ಕಪ್ಪು ಜಾಕೆಟ್, ತಿಳಿ ಬಣ್ಣದ ಶಾರ್ಟ್ಸ್ ಧರಿಸಿದ್ದು ಬಲಗಾಲು ಕುಂಟುತ್ತಾನೆ. ಮತ್ತೋರ್ವ ದೃಢಕಾಯವನ್ನು ಹೊಂದಿದ್ದು, ಎರಡು ಬಣ್ಣ ಮಿಶ್ರಿತ ಜಾಕೆಟ್, ಕಪ್ಪು ಪ್ಯಾಂಟ್ ಧರಿಸಿದ್ದನು.

ಕಾಲ ಬದಲಾದರೂ ಮೂಢನಂಬಿಕೆ ಬದಲಾಗಿಲ್ಲ; ಕೋಟ್ಯಾಧಿಪತಿಯಾಗುವ ದುರಾಸೆಯಿಂದ ಮಂತ್ರವಾದಿಯ ಮೊರೆ ಹೋಗಿ ಪ್ರಾಣ ಕಳೆದುಕೊಂಡ ಮೂವರು!

ಇವರು ಕದ್ದಿರುವ ವಸ್ತುಗಳಲ್ಲಿ ದಂತದ ಬುದ್ಧ, ಸೊಂಟದ ಬೆಲ್ಟ್ ಬಕಲ್ ಸೇರಿವೆ. ಇದರಿಂದ ನಗರಕ್ಕೆ ಅಪಾರ ನಷ್ಟವಾಗಿದೆ. ಇದರಲ್ಲಿ ಹೆಚ್ಚಿನ ವಸ್ತುಗಳು ಉಡುಗೊರೆಯಾಗಿ ಬಂದಿತ್ತು. ಇವು ಬ್ರಿಟಿಷ್ ಇತಿಹಾಸದ ಭಾಗವಾಗಿದೆ. ಪ್ರಕರಣಕ್ಕೆ ಸಂಬಂಧಿಸಿ ಹಲವಾರು ಮಂದಿಯನ್ನು ವಿಚಾರಣೆ ನಡೆಸಲಾಗಿದೆ.

## ಸಂಸತ್ತಿನಲ್ಲಿಯೇ ಸಿಗರೇಟ್ ಸೇದಿದ ಟಿಎಂಸಿ ಸಂಸದ ಸೌಗತ ರಾಯ್




**ನವದೆಹಲಿ:** ರಾಷ್ಟ್ರ ರಾಜಧಾನಿಯಲ್ಲಿ ಚಳಿಗಾಲದ ಅಧಿವೇಶನ ನಡೆಯುತ್ತಿದೆ. ಲೋಕಸಭೆಯಲ್ಲಿ ಇ–ಸಿಗರೇಟ್ ಬಳಕೆಯ ಬಗ್ಗೆ ತೀವ್ರ ಚರ್ಚೆಯ ನಡುವೆಯೇ, ತೃಣಮೂಲ ಕಾಂಗ್ರೆಸ್ (ಟಿಎಂಸಿ) ಸಂಸದ ಸೌಗತ ರಾಯ್ ಸಂಸತ್ತಿನ ಹೊರಗೆ ಸಿಗರೇಟ್ ಸೇದುತ್ತಿರುವುದು ಕಂಡುಬಂದಿದ್ದು ಭಾರೀ ವಿವಾದಕ್ಕೆ ಕಾರಣವಾಗಿದೆ. ಸದನದಲ್ಲಿ ಸಂಸದ ಗಿರಿರಾಜ್ ಸಿಂಗ್ ಮತ್ತು ಗಜೇಂದ್ರ ಸಿಂಗ್ ಶೇಖಾವತ್ ಅವರು ಸಾರ್ವಜನಿಕ ಆರೋಗ್ಯ ಮತ್ತು ಸದನದ ಘನತೆಯ ಬಗ್ಗೆ ಮಾತನಾಡುತ್ತಾ, "ನೀವು ಸಾರ್ವಜನಿಕ ಆರೋಗ್ಯಕ್ಕೆ ಅಪಾಯವನ್ನುಂಟು ಮಾಡುತ್ತಿದ್ದೀರಿ ದಾದಾ" ಎಂದು ನೇರವಾಗಿ ಸಂಸದನ ವಿರುದ್ಧ ವಾಗ್ದಾಳಿ ಮಾಡಿದ್ದಾರೆ.

ಬಳಿಕ ಬಿಜೆಪಿ ಸಂಸದ ಅನುರಾಗ್ ಠಾಕೂರ್ ಮಾತನಾಡಿ, 2019ರಲ್ಲಿ ಇ–ಸಿಗರೇಟ್‌ಗಳನ್ನು ನಿಷೇಧಿಸಲಾಗಿದ್ದು, ಸಂಸದರು ಸದನದೊಳಗೆ ಇ–ಸಿಗರೇಟ್ ಸೇದಿದರೆ ಅದು ಸದನಕ್ಕೆ ಗೌರವಕ್ಕೆ ಧಕ್ಕೆಯನ್ನುಂಟು ಮಾಡುತ್ತದೆ. ಇದು ದುರದೃಷ್ಟಕರ ಘಟನೆ. ಅವರು ಸದನವನ್ನು ಎಷ್ಟು ಗೌರವಿಸುತ್ತಾರೆ ಎಂದು ತೋರಿಸುತ್ತದೆ ಎಂದು ಹೇಳಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿದ ಸಿಗರೇಟ್ ಸೇದಿದ್ದ ಟಿಎಂಸಿ ಸಂಸದ ಸೌಗತ್ ರಾಯ್, "ನಾನು ಅದರ ಬಗ್ಗೆ ಏನೂ ಹೇಳಲಾರೆ, ಏಕೆಂದರೆ ನಾನು ಸದನದಲ್ಲಿರಲಿಲ್ಲ. ಯಾರು ಧೂಮಪಾನ ಮಾಡಿದ್ದಾರೆ ಮತ್ತು ದೂರು ನೀಡಿದ್ದಾರೆ ಎಂಬುದು ನನಗೆ ತಿಳಿದಿಲ್ಲ. ಸದನದ ನಿಯಮಗಳ ಉಲ್ಲಂಘನೆಯಾಗಿದ್ದರೆ ವಿಚಾರಣೆ ನಡೆಸಿ ಕ್ರಮ ಕೈಗೊಳ್ಳಬೇಕು ಅದು ಸ್ಪೀಕರ್ ಅವರಿಗೆ ಬಿಟ್ಟ ವಿಚಾರ. ಇದಕ್ಕೆ ರಾಜಕೀಯ ಲೇಪನ ಬಳಿಯುವುದು ಬೇಡ," ಎಂದಿದ್ದಾರೆ.

ಮಾಧ್ಯಮದವರೊಂದಿಗೆ ಮಾತನಾಡಿದ ಅವರು, "ನಾವು ಸದನದ ಹೊರಗಡೆ ಇ–ಸಿಗರೇಟ್ ಸೇದಬಹುದು. ನಾವು ಕಟ್ಟಡದ ಒಳಗೆ ಧೂಮಪಾನ ಮಾಡುವಂತಿಲ್ಲ. ಆದರೆ, ಹೊರಗೆ ಮಾಡಬಹುದು ಎಂದು ಹೇಳಿದ್ದಾರೆ.

ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ಸಂಸದ ಗಜೇಂದ್ರ ಸಿಂಗ್ ಶೇಖಾವತ್ "ಒಬ್ಬ ಜವಾಬ್ದಾರಿಯುತ ಸಂಸತ್ ಸದಸ್ಯನಾಗಿ, ಅವರು ಈ ರೀತಿಯ ನಡವಳಿಕೆ ಮತ್ತು ನಡವಳಿಕೆಯ ಮೂಲಕ ಈ ದೇಶದ ಜನರಿಗೆ ಯಾವ ರೀತಿಯ ಸಂದೇಶವನ್ನು ಕಳುಹಿಸುತ್ತಿದ್ದಾರೆ ಎಂಬುದರ ಕುರಿತು ಯೋಚಿಸಬೇಕು. ಅವರ ಕಾರ್ಯಗಳು ದೆಹಲಿಯ ಮಾಲಿನ್ಯವನ್ನು ಹೆಚ್ಚಿಸುತ್ತಿವೆಂ ಅದನ್ನು ಕಡಿಮೆ ಮಾಡಲು ಸಹಾಯ ಮಾಡುತ್ತಿವೆಯೇ ಎಂಬುದನ್ನು ಅವರು ಪರಿಗಣಿಸಬೇಕು" ಎಂದು ಹೇಳಿದರು.

## ಬೆಂಗಳೂರಿನ ರಸ್ತೆ ಬದಿ ಕಸ ಸುರಿಯುವ ವಿಡಿಯೊ ವೈರಲ್ ಆದ ಬೆನ್ನಲ್ಲೇ ಬಿತ್ತು ಫೈನ್



**ಬೆಂಗಳೂರು:** ಕಸ ವಿಲೇವಾರಿ ಬಗ್ಗೆ ಸಾಕಷ್ಟು ಜಾಗೃತಿ ಮೂಡಿಸಿದರೂ ಸಮಸ್ಯೆಯಂತೂ ದಿನದಿಂದ ದಿನಕ್ಕೆ ಏರಿಕೆಯಾಗುತ್ತಲೇ ಇದೆ. ಎಲ್ಲೆಂದರಲ್ಲಿ ಮನ ಬಂದ ಕಡೆ ಕಸ ಸುರಿಯುವ ಅನಾಗರಿಕರ ಸಂಖ್ಯೆಗಂತು ಕಡಿಮೆ ಇಲ್ಲ.. ಅಂತಹುದೇ ಘಟನೆಯೊಂದು ಬೆಂಗಳೂರಿನ ಸರ್ವಜ್ಞನಗರ ವಿಭಾಗದ ವಾರ್ಡ್‌ನಲ್ಲಿ ನಡೆದಿದೆ. ಎಸ್‌ಯುವಿ ವಾಹನವೊಂದರಲ್ಲಿ ಬಂದ ಇಬ್ಬರು ರಸ್ತೆ ಬದಿಯಲ್ಲಿ ಕಸ ಸುರಿಯುತ್ತಿರುವುದು ವಿಡಿಯೊದಲ್ಲಿ ಸೆರೆಯಾಗಿದೆ. ಈ ಸಂಬಂಧ ಅಧಿಕಾರಿಗಳು ವಾಹನ ಮಾಲೀಕರಿಗೆ ದಂಡದ ಬಿಸಿ ಮುಟ್ಟಿಸಿದ್ದಾರೆ. ಕಸ ಎಸೆಯುತ್ತಿದ್ದ ವಿಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಇದನ್ನು ಗಮನಿಸಿದ ಬೆಂಗಳೂರು ಉತ್ತರ ನಗರ ನಿಗಮ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ತಕ್ಷಣ ಕ್ರಮ ಕೈಗೊಳ್ಳಲು ಸೂಚನೆ ನೀಡಿದ್ದಾರೆ. ಆ ಮೂಲಕ ಬಿಸಿ ಮುಟ್ಟಿಸಿದ್ದಾರೆ.

ಇತ್ತೀಚೆಗೆ ನಗರ ಪ್ರದೇಶದಲ್ಲಿ ಎಲ್ಲೆಂದರಲ್ಲಿ ಕಸ ಹಾಕುತ್ತಿರುವ ಪ್ರಮಾಣ ಹೆಚ್ಚಾಗಿದೆ. ಅದರಲ್ಲೂ ಬೆಂಗಳೂರಿನಲ್ಲಿ ಎಷ್ಟೇ ಎಚ್ಚರಿಕೆ ನೀಡಿದರೂ ತ್ಯಾಜ್ಯ ನಿರ್ವಹಣೆಯಲ್ಲಿ ಉಲ್ಲಂಘನೆ ನಡೆಯುತ್ತಲೇ ಇದೆ. ಇದೀಗ ಬೆಂಗಳೂರು ನಗರದ ಸರ್ವಜ್ಞನಗರ ವಿಭಾಗದ ರಸ್ತೆಯಲ್ಲಿ ಇಬ್ಬರು ಕಸವನ್ನು ಎಸೆದು ಹೋಗಿರುವ ಘಟನೆ ಬೆಳಕಿಗೆ ಬಂದಿದೆ. ಈ ವಿಚಾರ ತಿಳಿದ ಅಧಿಕಾರಿಗಳು ವಾಹನ ಮಾಲೀಕರಿಗೆ ಐದು ಸಾವಿರ ರೂಪಾಯಿ ದಂಡ ವಿಧಿಸಿದ್ದಾರೆ. ಸಾರ್ವಜನಿಕವಾಗಿ ಕಸ ಬೀಸಾಕುವುದು ಶಿಕ್ಷಾರ್ಹ ಅಪರಾಧವಾಗಿದ್ದರೂ, ಸರ್ವಜ್ಞನಗರ ವಿಭಾಗದ ವಾರ್ಡ್ 29ರಲ್ಲಿ ರಸ್ತೆಗೆ ಕಸ ಎಸೆದಿದ್ದಾರೆ. ಈ ವಿಡಿಯೊ ವೈರಲ್ ಆದ ಕೂಡಲೇ ಬೆಂಗಳೂರು ಉತ್ತರ ನಗರ ಪಾಲಿಕೆ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ತಮ್ಮ ತಂಡಕ್ಕೆ ತ್ವರಿತ ಕ್ರಮ ಕೈಗೊಳ್ಳುವಂತೆ ಆದೇಶ ನೀಡಿದ್ದಾರೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**